RNI .KAR/KAN/2009/31934 ಬೆಂಗಳೂರು ಸಂಪುಟ: 16 ಸಂಚಿಕೆ: 99 ಪುಟ: 06 ಶುಕ್ರವಾರ 14–03–2025

Mail:mussanje2010@gmail.com www.mussanjenews.com

# ಮುಸ್ಸಂಜೆ


ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB)

Executive Editor: L P Babu

ಬೆಂಗಳೂರು | ಬೆಂ.ಗ್ರಾಮಾಂತರ ತುಮಕೂರು ಚಿತ್ರದುರ್ಗ ಮೈಸೂರು ಮಂಡ್ಯ ರಾಮನಗರ ಚಾ.ನಗರ ಹಾಸನ ಚಿಕ್ಕಬಳ್ಳಾಪುರ ಕೋಲಾರ

Honourary Editor: Venkatesh



ಸಾರ್ವಜನಿಕವಾಗಿ ಕಾಣಿಸಿಕೊಂಡು ಭಾವುಕಳಾದ ಧನಶ್ರೀ

RRR ಬ್ಯೂಟಿಗೆ ಗೋಲ್ಡನ್ ಚಾನ್ಸ್!

ನಿರ್ದೇಶಕ ಅಟ್ಲಿಗೆ ಪದೇಪದೇ ವಿಘ್ನ ಪುಟ 6

# ವಿವಿ: ವರದಿ ಆಧರಿಸಿ ತೀರ್ಮಾನ

## ವಿಶ್ವವಿದ್ಯಾನಿಲಯಗಳನ್ನು ಮುಚ್ಚಲೇಬೇಕೆಂಬುದು ಸರ್ಕಾರ ನಿಲುವೇನೂ ಅಲ್ಲ: ಸಿಎಂ

ಬೆಂಗಳೂರು: ರಾಜ್ಯದಲ್ಲಿನ ಏಳು ನೂತನ ವಿಶ್ವವಿದ್ಯಾನಿಲಯಗಳನ್ನು ಮುಚ್ಚುವ ಸಂಬಂಧ ಸರ್ಕಾರ ಯಾವುದೇ ನಿರ್ಧಾರ ಕೈಗೊಂಡಿಲ್ಲ. ಮುಚ್ಚಲೇ ಬೇಕು ಎಂಬುದು ಸರ್ಕಾರದ ನಿಲುವೇನು ಅಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರ ವಿಧಾನಸಭೆಯಲ್ಲಿ ತಿಳಿಸಿದ್ದಾರೆ.

ಪ್ರತಿಪಕ್ಷ ಬಿಜೆಪಿ ಪ್ರಸ್ತಾಪಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಉತ್ತರ ನೀಡಿದ ಸಿಎಂ, ವಿಶ್ವ ವಿದ್ಯಾಲಯಗಳನ್ನು ಮುಚ್ಚುವ ಬಗ್ಗೆ ತೀರ್ಮಾನ ಆಗಿಲ್ಲ. ಕ್ಯಾಬಿನೆಟ್ ಉಪ ಸಮಿತಿ ವರದಿಯೇ ಇನ್ನೂ ಬಂದಿಲ್ಲ. ಹೀಗಿರುವಾಗ ಅಪಾದನೆ ಸರಿಯಲ್ಲ ಎಂದು ಹೇಳಿದರು.

ಈ ವಿಷಯಕ್ಕೆ ಸಂಬಂಧಿಸಿದಂತೆ ಸಂಪುಟ ಉಪ ಸಮಿತಿ ರಚಿಸಲಾಗಿದೆ. ಸಮಿತಿ ಇನ್ನೂ ವರದಿಯನ್ನೇ ಕೊಟ್ಟಿಲ್ಲ ವರದಿ ಬಂದ ನಂತರ ಮುಚ್ಚಬೇಕೋ? ಬೇಡವೋ ಎಂಬುದರ ಬಗ್ಗೆ ತೀರ್ಮಾನ ಕೈಗೊಳ್ಳಲಾಗವುದು ಎಂದರು.

ವರದಿ ಬರುವ ಮೊದಲೇ ಬಿಜೆಪಿಗೆ ಆತಂಕ ಏಕೆ ಎಂದು ಸಿದ್ದರಾಮಯ್ಯ ಅವರು ಪ್ರತಿಪಕ್ಷಗಳನ್ನು ಪ್ರಶ್ನಿಸಿದರು.

ಉಪ ಮುಖ್ಯಮಂತ್ರಿ ಅವರ ಅಧ್ಯಕ್ಷತೆಯಲ್ಲಿ ಕೂಲಂಕುಷ ಪರಿಶೀಲನೆಗೆ ಉಪ ಸಮಿತಿ ರಚಿಸಲಾಗಿದೆ. ಸಮಿತಿ



ವರದಿ ಕೊಡುವುದು ಬಾಕಿ ಇದೆ. ವರದಿ ಬರುತ್ತಿದ್ದಂತೆ ಅದನ್ನು ಕ್ಯಾಬಿನೆಟ್ ಮುಂದೆ ಇಟ್ಟು ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದರು.

ವರದಿ ಬರುವ ಮೊದಲೇ ವಿವಿಗಳನ್ನು ಮುಚ್ಚುತ್ತೇವೆ ಎನ್ನುವುದು ಸರಿಯಲ್ಲ. ಇಂತಹ ತೀರ್ಮಾನ ನಮ್ಮಿಂದ ಆಗಿಲ್ಲ ಎಂದು ಸಿಎಂ ಸ್ಪಷ್ಟಪಡಿಸಿದರು.


ಈ ವೇಳೆ ಮಾತನಾಡಿದ ಪ್ರತಿಪಕ್ಷ ನಾಯಕ ಆರ್. ಅಶೋಕ್, ಈ ವಿಷಯದಲ್ಲಿ ಸರ್ಕಾರವೇ ಗೊಂದಲದಲ್ಲಿದೆ. ನೀವೊಂದು ಹೇಳುತ್ತೀರಿ, ನಿಮ್ಮ ಉಪಮುಖ್ಯಮಂತ್ರಿ ಒಂದೇಳುತ್ತಾರೆ. ಮೊದಲು ಗೊಂದಲಕ್ಕೆ ಸ್ಪಷ್ಟತೆ ನೀಡಿ ಎಂದು ಕುಟುಕಿದರು.

ನೀವು ಪರಿಶೀಲನೆಉಯಲ್ಲಿದೆ ಎಂದು ಹೇಳುತ್ತೀರಿ ಆದರೆ, ಡಿ.ಕೆ.ಶಿವಕುಮಾರ್ ಈಗಾಗಲೇ ಮುಚ್ಚಲು ತೀರ್ಮಾನವಾಗಿದೆ ಎಂದು ಹೇಳುತ್ತಿದ್ದಾರೆ. ವಿಶ್ವವಿದ್ಯಾನಿಲಯುಗಳನ್ನು ಮುಚ್ಚುವುದು ವಿದ್ಯಾರ್ಥಿಗಳ ಭವಿಷ್ಯ ದೃಷ್ಟಿಯಿಂದ ಸೂಕ್ತವಲ್ಲ ಎಂದು ಹೇಳಿದರು.

ಈ ವಿಷಯವಾಗಿ ಸದನದಲ್ಲಿ ಸುದೀರ್ಘ ಚರ್ಚಿಸಲು ಅವಕಾಶ ಮಾಡಿಕೊಡಿ ಎಂದು ಸಭಾಧ್ಯಕ್ಷರಲ್ಲಿ ಮನವಿ ಮಾಡಿಕೊಂಡರು. ಈ ವೇಳೆ ಮತ್ತೆ ಮಧ್ಯ ಪ್ರವೇಶಿಸಿದ ಸಿಎಂ, ಕಮಿಟಿವರದಿ ಬಂದ ನಂತರ ನಿಮಗೆ ಈ ಸಂಬಂಧ ಪೂರ್ಣ ಮಾಹಿತಿ ನೀಡಲಾಗುವುದು ಎಂದು ಹೇಳುವ ಮೂಲಕ ವಿಷಯಕ್ಕೆ ತೆರೆ ಎಳೆದರು.

2022–23ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಕಾಲೇಜುಗಳ ಮೇಲ್ವಿಚಾರಣೆಯನ್ನು ಸುಧಾರಿಸಲು ರಾಜ್ಯದ ಶೈಕ್ಷಣಿಕವಾಗಿ ಹಿಂದುಳಿದ ಪ್ರದೇಶದಲ್ಲಿ ಪುಟ 2

## ಪೋಕ್ಸೋ: ಬಿಎಸ್‌ವೈ ನಿರಾಳ



**ಬೆಂಗಳೂರು:** ಪೋಕ್ಸೋ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಿಎಂ ಯಡಿಯೂರಪ್ಪಗೆ ಕಾಗ್ನಿಜೆನ್ಸ್, ಸಮನ್ಸ್ ಆದೇಶಕ್ಕೆ ಹೈಕೋರ್ಟ್ ತಡೆ ನೀಡಿದೆ.

ಪೋಕ್ಸೋ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಅವರಿಗೆ ಮಾರ್ಚ್ 15 ರಂದು ಖುದ್ದು ಹಾಜರಾಗುವಂತೆ ಬೆಂಗಳೂರಿನ 1 ನೇ ತ್ವರಿತಗತಿ ನ್ಯಾಯಾಲಯ ಸಮನ್ಸ್ ನೀಡಿತ್ತು. ಈ ಸಮನ್ಸ್ ರದ್ದುಗೊಳಿಸುವಂತೆ ಕೋರಿ ಬಿಎಸ್ ಯಡಿಯೂರಪ್ಪ ಹೈಕೋರ್ಟ್ ಮೊರೆ ಹೋಗಿದ್ದರು.

ಶುಕ್ರವಾರ ನ್ಯಾಯಮೂರ್ತಿ ಪ್ರದೀಪ್ ಸಿಂಗ್ ಯೆರೂರ್ ಪೀಠದಲ್ಲಿ ಈ ಅರ್ಜಿ ವಿಚಾರಣೆ ನಡೆಯಿತು.ಮಾಜಿ ಸಿಎಂ ಬಿಎಸ್‌ವೈ ಪರ ಹಿರಿಯ ವಕೀಲ ಸಿ.ವಿ ನಾಗೇಶ್ ವಾದ ಮಂಡಿಸಿದರು.

ಈ ವೇಳೆ ಹೈಕೋರ್ಟ್ ನ್ಯಾಯಪೀಠವು ಕಾಗ್ನಿಜೆನ್ಸ್, ಸಮನ್ಸ್ ಆದೇಶಕ್ಕೆ ತಡೆ ನೀಡಿದ್ದು, ಖುದ್ದು ಹಾಜರಾತಿಗೂ ವಿನಾಯಿತಿ ನೀಡಿದೆ.

ಅಪ್ರಾಪ್ತೆ ಮೇಲಿನ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದಡಿ ತಮ್ಮ ವಿರುದ್ಧ ದಾಖಲಾಗಿರುವ ಪ್ರಕರಣ ಸಂಬಂಧ ಸಿಐಡಿ ಪೊಲೀಸರು ಸಲ್ಲಿಸಿರುವ ಆರೋಪ ಪಟ್ಟಿಯ ಆಧಾರದ ಮೇಲೆ ಸಂಜ್ಞೆ ಪರಿಗಣಿಸಿ (ಕಾಗ್ನಿಜೆನ್ಸ್) ಜಾರಿಗೊಳಿಸಿರುವ ಸಮನ್ಸ್ ರದ್ದುಪಡಿಸುವಂತೆ ಕೋರಿ ಮಾಜಿ ಮುಖ್ಯಮಂತ್ರಿ ಬಿ ಎಸ್ ಯಡಿಯೂರಪ್ಪ ಅವರು ಪುಟ 2



ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಜಾತ್ರಾ ಮಹೋತ್ಸವ – 2025 ಶುಕ್ರವಾರ ಬ್ರಾಹ್ಮೀ ಮುಹೂರ್ತದಲ್ಲಿ ಶ್ರೀ ಗಂಗಾಧರೇಶ್ವರಸ್ವಾಮಿ ಮಹಾರಥೋತ್ಸವ ಹಾಗೂ ಪರಮಪೂಜ್ಯ ಜಗದ್ಗುರು ಶ್ರೀ ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿಯವರ ಅಡ್ಡಪಾಲಕಿ ಉತ್ಸವ ಲಕ್ಷಾಂತರ ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನೆರವೇರಿತು.

## ವಿಕಲಚೇತನರಿಗೆ ಒಂದು ಲಕ್ಷದವರೆಗೂ ವೈದ್ಯಕೀಯ ಪರಿಹಾರ



**ಬೆಂಗಳೂರು:** ರಾಜ್ಯದಲ್ಲಿ ವಿಕಲಚೇತನರಿಗೆ ಸರ್ಕಾರದಿಂದ ಅಂಗವಿಕಲತೆ ನಿವಾರಣಾ ವೈದ್ಯಕೀಯ ಪರಿಹಾರ ನಿಧಿ ಯೋಜನೆ, ನಿರಾಮಯ ಆರೋಗ್ಯ ವಿಮಾ ಯೋಜನೆ ಹಾಗೂ ಕಾಕ್ಲಿಯರ್ ಇಂಪ್ಲಾಂಟ್ ಯೋಜನೆಗಳು ಜಾರಿಯಲ್ಲಿವೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದ್ದಾರೆ.

ಶುಕ್ರವಾರ ವಿಧಾನಪರಿಷತ್ ಕಲಾಪದಲ್ಲಿ ವೈ. ಎಂ.ಸತೀಶ್ ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, ವಿಕಲಚೇತನರಿಗಾಗಿ ಪ್ರಮುಖ ಮೂರು ಯೋಜನೆಗಳನ್ನು ಜಾರಿಗೆ ತರಲಾಗಿದೆ ಎಂದರು.

ಅಂಗವಿಕಲತೆ ನಿವಾರಣಾ ವೈದ್ಯಕೀಯ ಪರಿಹಾರ ನಿಧಿ ಯೋಜನೆಯಡಿ ಶಸ್ತ್ರಚಿಕಿತ್ಸೆಯ ಮುಖಾಂತರ ವಿಕಲಚೇತನತೆಯನ್ನು ನಿವಾರಣೆ ಮಾಡಿಕೊಳ್ಳಲು ಅಥವಾ ಕಡಿಮೆ ಮಾಡಿಕೊಳ್ಳಲು ಎಲ್ಲಾ ಸರ್ಕಾರಿ ಆಸ್ಪತ್ರೆಗಳು ಅಥವಾ ಕರ್ನಾಟಕದ ಸುಸಜ್ಜಿತ ಖಾಸಗಿ ಆಸ್ಪತ್ರೆಗಳಲ್ಲಿ ಶಸ್ತ್ರಚಿಕಿತ್ಸೆ ಮಾಡಿಸಿಕೊಳ್ಳಲು 1 ಲಕ್ಷ ರೂಪಾಯಿ ವರೆಗೆ ಸಹಾಯ ಧನ ಮಂಜೂರು ಮಾಡಲಾಗುತ್ತಿದೆ ಎಂದು ಹೇಳಿದರು.

ಪ್ರಸ್ತುತ ರಾಜ್ಯದಲ್ಲಿ ನ್ಯಾಷನಲ್ ಟ್ರಸ್ಟ್ ಆಕ್ಟ್ ಅಡಿಯಲ್ಲಿ ನಿರಾಮಯ ಆರೋಗ್ಯ ವಿಮಾ ಯೋಜನೆಯನ್ನು ಜಾರಿಗೆ ತಂದಿದ್ದು, ಬಡತನ ರೇಖೆಗಿಂತ ಕೆಳಗಿರುವ ಕುಟುಂಬದ ವಿಕಲಚೇತನ ವ್ಯಕ್ತಿ ಒಂದು ಬಾರಿ ವಾರ್ಷಿಕ 250 ರೂಪಾಯಿಗಳನ್ನು ಸರ್ಕಾರದಿಂದ ವಿಮಾ ಕಂತಾಗಿ ಪಾವತಿಸಿ ಪ್ರತಿವರ್ಷ ಒಂದು ಲಕ್ಷಗಳವರೆಗೆ ಉಚಿತವಾಗಿ ವೈದ್ಯಕಕೀಯ ಸೌಲಭ್ಯ ಪಡೆಯಬಹುದು ಎಂದರು.ಇನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಪುಟ 2

## ಮೆಟ್ರೋದಲ್ಲಿ ಹೋಳಿ ಆಚರಣೆಗೆ ನಿರ್ಬಂಧ



**ಬೆಂಗಳೂರು:** ನಾಡಿನೆಲ್ಲಡೆ ಹೋಳಿ ಹಬ್ಬದ ಶುಕ್ರವಾರ ಸಂಭ್ರಮವಾಗಿದ್ದು, ಈ ಹಿನ್ನೆಲೆಯಲ್ಲಿ ಟ್ವಿಟ್ ಮೂಲಕ ಹೋಳಿಹಬ್ಬದ ಶುಭಕೋರಿದ ಬಿಎಂಆರ್ ಸಿಎಲ್, ಮೆಟ್ರೋ ರೈಲಿನಲ್ಲಿ ಬಣ್ಣಗಳನ್ನ ತೆಗೆದುಕೊಂಡು ಹೋಗಲು ನಿರ್ಬಂಧಿಸಿದೆ. ಈ ಕುರಿತು ಟ್ವೀಟ್ ಮಾಡಿರುವ ಬಿಎಂಎಆರ್ ಸಿಎಲ್ ಬೆಂಗಳೂರಿನಲ್ಲಿ ನಮ್ಮ ಮೆಟ್ರೋ ರೈಲಿನಲ್ಲಿ ಹೋಳಿ ಹಬ್ಬ ಆಚರಣೆಗೆ ನಿರ್ಬಂಧ ವಿಧಿಸಿದೆ. ಹೋಳಿ ಮುಗಿಯುವವರೆಗೂ ಮೆಟ್ರೋದಲ್ಲಿ ಬಣ್ಣಗಳಿಗೆ ನಿರ್ಬಂಧ ವಿಧಿಸಲಾಗಿದೆ. ಒಗ್ಗಟ್ಟು ಸಂತೋಷದಿಂದ ಹೋಳಿ ಹಬ್ಬವನ್ನು ಆಚರಿಸಿ ಎಂದು ಪ್ರಯಾಣಿಕರಿಗೆ ಸುರಕ್ಷಿತ ಪುಟ 2

## ವಿದ್ಯಾರ್ಥಿನಿ ಅನುಮಾನಾಸ್ಪದ ಸಾವು

**ಹಾಸನ:** ಇಲ್ಲಿನ ವಸತಿ ಶಾಲೆಯ ಏಳನೇ ತರಗತಿ ವಿದ್ಯಾರ್ಥಿನಿ ಅನುಮಾನಾಸ್ಪದ ಸಾವನ್ನಪ್ಪಿರುವ ಘಟನೆ ನಗರದಲ್ಲಿ ನಡೆದಿದೆ. ಪೂರ್ವಿಕಾ (13) ಸಾವನ್ನಪ್ಪಿದ ವಿದ್ಯಾರ್ಥಿನಿ. ಕೊಡಗು ಜಿಲ್ಲೆ, ಸೋಮವಾರಪೇಟೆ ತಾಲ್ಲೂಕಿನ, ಕ್ಯಾತೆ ಗ್ರಾಮದ ಎಪಿಜೆ ಅಬ್ದುಲ್ ಕಲಾಂ ವಸತಿ ಶಾಲೆಯಲ್ಲಿ ಏಳನೇ ತರಗತಿ ಓದುತ್ತಿದ್ದ ಪೂರ್ವಿಕಾ ಸುಸ್ತಾಗುತ್ತಿದೆ ಎಂದು ಹೇಳಿದ್ದಳು.ಪುಟ 2

## ಗೋಲ್ಡ್ ಸ್ಮಗ್ಲಿಂಗ್: ತರುಣ್‌ಗೆ 14 ದಿನ ನ್ಯಾಯಾಂಗ ಬಂಧನ

**ಬೆಂಗಳೂರು:** ಗೋಲ್ಡ್ ಸ್ಮಗ್ಲಿಂಗ್ ಪ್ರಕರಣಕ್ಕೆ ಸಂಬಂಧಿಸಿದಂತೆ ನಟಿ ರನ್ಯಾ ಗೆಳೆಯ 2ನೇ ಆರೋಪಿ ತರುಣ್ ರಾಜುಗೆ 14 ದಿನ ನ್ಯಾಯಾಂಗ ಬಂಧನ ವಿಧಿಸಿ ಆರ್ಥಿಕ ಅಪರಾಧಗಳ ಕೋರ್ಟ್ ಆದೇಶ ಹೊರಡಿಸಿದೆ.ಪ್ರಕರಣ ಸಂಬಂಧ ತರುಣ್ ರಾಜುವನ್ನು ಡಿಆರ್ ಐ ಅಧಿಕಾರಿಗಳು ಬಂಧಿಸಿ ಕಸ್ಟಡಿಗೆ ಪಡೆದಿದ್ದರು. ಪುಟ 2

## ಪಾಕ್ ಉಗ್ರ ತಾಣ

**ನವದೆಹಲಿ:** ಪಾಕಿಸ್ತಾನದ ವಿರುದ್ಧ ಭಯೋತ್ಪಾದನೆಯನ್ನು ಪ್ರಾಯೋಜಿಸುವಲ್ಲಿ ಭಾರತ ಭಾಗಿಯಾಗಿದೆ" ಎನ್ನುವ ಪಾಕಿಸ್ತಾನದ ಆರೋಪವನ್ನು ಭಾರತ ಬಲವಾಗಿ ತಳ್ಳಿ ಹಾಕಿದ್ದು ಜಾಗತಿಕ ಭಯೋತ್ಪಾದನೆಯ ತಾಣ ಯಾವುದು ಎನ್ನುವುದು ಇಡೀ ವಿಶ್ವಕ್ಕೆ ಗೊತ್ತಿದೆ ಎಂದು ತಿರುಗೇಟು ನೀಡಿದೆ.ಬಲೂಚ್ ಪ್ರತ್ಯೇಕತಾವಾದಿ ಗುಂಪುಗಳನ್ನು ಭಾರತ ಬೆಂಬಲಿಸುತ್ತಿದೆ ಎನ್ನುವ ಪಾಕಿಸ್ತಾನ ವಿದೇಶಾಂಗ ಕಚೇರಿಯ ವಕ್ತಾರ ಪುಟ 2

## ಕರ್ನಾಟಕದಲ್ಲಿ ಬೆಳೆದ ಮೆಣಸಿನಕಾಯಿ ಖರೀದಿಸಲು ಕೇಂದ್ರ ಸಚಿವರಿಗೆ ಪತ್ರ



ಹಾವೇರಿ: ಕರ್ನಾಟಕದಲ್ಲಿ ಒಣ ಮೆಣಸಿನಕಾಯಿ ಉತ್ಪಾದನೆ ಹೆಚ್ಚಾಗಿ ಬೆಲೆ ಕುಸಿತ ಉಂಟಾಗಿದ್ದು, ರೈತರು ಸಂಕಷ್ಟಕ್ಕೀಡಾಗಿದ್ದು, ಕೇಂದ್ರ ಸರ್ಕಾರ ಕರ್ನಾಟಕದ ರೈತರು ಬೆಳೆದ ಒಣ ಮೆಣಸಿನಕಾಯಿ ಖರೀದಿಗೆ ಕ್ರಮ ಕೈಗೊಳ್ಳಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಮನವಿ ಮಾಡಿದ್ದಾರೆ.

ಈ ಕುರಿತು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹ್ವಾಣ್ ಹಾಗೂ ವಾಣಿಜ್ಯ ಮತ್ತು ಕೈಗಾರಿಕೆ ಸಚಿವ ಪಿಯೂಷ್ ಗೋಯಲ್ ಅವರಿಗೆ ಪ್ರತ್ಯೇಕವಾಗಿ ಪತ್ರ ಬರೆದಿದ್ದಾರೆ.

ದೇಶದಲ್ಲಿ ಕರ್ನಾಟಕ, ಆಂಧ್ರಪ್ರದೇಶ, ತೆಲಂಗಾಣ ರಾಜ್ಯಗಳು ಮೆಣಸಿನಕಾಯಿ ಬೆಳೆಯುವ ರಾಜ್ಯಗಳಾಗಿದ್ದು, ಮೆಣಸಿನಕಾಯಿ ಇಡೀ ದೇಶದಲ್ಲಿ ಎಲ್ಲರೂ ಉಪಯೋಗಿಸುವ ಪದಾರ್ಥವಾಗಿದ್ದು, ವಿದೇಶಗಳಿಗೂ ದೊಡ್ಡ ಪ್ರಮಾಣದಲ್ಲಿ ರಫ್ತು ಮಾಡಲಾಗುತ್ತದೆ. ಮೆಣಸಿನಕಾಯಿ ಬೆಳೆ ಅತ್ಯಂತ ಸೂಕ್ಷ್ಮ ಬೆಳೆಯಾಗಿದ್ದು ಅದನ್ನು ಕೀಟಗಳ ಹಾವಳಿಯಿಂದ ಕಾಪಾಡಿಕೊಂಡು ರಕ್ಷಣೆ ಮಾಡುವುದು ಅತ್ಯಂತ ಸವಾಲಿನ ಕೆಲಸವಾಗಿದೆ ಎಂದು ತಿಳಿಸಿದ್ದಾರೆ.

ಕಳೆದ ವರ್ಷ ಮೆಣಸಿನಕಾಯಿ ಉತ್ಪಾದನೆ ಸಾಮಾನ್ಯವಾಗಿದ್ದರೂ, ಆಂತರಿಕ ಪುಟ 2

## ಪಿಪಿಪಿ ಮಾದರಿಯಲ್ಲಿ ಟೌನ್‌ಶಿಪ್ ಅಭಿವೃದ್ಧಿ



**ಬೆಂಗಳೂರು:** ರಾಜ್ಯದ ಮೈಸೂರು, ಮಂಗಳೂರು, ಹುಬ್ಬಳ್ಳಿ, ಧಾರವಾಡ, ಬೆಳಗಾವಿ, ಕಲ್ಬುರ್ಗಿ, ಕೆ.ಜಿ.ಎಫ್, ತುಮಕೂರಿನ ವಸಂತನರಸಾಪುರ ಮತ್ತು ಬಳ್ಳಾರಿ ನಗರಗಳ ಸಮೀಪದಲ್ಲಿ ಸಮಗ್ರ ಟೌನ್‌ಶಿಪ್‌ಗಳನ್ನು ಪಿಪಿಪಿ ಮಾದರಿಯಲ್ಲಿ ಅಭಿವೃದ್ಧಿಪಡಿಸಲು ಸರ್ಕಾರ ಉದ್ದೇಶಿಸಿದೆ ಎಂದು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವ ಬೈರತಿ ಸುರೇಶ್ ವಿಧಾನಸಭೆಯಲ್ಲಿಂದು ಹೇಳಿದರು.

ಪ್ರಶ್ನೋತ್ತರ ಅವಧಿಯಲ್ಲಿ ಕಾಂಗ್ರೆಸ್‌ನ ರೂಪಕಲಾ ರವರ ಪ್ರಶ್ನೆಗೆ ಉತ್ತರಿಸಿದ ಅವರು, ಮೈಸೂರು, ಬೆಂಗಳೂರು, ಹುಬ್ಬಳ್ಳಿ, ಧಾರವಾಡ, ಬೆಳಗಾವಿ, ಕಲ್ಬುರ್ಗಿ, ಕೆಜಿಎಫ್, ತುಮಕೂರಿನ ವಸಂತನರಸಾಪುರ ಮತ್ತು ಬಳ್ಳಾರಿ ನಗರಗಳ ಸಮೀಪದಲ್ಲಿ ಇಂಟಿಗ್ರೇಟೆಡ್ ಟೌನ್‌ಶಿಪ್‌ಗಳನ್ನು ಪಿಪಿಪಿ ಮಾದರಿಯಲ್ಲಿ ಅಭಿವೃದ್ಧಿಪಡಿಸುವ ಸಂಬಂಧ ಯೋಜನೆಯ ಉಪಯುಕ್ತತೆ, ಸಾಧಕ–ಬಾಧಕಗಳು, ತಾಂತ್ರಿಕ ಅಂಶಗಳ ಪರಿಶೀಲನೆಗಾಗಿ ಸಮಿತಿಯನ್ನು ರಚಿಸಲಾಗಿದೆ. ಈ ಸಮಿತಿಯ ವರದಿ ಬಂದ ನಂತರವೇ ಪಿಪಿಪಿ ಮಾದರಿಯಲ್ಲಿ ಟೌನ್‌ಶಿಪ್‌ಗಳ ನಿರ್ಮಾಣಕ್ಕೆ ಟೆಂಡರ್ ಕರೆದು ಮುಂದಿನ ತೀರ್ಮಾನಗಳನ್ನು ಕೈಗೊಳ್ಳುತ್ತೇವೆ ಎಂದು ತಿಳಿಸಿದರು.

ಕೋಲಾರದ ಕೆಜಿಎಫ್‌ನಲ್ಲಿ 900 ಎಕರೆ ಬಿಇಎಂಎಲ್ ಕಾರ್ಖಾನೆಗೆ ಸೇರಿದ ಜಾಗ ಪುಟ 2

## ಉಪಸಭಾಧ್ಯಕ್ಷರ ಅಧ್ಯಕ್ಷತೆಯಲ್ಲಿ ಸಮಿತಿ ರಚನೆ



**ಬೆಂಗಳೂರು:** ವಿಧಾನಸಭೆಯಲ್ಲಿ ಸದಸ್ಯರು ಕೇಳಿದ ಪ್ರಶ್ನೆಗಳಿಗೆ ಉತ್ತರ ನೀಡದ ಸಂಬಂಧಿಸಿದ ಇಲಾಖಾ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲು ಉಪಸಭಾಧ್ಯಕ್ಷರ ಅಧ್ಯಕ್ಷತೆಯಲ್ಲಿ ಸಮಿತಿಯೊಂದನ್ನು ರಚಿಸಲಾಗಿದೆ ಎಂದು ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ವಿಧಾನಸಭೆಯಲ್ಲಿ ಹೇಳಿದರು.

ಪ್ರಶ್ನೋತ್ತರ ಅವಧಿ ಮುಗಿದ ನಂತರ ಎದ್ದುನಿಂತ ಬಿಜೆಪಿಯ ಬಿ.ಪಿ. ಹರೀಶ್ ಅವರು, ಕಳೆದ 4 ಅಧಿವೇಶನಗಳಿಂದ ನಾನು ಒಂದು ಪ್ರಶ್ನೆ ಕೇಳಿದ್ದೆ. ಆ ಪ್ರಶ್ನೆಗೆ ಉತ್ತರ ಬಂದಿಲ್ಲ, ಹೀಗಾದರೆ ಹೇಗೆ ಎಂದು ಪ್ರಶ್ನಿಸಿದ್ದರು. ಇದಕ್ಕೆ ದನಿಗೂಡಿಸಿ ಪ್ರತಿಪಕ್ಷ ನಾಯಕ ಆರ್. ಅಶೋಕ್, ಬಸನಗೌಡ ಪಾಟೀಲ್ ಯತ್ನಾಳ್ ಅವರು ಸದಸ್ಯರು ಕೇಳಿದ ಪ್ರಶ್ನೆಗೆ ಉತ್ತರ ಬಾರದಿರುವುದು ಸರಿಯಲ್ಲ. ಉತ್ತರವನ್ನು ನೀಡಲೇಬೇಕು. ಇದೊಂದು ಗಂಭೀರ ವಿಚಾರ ಎಂದು ಹೇಳಿದರು.

ಸದಸ್ಯರ ಮಾತಿಗೆ ಸ್ಪಂದಿಸಿದ ವಿಧಾನ ಸಭಾಧ್ಯಕ್ಷರು, ನಾನು ಇದನ್ನು ಗಂಭೀರವಾಗಿ ಪರಿಗಣಿಸಿದ್ದೇನೆ. ಯಾವುದೇ ಸದಸ್ಯರು ಪ್ರಶ್ನೆ ಕೇಳಿದರೆ ಅದಕ್ಕೆ ಅಧಿಕಾರಿಗಳು ಉತ್ತರ ನೀಡಲೇಬೇಕು. ಉತ್ತರ ನೀಡದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುತ್ತೇವೆ. ಪುಟ 2

## ಪಿಡಿಒಗಳ ಮುಂಬಡ್ತಿ: ಅರ್ಜಿ ಇತ್ಯರ್ಥವಾದ ಕೂಡಲೇ ನಿರ್ಧಾರ



**ಬೆಂಗಳೂರು:** ಪಂಚಾಯತ್‌ರಾಜ್ ಅಭಿವೃದ್ಧಿ ಅಧಿಕಾರಿ (ಪಿಡಿಒ)ಗಳ ಮುಂಬಡ್ತಿಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ಅರ್ಜಿ ಇತ್ಯರ್ಥವಾದ ತಕ್ಷಣವೇ ಆದಷ್ಟು ಬೇಗ ಇದರ ಬಗ್ಗೆ ಸರ್ಕಾರ ಸೂಕ್ತ ನಿರ್ಧಾರ ತೆಗೆದುಕೊಳ್ಳಲಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಭರವಸೆ ನೀಡಿದ್ದಾರೆ.

ವಿಧಾನಪರಿಷತ್‌ನಲ್ಲಿ ಬಿಜೆಪಿ ಸದಸ್ಯ ಚಿದಾನಂದಗೌಡ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಪಿಡಿಒಗಳಿಗೆ 10ರಿಂದ 11 ವರ್ಷಗಳ ಕಾಲ ಮುಂಬಡ್ತಿ ನೀಡಲು ಸಾಧ್ಯವಾಗಿರಲಿಲ್ಲ. ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಲ್ಲಿಕೆಯಾಗಿರುವುದರಿಂದ ನಾವು ಯಾವುದೇ ಕ್ರಮಗಳನ್ನು ತೆಗೆದುಕೊಳ್ಳಲು ಆಗುವುದಿಲ್ಲ. ರಿಟ್ ಅರ್ಜಿ ಇತ್ಯರ್ಥವಾದ ತಕ್ಷಣವೇ ಮುಂಬಡ್ತಿ ನೀಡುವ ಬಗ್ಗೆ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಆಶ್ವಾಸನೆ ನೀಡಿದರು.

ಕೆಲವು ಕಡೆ 2ರಿಂದ 3 ಪಂಚಾಯ್ತಿಗಳನ್ನು ಓರ್ವ ಪಿಡಿಒಗಳೇ ಕಾರ್ಯ ನಿರ್ವಹಿಸುತ್ತಾರೆ. ಇದರಿಂದ ಕಾರ್ಯ ನಿರ್ವಹಣೆ ಸರ್ಪಕವಾಗಿ ನಿರ್ವಹಿಸಲು ಸಾಧ್ಯವಾಗುತ್ತಿಲ್ಲ ಎಂಬ ಆರೋಪವಿದೆ. ಮುಂಬಡ್ತಿ ನೀಡಲು ನಾವು ಮುಕ್ತ ಮನಸ್ಸು ಹೊಂದಿದ್ದೇವೆ ಎಂದು ಹೇಳಿದರು. ಪುಟ 2

## ತೆಂಗುಗೆ ಬಿಳಿರೋಗ ಬಾಧೆ ಮುಕ್ತಕ್ಕೆ ಕ್ರಮ



**ಬೆಂಗಳೂರು:** ರಾಜ್ಯದಲ್ಲಿ ತೆಂಗು ಬೆಳೆಗೆ ಬಿಳಿ ಹುಳ ರೋಗ ಬಾಧೆಯಿಂದ ಮುಕ್ತಗೊಳಿಸಲು ಸರ್ಕಾರ ಹಲವು ಕ್ರಮಗಳನ್ನು ಕೈಗೊಂಡಿದೆ. ಬಿಳಿಹುಳ ಬಾಧೆ ನಿವಾರಣೆಗೆ ತೆಂಗು ಅಭಿವೃದ್ಧಿ ಮಂಡಳಿಗೆ ಸುಮಾರು 15 ಕೋಟಿ ರೂಪಾಯಿಗಳನ್ನು ಒದಗಿಸಲಾಗಿದೆ ಎಂದು ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ವಿಧಾನಸಭೆಯಲ್ಲಿಂದು ತಿಳಿಸಿದರು.

ಪ್ರಶ್ನೋತ್ತರ ಅವಧಿಯಲ್ಲಿ ಜೆಡಿಎಸ್‌ನ ಸುರೇಶ್‌ಬಾಬು ರವರ ಪ್ರಶ್ನೆಗೆ ತೋಟಗಾರಿಕಾ ಸಚಿವರ ಪರವಾಗಿ ಉತ್ತರ ನೀಡಿದ ಅವರು, ರಾಜ್ಯದ 14 ಜಿಲ್ಲೆಗಳ ಸುಮಾರು 1,48,448 ಹೆಕ್ಟೇರ್ ಪ್ರದೇಶದಲ್ಲಿನ ತೆಂಗು ಬೆಳೆಗೆ ಬಿಳಿ ನೊಣದ ಕೀಟ ಬಾಧೆ ಕಾಡುತ್ತಿದ್ದು, ಈ ಕೀಟ ಬಾಧೆಯನ್ನು ತೆಂಗಿನ ಮರಗಳ ನೈಸರ್ಗಿಕ ರೋಗ–ನಿರೋಧಕ ಶಕ್ತಿಯನ್ನು ವೃದ್ಧಿಸುವ ಪುಟ 2

# ಮಾಜಿ ಬಿಷಪ್ ಕರ್ಕರೆ ವಿರುದ್ಧ ಪ್ರತಿಭಟನೆ



**ಬೆಂಗಳೂರು;** ಬಾಲ್ಡ್ ವಿನ್ ಶಾಲಾ ವಿದ್ಯಾಸಂಸ್ಥೆಯ ಮಾಜಿ ಮುಖ್ಯಸ್ಥ, ಮೆಥೋಡಿಸ್ಟ್ ಚರ್ಚ್ ನ ಮಾಜಿ ಫಾದರ್ ಎಲ್.ಎನ್.ಕರ್ಕರೆ ವಿರುದ್ಧ ಮೆಥೋಡಿಸ್ಟ್ ಚರ್ಚ್ ನ ಭಕ್ತರು ಸ್ವಾತಂತ್ರ್ಯ ಉದ್ಯಾನವನದಲ್ಲಿ ಪ್ರತಿಭಟನೆ ನಡೆಸಿದರು. ಈ ವೇಳೆ ಮಾತನಾಡಿದ ನಿವೃತ್ತ ಐಎಎಸ್ ಅಧಿಕಾರಿ ಶಾಂತಕುಮಾರಿ,ಇಂಡಿಯನ್ ವೆಲ್ಪೇರ್ ಅಸೋಸಿಯೇಶನ್ ರಾಜ್ಯಾಧ್ಯಕ್ಷ ಸಂಜಯ್ ಜಗೀರ್ ದಾರ್, ಪ್ರಜ್ವಲ್ ಸ್ವಾಮಿ ಮಾತನಾಡಿ, ಎನ್.ಎಲ್ .ಕರ್ಕರೆ ಎಂಬುವವರು ಅತ್ಯಂತ ಭ್ರಷ್ಟ ವ್ಯಕ್ತಿಯಾಗಿದ್ದು,ಇಡೀ ಮೆಥೋಡಿಸ್ಟ್ ಚರ್ಚ್ ನ ವ್ಯವಹಾರವನ್ನು ಸಂಪೂರ್ಣವಾಗಿ ದುರುಪಯೋಗ ಪಡಿಸಿಕೊಂಡಿದ್ದಾರೆ. ನ್ಯಾಯಾಲಯದ ಆದೇಶವನ್ನು ಹುಸಿಗೊಳಿಸಿ ಮೆಥೋಡಿಸ್ಟ್ ಚರ್ಚ್ ಮತ್ತು ಬಾಲ್ಡ್ ವಿನ್ ಸಂಸ್ಥೆಗಳ ಮೇಲೆ ಭಯೋತ್ಪಾದನೆ ಮೂಡಿಸಲು ಸಮಯೋಚಿತ ದಾಳಿ ನಡೆಸಿ ಬಾರೀ ನಷ್ಟ ಉಂಟು ಮಾಡಿದ್ದಾರೆ,210ಕ್ಕೂ ಹೆಚ್ಚು ಕ್ರಿಮಿನಲ್ ಮೊಕದ್ದಮೆಗಳು ಮೇಲೆ ಅವರ ದಾಖಲಾಗಿವೆ ಎಂದು ಆರೋಪಿಸಿದರು.

ಹೈಕೋರ್ಟ್ ನಿಂದ ಎನ್.ಎಲ್ .ಕರ್ಕರೆ ಬಿಷಪ್ ಆಗಿ ಮುಂದುವರೆಯಲು ತಡೆಯಾಜ್ಞೆ ಇದೆ, ಎಪ್ಪತ್ತು ವರ್ಷ ವಯಸ್ಸಾಗಿದ್ದು ಬಿಷಪ್ ಹುದ್ದೆಯಿಂದ ನಿವೃತಿ ಯಾಗಿದ್ದಾನೆ,ಮೂನ್ನೂರುರಿಂದ ನಾಲ್ಕುನೂರು ಕೋಟಿ ರೂಪಾಯಿ ದುರುಪಯೋಗ ಪಡಿಸಿಕೊಂಡಿದ್ದಾನೆ. ಎಲ್ಲ ಬಿಷಪ್ ಗಳು ಮೆಥೋಡಿಸ್ಟ್ ಚರ್ಚ್ ಅಧಿಕಾರ ಅನುಭವಿಸಿ ಗೌರವದಿಂದ ನಿವೃತ್ತಿ ಹೊಂದಿದ್ದಾರೆ

ಆದರೆ ಎಲ್.ಎನ್.ಕರ್ಕರೆ ಅವರು ಗೌರವಯುತವಾಗಿ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡದೇ ದುರಡಾಳಿತದಿಂದ ನಡೆದುಕೊಳ್ಳುತ್ತಿದ್ದಾರೆ.ಇದರಲ್ಲಿ ನೂರಾರು ಕೋಟಿ ರೂಪಾಯಿ ಆಸ್ತಿ ಕಬಳಿಸಿದ್ದಾರೆ ಇದು ನಿಮಗೆ ನಾಚಿಕೆಗೇಡುತನ,ಮುಂದೆ ಇಂತಹ ಬಿಷಪ್ ಗಳು ಬಂದರೆ ಚಡ್ಡಿ ಬಿಚ್ಚಿ ಹೊರ ಹಾಕುತ್ತೇವೆ ಎಂದು ಕ್ರೈಸ್ತ ಮಹಾ ಸಭಾದ ಪ್ರಜ್ವಲ್ ಸ್ವಾಮಿ ಹೇಳಿದರು.

ಮೆಥೋಡಿಸ್ಟ್ ಚರ್ಚ್ ನ ನೂತನ ಬಿಷಪ್ ಅನಿಲ್ ಕುಮಾರ್,ಬಾಲ್ಡ್ ವಿನ್ ವಿದ್ಯಾಸಂಸ್ಥೆಗಳ ಸೊಸೈಟಿಯ ಡಾ.ಸೆಬಾಸ್ಟಿಯನ್ ರವಿಕ

# ಡಿಸಿಎಂ ಡಿಕೆ ಶಿವಕುಮಾರ್ ಡಿನ್ನರ್ ಪಾರ್ಟಿಗೆ ಇಬ್ಬರು ಸಚಿವರು ಗೈರು, ಇಬ್ಬರು ಬಿಜೆಪಿ ಶಾಸಕರು ಭಾಗಿ

**ಬೆಂಗಳೂರು:** ಕೆಪಿಸಿಸಿ ಅಧ್ಯಕ್ಷರಾಗಿ 5 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ನಿನ್ನೆ ರಾತ್ರಿ ಕಾಂಗ್ರೆಸ್ ಶಾಸಕರು ಸಚಿವರಿಗೆ ಡಿಸಿಎಂ ಡಿಕೆ ಶಿವಕುಮಾರ್ ಡಿನ್ನರ್ ಪಾರ್ಟಿ ಆಯೋಜನೆ ಮಾಡಿದ್ದರು. ಈ ಔತಣಕೂಟಕ್ಕೆ ಇಬ್ಬರು ಸಚಿವರು ಗೈರಾದರೇ ಇಬ್ಬರು ಬಿಜೆಪಿ ಶಾಸಕರು ಭಾಗಿಯಾಗಿದ್ದರು ಎನ್ನಲಾಗಿದೆ. ಡಿಸಿಎಂ ಡಿಕೆ ಶಿವಕುಮಾರ್ ಕೆಪಿಸಿಸಿ ಅಧ್ಯಕ್ಷರಾಗಿ ಕೆಪಿಸಿಸಿ ಅಧ್ಯಕ್ಷರಾಗಿ ವಹಿಸಿಕೊಂಡು 5 ವರ್ಷ ತುಂಬಲಿದ್ದು, ಈ ಹಿನ್ನಲೆಯಲ್ಲಿ ನಿನ್ನೆ ಕಾಂಗ್ರೆಸ್ ನ ಶಾಸಕರಿಗೆ ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಔತಣಕೂಟ ಏರ್ಪಡಿಸಿದ್ದರು. ಆದರೆ ಡಿಕೆ ಶಿವಕುಮಾರ್ ಕಾಂಗ್ರೆಸ್ ಶಾಸಕರಿಗೆ ಆಯೋಜಿಸಿದ್ದ ಔತಣಕೂಟದಲ್ಲಿ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹಾಗೂ ಸಹಕಾರ ಸಚಿವ ಕೆ.ಎನ್ ರಾಜಣ್ಣ ಗೈರಾಗಿದ್ದರು ಎಂಬ ಮಾಹಿತಿ ಲಭ್ಯವಾಗಿದೆ. ಇನ್ನು ಔತಣಕೂಟದಲ್ಲಿ ಸಿಎಂ ಸಿದ್ದರಾಮಯ್ಯ ಸೇರಿದಂತೆ ಕಾಂಗ್ರೆಸ್ ಹಿರಿಯ ನಾಯಕರು, ಶಾಸಕರು, ಸಚಿವರು ಭಾಗವಹಿಸಿ ಶುಭಾಶಯ ಕೋರಿದರು. ಡಿಕೆ ಶಿವಕುಮಾರ್ ಅವರ ಔತಣಕೂಟದಲ್ಲಿ ಬಿಜೆಪಿ ಶಾಸಕರಾದ ಎಸ್ ಟಿ ಸೋಮಶೇಖರ್ ಮತ್ತು ಶಿವರಾಮ್ ಹೆಬ್ಬಾರ್ ಕಾಣಿಸಿಕೊಂಡಿದ್ದರು.

# ಕೊಟ್ಟ ಮಾತು ಉಳಿಸಿಕೊಂಡ ಸಿದ್ದರಾಮಯ್ಯ ಸರ್ಕಾರ

**ಬೆಂಗಳೂರು:** ಅಂಗನವಾಡಿ ಕಾರ್ಯಕರ್ತೆಯರ ಬಗ್ಗೆ ಸರ್ಕಾರಕ್ಕೆ ಬದ್ಧತೆ ಇದ್ದು, ಈ ಬಾರಿಯ ಬಜೆಟ್ ನಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಗೌರವ ಧನ ಹೆಚ್ಚಿಸುವ ಮೂಲಕ ಚುನಾವಣಾ ಪ್ರಣಾಳಿಕೆಯಲ್ಲಿ ಕೊಟ್ಟ ಭರವಸೆಯನ್ನು ಈಡೇರಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಖಾತೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದ್ದಾರೆ.

ಶುಕ್ರವಾರ ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿ ಸದಸ್ಯ ಪ್ರತಾಪ್ ಸಿಂಹ ನಾಯಕ್ ಪ್ರಶ್ನೆಗೆ ಸಚಿವರು, ಇತ್ತೀಚಿನ ಮಂಡಿಸಲಾದ 2025–26ನೇ ಸಾಲಿನ ಬಜೆಟ್ ನಲ್ಲಿ ಅಂಗನವಾಡಿ ಕಾರ್ಯಕರ್ತೆಯರಿಗೆ 1 ಸಾವಿರ ಹಾಗೂ ಅಂಗನವಾಡಿ ಸಹಾಯಕಿಯರಿಗೆ 750 ರೂಪಾಯಿ ಹೆಚ್ಚಿಸಲಾಗಿದ್ದು, ಇದರಿಂದ ವರ್ಷಕ್ಕೆ ಇಲಾಖೆಗೆ 144 ಕೋಟಿ ರೂಪಾಯಿ ಅನುದಾನ ಹೊರೆಯಾಗಿದೆ ಎಂದರು.

ಅಂಗನವಾಡಿ ಕಾರ್ಯಕರ್ತೆಯವರ ಗೌರವ ಧನವನ್ನು ಹೆಚ್ಚಳ ಮಾಡಿರುವುದು ನಮ್ಮ ಕಾಂಗ್ರೆಸ್ ಸರ್ಕಾರವೇ. 2017ರಲ್ಲಿ ಸಿದ್ದರಾಮಯ್ಯನವರು ಮುಖ್ಯಮಂತ್ರಿ ಆಗಿದ್ದ ವೇಳೆಯ 2 ಸಾವಿರ ರೂಪಾಯಿ ಗೌರವ ಧನವನ್ನು ಹೆಚ್ಚಿಸಲಾಗಿತ್ತು. ಆದರೆ, ,ಕಳೆದ ಬಿಜೆಪಿ ಸರ್ಕಾರದ ನಾಲ್ಕು ವರ್ಷಗಳ ಅವಧಿಯಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಗೌರವ ಧನವನ್ನು ಒಂದು ರೂಪಾಯಿ ಹೆಚ್ಚಿಸಿರಲಿಲ್ಲ ಎಂದು ಸದನಕ್ಕೆ ತಿಳಿಸಿದರು.

ಅಂಗನವಾಡಿ ಕಾರ್ಯಕರ್ತೆಯರ ಗೌರವ ಧನ ನೀಡಿಕೆಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಪಾಲು ಇದ್ದು, ಇದರಲ್ಲಿ ನಮ್ಮ ರಾಜ್ಯದ ಪಾಲು ಹೆಚ್ಚಿದೆ. ಗೌರವ ಧನ ಹೆಚ್ಚಳದ ಬಗ್ಗೆ ಕೇಂದ್ರ ಸರ್ಕಾರಕ್ಕೆ ಹಲವಾರು ಬಾರಿ ಮನವಿ ಮಾಡಲಾಗಿದೆ. ಆದರೂ, ಈವರೆಗೂ ನಯಾಪೈಸೆ ಬಿಡುಗಡೆ ಮಾಡಿಲ್ಲ ಎಂದು ಪರೋಕ್ಷವಾಗಿ ಕೇಂದ್ರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

ಅಂಗನವಾಡಿ ಕಾರ್ಯಕರ್ತೆಯರ ಗೌರವ ಧನ ಹೆಚ್ಚಳ ಮಾಡಿರುವ ರಾಜ್ಯಗಳ ಪೈಕಿ ಇಡೀ ದೇಶದಲ್ಲೇ ನಮ್ಮ ಕರ್ನಾಟಕವು ಮೂರನೇ ಸ್ಥಾನದಲ್ಲಿದೆ. ನಮ್ಮ ಸರ್ಕಾರಕ್ಕೆ ಅಂಗನವಾಡಿ ಸಹಾಯಕರು ಹಾಗೂ ಕಾರ್ಯಕರ್ತೆಯರ ಬಗ್ಗೆ ಕಾಳಜಿ ಇದ್ದು, ಹಾಗಾಗಿಯೇ ಅವರ ಗೌರವ ಧನ ಹೆಚ್ಚಳ ಮಾಡಲು ಸರ್ಕಾರ ಮತ್ತು ಇಲಾಖೆ ಅಗತ್ಯ ಕ್ರಮ ಕೈಗೊಂಡಿದೆ ಎಂದು ಸಚಿವರು ಸದನಕ್ಕೆ ತಿಳಿಸಿದರು.

# ಒಂದೇ ಚುನಾವಣೆಯಿಂದ ಕಡಿಮೆ ಖರ್ಚು, ಅಭಿವೃದ್ಧಿಗೆ ಹೆಚ್ಚು ಹಣ

**ಬೆಂಗಳೂರು:** ಒಂದು ದೇಶ ಒಂದೇ ಚುನಾವಣೆಯಿಂದ ಪ್ರಾದೇಶಿಕ ಪಕ್ಷವು ರಾಷ್ಟ್ರಹಿತದೊಂದಿಗೆ ಹಾಗೂ ರಾಷ್ಟ್ರೀಯ ಪಕ್ಷವು ಪ್ರಾದೇಶಿಕ ಹಿತೈಷಿಯಾಗಿ ಚಿಂತಿಸುವಂತೆ ಆಗಲಿದೆ ಎಂದು ನಿವೃತ್ತ ಐಪಿಎಸ್ ಅಧಿಕಾರಿ ಅಣ್ಣಾಮಲೈ ಅವರು ವಿಶ್ಲೇಷಿಸಿದರು.

ಜಯನಗರದ ಜೈನ್ ವಿಶ್ವವಿದ್ಯಾಲಯದಲ್ಲಿ ನಡೆದ 'ಒಂದು ದೇಶ ಒಂದು ಚುನಾವಣೆ' ಕುರಿತು ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಪ್ರಜಾಸತ್ತಾತ್ಮಕ ವ್ಯವಸ್ಥೆ ಬಲಪಡಿಸುವ ಮತದಾನದಲ್ಲಿ ಪ್ರತಿಯೊಬ್ಬರೂ ಭಾಗವಹಿಸುವಂತಾಗಬೇಕು ಎಂದು ಅವರು ಆಶಿಸಿದರು.

ಯುವಜನರು ಪ್ರಜಾಸತ್ತಾತ್ಮಕ ವ್ಯವಸ್ಥೆ ಮತ್ತು ಮತದಾನದಲ್ಲಿ ಹೆಚ್ಚು ಹೆಚ್ಚಾಗಿ ಪಾಲ್ಗೊಳ್ಳಬೇಕಿದೆ ಎಂದು ಅವರು, ಎಲ್ಲರೂ ಸಮಾನರು, ಪುರುಷ– ಮಹಿಳೆ ಸೇರಿ ಎಲ್ಲರಿಗೂ ಒಂದು ಮತದಾನದ ಹಕ್ಕಿದೆ ಎಂಬುದನ್ನು ಸ್ವಾತಂತ್ರ್ಯ ಪಡೆದ ಸಂದರ್ಭದಲ್ಲೇ ಜಾರಿಗೊಳಿಸಿದ ದೇಶ ನಮ್ಮದು ಎಂದು ವಿವರಿಸಿದರು.

1951–52ರಲ್ಲಿ ಮೊದಲ ಚುನಾವಣೆ ನಡೆದಿತ್ತು. 7 ಹಂತಗಳಲ್ಲಿ ಅದು ನಡೆಯಿತು. 57ರಲ್ಲಿ 2ನೇ ಚುನಾವಣೆ ನಡೆಸಲಾಯಿತು. 1952, 57, 62, 67ರಲ್ಲಿ ರಾಜ್ಯ ವಿಧಾನಸಭೆಗಳು– ಸಂಸತ್ತಿಗೆ ಏಕಕಾಲದಲ್ಲಿ ಚುನಾವಣೆ ನಡೆದಿತ್ತು ಎಂದು ನೆನಪಿಸಿದರು.

1970ರಲ್ಲಿ ಲೋಕಸಭೆಯನ್ನು ಒಂದು ವರ್ಷ ಮೊದಲೇ ವಿಸರ್ಜಿಸಲಾಯಿತು. ಕಮ್ಯುನಿಸ್ಟ್ ಪಕ್ಷದ ಆಡಳಿತ ಇದ್ದ ಕೇರಳ ರಾಜ್ಯದ ಆಡಳಿತದ ಮೇಲೆ ರಾಷ್ಟ್ರಪತಿ ಆಳ್ವಿಕೆ ಹೇರಲಾಗಿತ್ತು. ಸಂವಿಧಾನಕ್ಕೆ ವಿರುದ್ಧವಾಗಿ ಆ ರಾಜ್ಯ ಸರಕಾರವನ್ನು ವಜಾ ಮಾಡಲಾಗಿತ್ತು. ತುರ್ತು ಪರಿಸ್ಥಿತಿಯಲ್ಲಿ ಕಾಂಗ್ರೆಸ್ಸೇತರ ರಾಜ್ಯಗಳ ಸರಕಾರವನ್ನು ವಜಾಗೊಳಿಸಿ ರಾಷ್ಟ್ರಪತಿ ಆಳ್ವಿಕೆ ಹೇರಿದ್ದರು. ಹಿಂದೆ ಕೇಂದ್ರದಲ್ಲಿ ಆಡಳಿತದಲ್ಲಿದ್ದ ಜನತಾ ಪಕ್ಷವೂ ಇದೇ ರೀತಿ ಮಾಡಿತ್ತು ಎಂದರು.

28 ರಾಜ್ಯಗಳು ಇರುವ ಭಾರತದಲ್ಲಿ ಚುನಾವಣೆ ಎಂಬುದು ಈಗ ನಿರಂತರ ಪ್ರಕ್ರಿಯೆ ಆಗಿದೆ. 45 ದಿನಗಳ ನೀತಿಸಂಹಿತೆ ಪ್ರಕ್ರಿಯೆ ಅಭಿವೃದ್ಧಿ ಪ್ರಕ್ರಿಯೆಗೆ ಅಡ್ಡಿಯಾಗುತ್ತದೆ. 6 ತಿಂಗಳ ಕಾಲ ಮತದಾರರ ಪಟ್ಟಿ ಸಿದ್ಧಪಡಿಸುವಿಕೆ ನಡೆಯುತ್ತದೆ. ಒಂದು ಚುನಾವಣೆ ಸಂಬಂಧ ಒಂದು ರಾಜ್ಯ ಕನಿಷ್ಠ ಏಳೂವರೆ ತಿಂಗಳನ್ನು ಕಳೆದುಕೊಳ್ಳುತ್ತದೆ ಎಂದು ವಿವರಿಸಿದರು.

ಶಿಕ್ಷಕರು, ಸಿಆ▯▯▯ಪಿಎಫ್ ಸೇರಿ ಆಡಳಿತಯಂತ್ರವು ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಬೇಕಾಗುತ್ತದೆ. ಒಂದೇ ಮತದಾರರ ಪಟ್ಟಿ ಇದ್ದು, ಸಂಸದ, ಶಾಸಕರ ಆಯ್ಕೆಗೆ ತಲಾ ಒಂದೊಂದು ಬಟನ್ ಒತ್ತುವ ಪ್ರಕ್ರಿಯೆಯೇ ಒಂದು ದೇಶ



ಒಂದು ಮತದಾನದ ಹಿಂದಿದೆ ಎಂದು ತಿಳಿಸಿದರು. ನೀತಿ ಆಯೋಗ, ಕಾನೂನು ಆಯೋಗವೂ ಒಂದೇ ಚುನಾವಣೆಯ ಪರವಾಗಿದೆ; ಇದಕ್ಕೆ ಈಗ ಸಕಾಲ ಎಂದೇ ತಿಳಿಸಿದೆ ಎಂದು ಹೇಳಿದರು.

2019ರಲ್ಲಿ 16 ಪಕ್ಷಗಳು ಒಂದೇ ಚುನಾವಣೆಯನ್ನು ಬೆಂಬಲಿಸಿದ್ದವು. ಸಿಪಿಎಂ ಸೇರಿ 3 ಪಕ್ಷಗಳು ಇದನ್ನು ವಿರೋಧಿಸಿದ್ದವು. 1932ರಿಂದಲೇ ಒಂದು ದೇಶ ಒಂದು ಚುನಾವಣೆಯ ವಿಚಾರ ಚರ್ಚೆಗೆ ಒಳಪಟ್ಟಿದೆ ಎಂದು ತಿಳಿಸಿದರು. ಈ ಪದ್ಧತಿಯಿಂದ ಮತದಾರರು ಉದಾಸೀನ ಪ್ರವೃತ್ತಿಯಿಂದ ಮತದಾನ ಮಾಡದೆ ಉಳಿಯುವುದನ್ನು ತಪ್ಪಿಸಲು ಸಾಧ್ಯ ಎಂದು ಆಶಿಸಿದರು. ಇದು ಯುವಜನರು ಮತದಾನದಲ್ಲಿ ಉತ್ಸಾಹದಿಂದ ಭಾಗವಹಿಸುವಿಕೆಗೆ ಪೂರಕ ಎಂದರು.

ಒಂದೇ ಚುನಾವಣೆಯಿಂದ ಉಳಿತಾಯದ ಮೂಲಕ ಜಿಡಿಪಿಗೆ 4.5 ಲಕ್ಷ ಕೋಟಿ ಕೊಡುಗೆ ಲಭಿಸಬಲ್ಲದು. ಸಂಸತ್ ಚುನಾವಣೆಗೆ ಅಭ್ಯರ್ಥಿಗಳು 1.74 ಲಕ್ಷ ಕೋಟಿ ಖರ್ಚು ಮಾಡಿದ್ದಾರೆ. ಹಿಂದಿನ ರಾಷ್ಟ್ರಪತಿ ರಾಮನಾಥ ಕೋವಿಂದ್ ಅವರ ಸಮಿತಿಯು ಒಂದೇ ಚುನಾವಣೆ ಸಂಬಂಧ ವರದಿ ಕೊಟ್ಟಿದೆ. ಅದನ್ನು ಸಂಸತ್ತಿನಲ್ಲಿ ಮಂಡಿಸಲಾಗಿದೆ. ಜಂಟಿ ಸಂಸದೀಯ ಸಮಿತಿ (ಜೆಪಿಸಿ) ಇದರ ಸಂಬಂಧ ಮಾಹಿತಿ ಕೊಡುತ್ತಿದೆ ಎಂದು ತಿಳಿಸಿದರು. ಚುನಾವಣೆಗೆ ಕಡಿಮೆ ಖರ್ಚು, ಅಭಿವೃದ್ಧಿಗೆ ಹೆಚ್ಚು ಹಣ ಸಿಗಲಿದೆ ಎಂದು ವಿವರಿಸಿದರು.

ಒಂದೇ ಚುನಾವಣೆ ಎಂಬುದು ಸಾರ್ವಜನಿಕ ಹಿತಾಸಕ್ತಿಯ ಕ್ರಮವೇ ಹೊರತು ಇದನ್ನು ಹೇರುತ್ತಿಲ್ಲ; ಇದೊಂದು ಪ್ರಜಾಸತ್ತಾತ್ಮಕ ಕ್ರಮ ಎಂದು ಅವರು ಸ್ಪಷ್ಟಪಡಿಸಿದರು. ಎಲ್ಲವೂ ನಿರೀಕ್ಷೆಯಂತೆ ನಡೆದರೆ 2034ರಲ್ಲಿ ಒಂದೇ ಚುನಾವಣೆಯು ಜಾರಿ ಆಗಲಿದೆ ಎಂದು ಅವರು ನುಡಿದರು.

ಅತ್ಯಂತ ದೊಡ್ಡ ಪಕ್ಷವಾಗಿದ್ದರೂ, ಬಿಜೆಪಿ ಬಗ್ಗೆ ದೇಶಾದ್ಯಂತ ಜನರ ಒಲವಿದ್ದರೂ ಚುನಾವಣಾ ಕ್ಷೇತ್ರದಲ್ಲಿ ಸುಧಾರಣೆ ತರಲು ನಾವು ಮುಂದಾಗಿದ್ದೇವೆ. ದೇಶ ಮೊದಲು ಎಂಬ ಚಿಂತನೆಯೇ ಇದಕ್ಕೆ ಕಾರಣ ಎಂದು ಅವರು ಹೇಳಿದರು. 4.5 ಲಕ್ಷ ಕೋಟಿ ಹೆಚ್ಚುವರಿ ಜಿಡಿಪಿ, ಹೆಚ್ಚು ಯುವಜನರ ಭಾಗೀದಾರಿಕೆ, ಪ್ರಬುದ್ಧ–ಸುಸ್ಥಿರ ಪ್ರಜಾಸತ್ತಾತ್ಮಕ ವ್ಯವಸ್ಥೆಯ ಚಿಂತನೆಯೊಂದಿಗೆ ನಾವು ಒಂದೇ ಚುನಾವಣೆ ಕುರಿತು ಆಸಕ್ತಿ ತೋರಿದ್ದೇವೆ ಎಂದು ವಿಶ್ಲೇಷಿಸಿದರು.

ಜಯನಗರ ಶಾಸಕ ಸಿ.ಕೆ.ರಾಮಮೂರ್ತಿ, ಒಂದು ದೇಶ ಒಂದು ಚುನಾವಣೆ ಜಾಗೃತಿ ಸಮಿತಿ ರಾಜ್ಯ ಸಂಚಾಲಕ ನವೀನ್ ಶಿವಪ್ರಕಾಶ್, ವಿಧಾನ ಪರಿಷತ್ತಿನ ಮಾಜಿ ಸದಸ್ಯ ಹಾಗೂ ಒಂದು ದೇಶ ಒಂದು ಚುನಾವಣೆ ಜಾಗೃತಿ ಸಮಿತಿ ರಾಜ್ಯ ಸಹ ಸಂಚಾಲಕ ಅಶ್ವತ್ಥನಾರಾಯಣ್, ಜೈನ್ ವಿಶ್ವವಿದ್ಯಾಲಯದ ಉಪಾಧ್ಯಕ್ಷ ರವೀಂದ್ರ ಭಂಡಾರಿ, ಜಂಟಿ ಕಾರ್ಯದರ್ಶಿ ಸಂತೋಷ್, ನಿವೃತ್ತ ಐಪಿಎಸ್ ಅಧಿಕಾರಿ ಭಾಸ್ಕರ್ ರಾವ್ ಮತ್ತು ಜೈನ್ ವಿಶ್ವವಿದ್ಯಾಲಯದ ರಿಜಿಸ್ಟ್ರಾರ್ ಡಾ. ಜಿತೇಂದ್ರ ಮಿಶ್ರ ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಜೈನ್ ವಿಶ್ವವಿದ್ಯಾಲಯದ ರಿಜಿಸ್ಟ್ರಾರ್ ಡಾ. ಜಿತೇಂದ್ರ ಮಿಶ್ರ ಅವರು ಸ್ವಾಗತಿಸಿದರು. ಪ್ರತಿಮಾ ಸುಭಾಷ್ ಅವರು ಕಾರ್ಯಕ್ರಮ ನಿರೂಪಿಸಿದರು. ಶಾಸಕ ಸಿ.ಕೆ.ರಾಮಮೂರ್ತಿ ಅವರು ಅತಿಥಿಗಳನ್ನು ಪರಿಚಯಿಸಿದರು. ಒಂದು ದೇಶ ಒಂದು ಚುನಾವಣೆ ಜಾಗೃತಿ ಸಮಿತಿ ರಾಜ್ಯ ಸಹ ಸಂಚಾಲಕ ಅಶ್ವತ್ಥನಾರಾಯಣ್ ಅವರು ಪ್ರಾಸ್ತಾವಿಕ ಮಾತನಾಡಿದರು. ಬಳಿಕ ಸಂವಾದದಲ್ಲಿ ಒಂದು ದೇಶ ಒಂದು ಚುನಾವಣೆ ಜಾಗೃತಿ ಸಮಿತಿ ರಾಜ್ಯ ಸಂಚಾಲಕ ನವೀನ್ ಶಿವಪ್ರಕಾಶ್ ಅವರು ವಿದ್ಯಾರ್ಥಿಗಳ ಪ್ರಶ್ನೆಗಳಿಗೆ ಉತ್ತರ ನೀಡಿದರು.

ಮೊದಲ ಪುಟದಿಂದ

## ವಿವಿ: ವರದಿ ಆಧರಿಸಿ ತೀರ್ಮಾನ

ವಿನೂತನ ಮಾದರಿಯ 7 ನೂತನ ವಿಶ್ವವಿದ್ಯಾಲಗಳನ್ನು ಸ್ಥಾಪಿಸಲಾಗಿತ್ತು. ಇವುಗಳಲ್ಲಿ ಬಾಗಲಕೋಟೆ ವಿಶ್ವವಿದ್ಯಾಲಯವು ಕೂಡ ಒಂದಾಗಿದೆ. ಈ ವಿಶ್ವವಿದ್ಯಾಲಯಗಳು ಸಾಂಪ್ರದಾಯಿಕ ವಿಶ್ವವಿದ್ಯಾಲಯಗಳಿಗಿಂತ ಭಿನ್ನವಾಗಿ ತಂತ್ರಜ್ಞಾನದ ಗರಿಷ್ಠ ಬಳಕೆಯೊಂದಿಗೆ ಹೆಚ್ಚುವರಿ ಮಾನವ ಸಂಪನ್ಮೂಲ ಉಪಯೋಗಿಸದೇ ಕಾರ್ಯನಿರ್ವಹಿಸಲಿವೆ. ಸ್ನಾತಕೋತ್ತರ ಕೇಂದ್ರಗಳಲ್ಲಿ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸುವ ಈ ವಿಶ್ವವಿದ್ಯಾಲಯಗಳಿಗೆ ವಾರ್ಷಿಕ 2 ಕೋಟಿ ರೂ.ಗಳ ಆವರ್ತಕ ವೆಚ್ಚ ಬಳಸಿ ಕಾರ್ಯನಿರ್ವಹಿಸಲು ಆದೇಶಿಸಲಾಗಿದೆ.

ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದಿಂದ ಬೇರ್ಪಡಿಸಿ ಬಾಗಲಕೋಟೆ ಜಿಲ್ಲೆಯ ವ್ಯಾಪ್ತಿಗೆ ಬರುವ ಮಹಾವಿದ್ಯಾಲಯಗಳನ್ನು ಒಳಪಡುವಂತೆ ಜಮಖಂಡಿಯಲ್ಲಿ ಹೊಸದಾಗಿ ಬಾಗಲಕೋಟೆ ವಿಶ್ವವಿದ್ಯಾಲಯವನ್ನು ಸ್ಥಾಪನೆ ಮಾಡಲಾಗಿದೆ. ರಾಣಿ ಚೆನ್ನಮ್ಮ ವಿವಿಯಿಂದ ಸ್ನಾತಕೋತ್ತರ ಕೇಂದ್ರಗಳು, ಬೋಧಕ, ಬೋಧಕೇತರ ಹುದ್ದೆಗಳು, ಸಂಯೋಜಿತ ಕಾಲೇಜುಗಳು, ಜಮೀನು, ಕಟ್ಟಡ, ಪೀಠೋಪಕರಣ ಸೇರಿದಂತೆ ಚರಾಸ್ತಿ, ಸ್ಥಿರಾಸ್ತಿಗಳನ್ನು ಸ್ಥಳಾಂತರಿಸಲು ಆದೇಶಿಸಲಾಗಿದೆ. ಸಿಬ್ಬಂದಿಯನ್ನು ಬಾಗಲಕೋಟೆ ವಿವಿಗೆ ವರ್ಗಾಯಿಸುವ ಪ್ರಕ್ರಿಯೆ ಪರಿಶೀಲನೆಯಲ್ಲಿದೆ.

## ಪೋಕ್ಸೋ: ಬಿಎಸ್‌ವೈ ನಿರಾಳ

ಹೈಕೋರ್ಟ್‌ಗೆ ತಕರಾರು ಅರ್ಜಿ ಸಲ್ಲಿಸಿದ್ದರು.ಪ್ರಕರಣ ಸಂಬಂಧ ತಮ್ಮ ವಿರುದ್ಧದ ದೂರು, ಎಫ್‌ಐಆರ್, ಸಿಐಡಿ ಪೊಲೀಸರು ದಾಖಲಿಸಿರುವ ದೋಷಾರೋಪ ಪಟ್ಟಿ ಮತ್ತು 2025ರ ಫೆ.28ರಂದು ಪೋಕ್ಸೋ ವಿಶೇಷ ನ್ಯಾಯಾಲಯದ ವಿಚಾರಣಾ ಪ್ರಕ್ರಿಯೆಯನ್ನು ರದ್ದುಪಡಿಸಲು ಕೋರಿದ್ದರು..ಪ್ರಕರಣ ಸಂಬಂಧ ಈ ಹಿಂದೆ ಸಮನ್ಸ್ ರದ್ದತಿಗೆ ಕೋರಿ ಸಲ್ಲಿಸಿದ್ದ ಅರ್ಜಿಯನ್ನು 2025ರ ಫೆ.7ರಂದು ವಜಾಗೊಳಿಸಿದ್ದ ಹೈಕೋರ್ಟ್, ವಿಶೇಷ ನ್ಯಾಯಾಲಯವು ತೆಗೆದುಕೊಂಡಿದ್ದ ಕಾಗ್ನಿಜೆನ್ಸ್ ರದ್ದುಪಡಿಸಿತ್ತು. ಅಲ್ಲದೇ, ಹೈಕೋರ್ಟ್ ಮತ್ತು ಸುಪ್ರಿಂ ಕೋರ್ಟ್‌ನ ಆದೇಶಗಳನ್ನು ಗಮನದಲ್ಲಿರಿಸಿಕೊಂಡು ಹೊಸದಾಗಿ ಕಾಗ್ನಿಜೆನ್ಸ್ ತೆಗೆದುಕೊಂಡು ಕಾನೂನು ಪ್ರಕಾರ ಆದೇಶ ಹೊರಡಿಸಬೇಕು ಎಂದು ಸೂಚಿಸಿತ್ತು. ನಂತರ ಸಿಐಡಿ ಸಲ್ಲಿಸಿರುವ ದೋಷಾರೋಪ ಪಟ್ಟಿಯನ್ನು ಆಧರಿಸಿ ವಿಶೇಷ ನ್ಯಾಯಾಲಯವು ಕಾಗ್ನಿಜೆನ್ಸ್ ತೆಗೆದುಕೊಂಡು ಯಡಿಯೂರಪ್ಪ ಅವರಿಗೆ ಸಮನ್ಸ್ ನೀಡಿತ್ತು ಹಾಗೂ ಮಾ.15ರಂದು ವಿಚಾರಣೆಗೆ ಹಾಜರಾಗಲು ಸೂಚಿಸಿತ್ತು. ಅದನ್ನು ಪ್ರಶ್ನಿಸಿ ಇದೀಗ ಯಡಿಯೂರಪ್ಪ ಮತ್ತೆ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ಲೈಂಗಿಕ ದೌರ್ಜನ್ಯ ಅಪರಾಧ ಎಸಗಿರುವುದನ್ನು ಸಾಬೀತುಪಡಿಸುವ ಯಾವೊಂದು ದಾಖಲೆಯೂ ಇಲ್ಲ. ಕೇವಲ ದುರುದ್ದೇಶ ಮತ್ತು ಸಮಾಜದಲ್ಲಿ ತಾವು ಗಳಿಸಿರುವ ಗೌರವವನ್ನು ಹಾಳು ಮಾಡಲು ಸುಳ್ಳು ದೂರು ದಾಖಲಿಸಲಾಗಿದೆ. ಸಿಐಡಿ ತನಿಖಾಧಿಕಾರಿಗಳು ಹಲವು ಸ್ವತಂತ್ರ ಸಾಕ್ಷಿಗಳ ವಿಚಾರಣೆಗೊಳಿಸದ ನಂತರವೂ ತಾವು ಲೈಂಗಿಕ ದೌರ್ಜನ್ಯ ಎಸಗಿರುವುದಕ್ಕೆ ಯಾವೊಂದು ಸಾಕ್ಷಿಯೂ ದೋಷಾರೋಪ ಪಟ್ಟಿಯಲ್ಲಿ ಒದಗಿಸಿಲ್ಲ. ಕೇವಲ ಸಂತ್ರಸ್ತೆಯ ಹೇಳಿಕೆ ಆಧರಿಸಿ ದೋಷಾರೋಪಪಟ್ಟಿ ಸಲ್ಲಿಸಿದ್ದರೆ ಎಂದು ಅರ್ಜಿಯಲ್ಲಿ ಯಡಿಯೂರಪ್ಪ ಆಕ್ಷೇಪಿಸಿದ್ದಾರೆ.

ಅಲ್ಲದೆ, ಹೈಕೋರ್ಟ್ ಈ ಹಿಂದೆ ಹೊರಡಿಸಿರುವ ಆದೇಶ ಉಲ್ಲಂಘಿಸಿ ವಿಶೇಷ ನ್ಯಾಯಾಲಯ ಕಾಗ್ನಿಜೆನ್ಸ್ ತೆಗೆದಕೊಂಡು ಸಮನ್ಸ್ ಜಾರಿ ಮಾಡಿದೆ. ಆ ಆದೇಶವನ್ನು ರದ್ದುಪಡಿಸಬೇಕು. ಅರ್ಜಿ ಇತ್ಯರ್ಥವಾಗುವರೆಗೆ ಸಮನ್ಸ್‌ಗೆ ತಡೆ ನೀಡಬೇಕು ಎಂದು ಕೋರಿದ್ದಾರೆ. ಅಪ್ರಾಪ್ತೆ ಮೇಲೆ ಲೈಂಗಿಕ ದೌರ್ಜನ್ಯ ಎಸಗಿರುವ ಆರೋಪ ಸಂಬಂಧ ಸಂತ್ರಸ್ತೆಯ ತಾಯಿ 2024ರ ಮಾ.14ರಂದು ಸದಾಶಿವನಗರ ಪೊಲೀಸ್ ಠಾಣೆಗೆ ದೂರು ಸಲ್ಲಿಸಿದ್ದರು. ಆ ದೂರು ಆಧರಿಸಿ ಪೊಲೀಸರು ಎಫ್‌ಐಆರ್ ದಾಖಲಿಸಿದ್ದರು. ನಂತರ ಸಿಐಡಿಗೆ ತನಿಖೆ ವರ್ಗಾವಣೆಯಾಗಿತ್ತು. ಸಿಐಡಿ ಪೊಲೀಸರು ಯಡಿಯೂರಪ್ಪ ವಿರುದ್ಧ ದೋಷಾರೋಪ ಪಟ್ಟಿ ಸಲ್ಲಿಸಿದ್ದರು.

## ವೈದ್ಯಕೀಯ ಪರಿಹಾರ

ಕಾಕ್ಲಿಯಾರ್ ಇಂಪ್ಲಾಂಟ್ ಯೋಜನೆ ಅಡಿಯಲ್ಲಿ ಕಡ್ಡಾಯ ನವಜಾತ ಶಿಶುಗಳ ಶ್ರವಣ ತಪಾಸಣೆ ನಡೆಸಿ, ಗುರುತ ಹಚ್ಚಿದ ತೀವ್ರತರವಾದ/ಗಂಭೀರ ಸ್ವರೂಪದ ಶ್ರವಣದೋಷವುಳ್ಳ 6 ವರ್ಷದ ಕೆಳಗಿನ ಮಕ್ಕಳಿಗೆ ಶ್ರವಣ ಸಾಧನಗಳನ್ನು ನೀಡಲಾಗುವುದು. ಜೊತೆಗೆ ಟ್ರಯಲ್ ಆಡಿಟರಿವರ್ಬಲ್ ಥೆರಪಿಯನ್ನು ಒದಗಿಸಲಾಗುವುದು, ವಿವಿಧ ಥೆರಪಿ ಚಿಕಿತ್ಸೆಗಳನ್ನು ಉಚಿತವಾಗಿ ಒದಗಿಸಲಾಗುತ್ತಿದ್ದು, 2016–17 ರಿಂದ ಇಲ್ಲಿಯವರೆಗೆ 665 ಫಲಾನುಭವಿಗಳಿಗೆ ಶಸ್ತ್ರಚಿಕಿತ್ಸೆ ನಡೆಸಲಾಗಿದೆ ಎಂದು ಸಚಿವರು ಮಾಹಿತಿ ನೀಡಿದರು.

ಜೊತೆಗೆ ನಿರಾಮಯ ಆರೋಗ್ಯ ವಿಮಾ ಯೋಜನೆಯಡಿ 4 ಬಗೆಯ ವಿಕಲಚೇತನರಿಗೆ ಖಾಸಗಿ ಅಥವಾ ಸರ್ಕಾರಿ ಆಸ್ಪತ್ರೆಗಳಲ್ಲಿ ಪಡೆದ ಚಿಕಿತ್ಸೆಯ ಗರಿಷ್ಠ 1 ಲಕ್ಷದವರೆಗೆ ಶಸ್ತ್ರಚಿಕಿತ್ಸೆ ಹಾಗೂ ವೈದ್ಯಕೀಯ ವೆಚ್ಚಗಳನ್ನು ಕೇಂದ್ರ ಸರ್ಕಾರ ಗುರುತಿಸಿರುವ ಸಂಸ್ಥೆಯ ಮುಖಾಂತರ ಪಡೆಯುತ್ತಿದ್ದಾರೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ವಿಕಲಚೇತನರಿಗೆ ಕೈಗೊಂಡಿರುವ ಕಾರ್ಯಕ್ರಮಗಳು ಹಾಗೂ ಯೋಜನೆಗಳ ಬಗ್ಗೆ ಸರ್ಕಾರ ಹಾಗೂ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಅವರ ಕಾರ್ಯಕ್ಷಮತೆಗೆ ವಿಧಾನ ಪರಿಷತ್ ಸದಸ್ಯರಾದ ಸತೀಶ್ ಮೆಚ್ಚುಗೆ ವ್ಯಕ್ತಪಡಿಸಿದರು. ಪ್ರಶ್ನೆ ಮಧ್ಯೆಯೇ ಸಚಿವರನ್ನು ಶ್ಲಾಘಿಸಿದರು. ಪ್ರತಿಯಾಗಿ ಸಚಿವರು ಸತೀಶ್ ಅವರಿಗೆ ಧನ್ಯವಾದ ಅರ್ಪಿಸಿದರು.

## ಆಚರಣೆಗೆ ನಿರ್ಬಂಧ

ಹೋಳಿ ಹಬ್ಬದ ಶುಭಾಶಯಗಳು. ಮೆಟ್ರೋದಲ್ಲಿ ಪ್ರಯಾಣಿಸಿ ಆದರೆ ಮೆಟ್ರೋದಲ್ಲಿ ಬಣ್ಣ ತರಬೇಡಿ. ಒಗ್ಗಟ್ಟು, ಸಂತೋಷ ಮತ್ತು ವರ್ಣರಂಜಿತ ನೆನಪುಗಳ ಪ್ರಯಾಣದೊಂದಿಗೆ ಈ ಹೋಳಿ ಹಬ್ಬವನ್ನು ಆಚರಿಸೋಣ. #ಬಿಎಂಆರ್‌ಸಿಎಲ್ ನಿಮಗೆ ಸುರಕ್ಷಿತ ಮತ್ತು ವರ್ಣರಂಜಿತ ಹೋಳಿಯನ್ನು ಹಾರೈಸುತ್ತದೆ ಎಂದು ಬಿಎಂಆರ್ ಸಿಎಲ್ ಟ್ವೀಟ್ ಮಾಡಿದೆ.

## ಟೌನ್‌ಶಿಪ್ ಅಭಿವೃದ್ಧಿ

ಲಭ್ಯವಿದ್ದು, ಅದರಲ್ಲಿ 600 ಎಕರೆಯನ್ನು ಕೈಗಾರಿಕಾ ಅಭಿವೃದ್ಧಿಗೆ ಹಾಗೂ ಉಳಿದ 300 ಎಕರೆಯನ್ನು ಇಂಟಿಗ್ರೇಟೆಡ್ ಟೌನ್‌ಶಿಪ್‌ಗಳ ಅಭಿವೃದ್ಧಿಗೆ ಬಳಸಿಕೊಳ್ಳುವ ತೀರ್ಮಾನ ಮಾಡಲಾಗಿದೆ. ಇದನ್ನು 2024–25ನೇ ಸಾಲಿನ ಬಜೆಟ್‌ನಲ್ಲೂ ಘೋಷಣೆ ಮಾಡಲಾಗಿದೆ ಎಂದು ಹೇಳಿದರು.

ಈ ಟೌನ್‌ಶಿಪ್‌ಗಳನ್ನು ಸ್ಥಾಪಿಸಲು ಕೆಯುಐಡಿಎಫ್‌ಸಿ ಸಂಸ್ಥೆಯನ್ನು ನೋಡಲ್ ಏಜೆನ್ಸಿಯಾಗಿ ನೇಮಕ ಮಾಡಲಾಗಿದೆ. ನಗರಾಭಿವೃದ್ಧಿ ಪ್ರಾಧಿಕಾರಗಳ ಆಯುಕ್ತರು, ಗ್ರಾಮಾಂತರ ಯೋಜನಾ ಆಯುಕ್ತಾಲಯ ಇವರೆಲ್ಲಾ ಸ್ಥಳ ಪರಿಶೀಲನೆಯನ್ನು ನಡೆಸಿರುತ್ತಾರೆ. ಕೆಜಿಎಫ್ ನಗರಾಭಿವೃದ್ಧಿ ಪ್ರಾಧಿಕಾರದಿಂದ ಜಮೀನಿನ ಗಡಿ ಗುರುತಿಸುವ ಕೆಲಸವೂ ಆಗಿದೆ. ನಾಮಫಲಕಗಳನ್ನು ಅಳವಡಿಸಲಾಗಿದೆ ಎಂದು ಅವರು ಹೇಳಿದರು. ಆದಷ್ಟು ಶೀಘ್ರ ಇಲ್ಲೆಲ್ಲಾ ಟೌನ್‌ಶಿಫ್‌ಗಳನ್ನು ನಿರ್ಮಾಣ ಮಾಡಬೇಕೆಂಬುದು ಮುಖ್ಯಮಂತ್ರಿ ಸಿದ್ದರಾಮಯ್ಯನವರ ಆಶಯವಾಗಿದೆ. ಅದರಂತೆ ಆದಷ್ಟು ಶೀಘ್ರ ಟೌನ್‌ಶಿಫ್‌ಗಳ ನಿರ್ಮಾಣ ಕಾರ್ಯಕ್ಕೆ ಚಾಲನೆ ನೀಡುತ್ತೇವೆ ಎಂದು ಅವರು ಹೇಳಿದರು.

## ಅನುಮಾನಾಸ್ಪದ ಸಾವು

ಕೂಡಲೇ ಶಿಕ್ಷಕರು ಆಕೆಗೆ ಕೊಡ್ಲಿಪೇಟೆ ಸರ್ಕಾರಿ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ಕೊಡಿಸಿ ನಂತರ ಹಾಸನದ ಖಾಸಗಿ ಆಸ್ಪತ್ರೆಗೆ ಕರೆತರುವಷ್ಟರಲ್ಲಿ ಸಾವನ್ನಪ್ಪಿದ್ದಾಳೆ. ಪೂರ್ವಿಕಾ ಮೃತದೇಹ ಜಿಲ್ಲಾಸ್ಪತ್ರೆ ಶವಾಗಾರಕ್ಕೆ ರವಾನೆ ಮಾಡಲಾಗಿ ಸೋಮವಾರಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಅಧ್ಯಕ್ಷತೆಯಲ್ಲಿ ಸಮಿತಿ ರಚನೆ

ಹಾಗಾಗಿಯೇ ಉಪಸಭಾಧ್ಯಕ್ಷರ ನೇತೃತ್ವದಲ್ಲಿ ಸಮಿತಿ ರಚಿಸಿ ಯಾವ ಯಾವ ಅಧಿಕಾರಿ ಉತ್ತರ ನೀಡಿಲ್ಲ ಎಂಬುದನ್ನು ಪತ್ತೆಹಚ್ಚಿ ಆ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು. ಸಭಾಧ್ಯಕ್ಷರು ಈ ರೀತಿ ಹೇಳಿದ ನಂತರವೂ ಮಾತು ಮುಂದುವರೆಸಿದ ಬಿ.ಪಿ. ಹರೀಶ್ ಅವರು ದಾವಣಗೆರೆಯಲ್ಲಿ ಕೆಐಎಡಿಬಿ 50 ಎಕರೆ ಜಮೀನನ್ನು ಸ್ವಾಧೀನಪಡಿಸಿಕೊಂಡಿದೆ. 20 ಎಕರೆಯಲ್ಲಿ ರೈತರು ಸಾಗುವಳಿ ಮಾಡುತ್ತಿದ್ದರು. ಅವರನ್ನು ಒಕ್ಕಲೆಬ್ಬಿಸಲಾಗಿದೆ. ಶಾಮನೂರು ಶುಗರ್ಸ್‌ಗೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ಭೂಸ್ವಾಧೀನ ಮಾಡಲಾಗಿದೆ. ಪರಿಹಾರವನ್ನು ಕೊಟ್ಟಿಲ್ಲ ಎಂದು ಹೇಳಿದರು.

ಇದರಿಂದ ಸಿಟ್ಟಾದ ಸಭಾಧ್ಯಕ್ಷರು, ನೀವು ನೋಟಿಸ್ ಕೊಡದೆ ಈ ರೀತಿ ಮಾತನಾಡುವುದು ಸರಿಯಲ್ಲ. ನೋಟಿಸ್ ಕೊಡಿ, ಮಾತನಾಡಿ ಎಂದು ಹೇಳಿದರು. ಆಗ ಹರೀಶ್ ಅವರು ಶಾಮನೂರ್ ಶುಗರ್ಸ್ ಹೆಸರೇಳುತ್ತಿದ್ದಂತೆ ನೀವು ಅವರ ಪರ ಮಾತನಾಡುತ್ತಿದ್ದೀರಿ, ಇದು ಸರಿಯಲ್ಲ. ನಾನು ನೋಟಿಸ್ ಕೊಟ್ಟಿದ್ದೇನೆ. 4 ಅಧಿವೇಶನದಿಂದ ಪ್ರಶ್ನೆ ಮಾಡಿದರೂ ಉತ್ತರ ಸಿಗುತ್ತಿಲ್ಲ. ನೀವು ಕ್ರಮ ತಗೊಳ್ಳಿ ಎಂದು ಒತ್ತಾಯಿಸಿ, ಸರ್ಕಾರಿ ಜಮೀನನ್ನು ಕಬಳಿಸುವ ಪ್ರಯತ್ನ ನಡೆದಿದೆ ಎಂದು ಅವರು ದೂರಿದರು.

## ಬಾಧೆ ಮುಕ್ತಕ್ಕೆ ಕ್ರಮ

ಮೂಲಕ ಸಮಗ್ರ ಪೋಷಕಾಂಶಗಳನ್ನು ಒದಗಿಸಿ ಕೀಟ ಮತ್ತು ರೋಗಗಳ ನಿವಾರಣೆಗೆ ಕ್ರಮ ಕೈಗೊಳ್ಳಲಾಗಿದೆ. ಇದಕ್ಕಾಗಿ ತೆಂಗು ಅಭಿವೃದ್ಧಿ ಮಂಡಳಿಗೆ 15 ಕೋಟಿ ರೂ.ಗಳನ್ನು ಒದಗಿಸಲಾಗಿದೆ ಎಂದರು.

ತೆಂಗು ಮರಗಳಿಗೆ ಬಿಳಿ ಹುಳ ರೋಗ ತಗುಲಿರುವ ಹಿನ್ನೆಲೆಯಲ್ಲಿ ಸದಸ್ಯರು ಪರಿಹಾರ ನೀಡಬೇಕು ಎಂದು ಒತ್ತಾಯಿಸಿದ್ದಾರೆ. ಈ ಬಗ್ಗೆ ಇದನ್ನು ಸಂಬಂಧಿಸಿದ ಸಚಿವರ ಗಮನಕ್ಕೆ ತಂದು ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಬಿಳಿ ಹುಳ ರೋಗಬಾಧೆಯಿಂದ ಬೆಳೆ ನಷ್ಟವಾಗಿರುವ ತೆಂಗು ಬೆಳೆಗಾರರಿಗೆ ಪರಿಹಾರ ನೀಡುವ ಬಗ್ಗೆಯೂ ಸರ್ಕಾರ ಸೂಕ್ತ ತೀರ್ಮಾನ ಕೈಗೊಳ್ಳುತ್ತದೆ ಎಂದು ಅವರು ಹೇಳಿದರು.

ಈ ಯೋಜನೆಯಡಿ ಪ್ರಾತ್ಯಕ್ಷಿತೆ ತಾಕುಗಳನ್ನು ನಿರ್ವಹಿಸಲು ಪ್ರತಿ ಹೆಕ್ಟೇರ್‌ಗೆ 35 ಸಾವಿರ ರೂ.ಗಳನ್ನು 2 ವರ್ಷಗಳಲ್ಲಿ ವಿನಿಯೋಗಿಸಲಾಗುತ್ತಿದೆ. ಕೀಟನಾಶಕದ ಬಗ್ಗೆಯೂ ರೈತರಿಗೆ ಅರಿವು ಮೂಡಿಸಲಾಗುತ್ತಿದೆ ಎಂದು ಅವರು ಹೇಳಿದರು.

ಸದಸ್ಯರಾದ ಷಡಕ್ಷರಿ ಮತ್ತು ಸುರೇಶ್‌ಗೌಡ ಇವರುಗಳು ಬಿಳಿಹುಳ ರೋಗಬಾಧೆಗೆ ಪರಿಹಾರ ಕಂಡುಕೊಳ್ಳಲು ಕೇಂದ್ರ ತೆಂಗು ಮಂಡಳಿ ಸಂಶೋಧನೆ ನಡೆಸುವ ಸಂಬಂಧವೂ ಕ್ರಮ ಆಗಬೇಕು ಎಂದು ಒತ್ತಾಯಿಸಿದ್ದರು.

## ಇತ್ಯರ್ಥವಾದ ಕೂಡಲೇ ನಿರ್ಧಾರ

ಕರ್ನಾಟಕ ಲೋಕಸೇವಾ ಆಯೋಗದ ಮೂಲಕ 247 ಪಿಡಿಒ ನೇಮಕಾತಿಗೆ ಸಂಬಂಧಿಸಿದಂತೆ ಪಟ್ಟಿಯನ್ನು ಪ್ರಕಟಿಸುವಂತೆ ಅಲ್ಲಿನ ಕಾರ್ಯದರ್ಶಿಗಳಿಗೆ ಪತ್ರ ಬರೆಯಲಾಗಿದೆ. ಪರೀಕ್ಷೆ ನಡೆದು ಎರಡೂವರೆ ತಿಂಗಳು ಆಗಿರುವುದರಿಂದ ಏಕೆ ವಿಳಂಬವಾಗುತ್ತದೆ ಎಂದು ಕೇಳಿದ್ದೇವೆ. ಅಂತಿಮ ಪಟ್ಟಿಯನ್ನು ಪ್ರಕಟಿಸಿದ ನಂತರ ನಮಗೆ 247 ಹುದ್ದೆಗಳು ಲಭ್ಯವಾಗಲಿವೆ. ಇದರಿಂದ ಒಬ್ಬರಿಗೆ ಒಂದೇ ಪಂಚಾಯ್ತಿಯಲ್ಲಿ ಕಾರ್ಯ ನಿರ್ವಹಿಸಲು ಸಾಧ್ಯವಾಗುತ್ತದೆ ಎಂದರು. ರಾಯಚೂರು ಜಿಲ್ಲೆ ದೇವದುರ್ಗ ತಾಲ್ಲೂಕಿನಲ್ಲಿ ಉದ್ಯೋಗ ಖಾತ್ರಿ ಯೋಜನೆಯಡಿ ದೇಶದಲ್ಲೇ ಅತಿದೊಡ್ಡ ಭ್ರಷ್ಟಾಚಾರ ನಡೆದಿದೆ. ಇಲ್ಲಿ 350 ಕೋಟಿ ರೂ. ಹಗರಣವಾಗಿರುವುದು ಕಂಡುಬಂದಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ 37 ಪಿಡಿಒ, ಇಒ ಮತ್ತಿತರ ಅಧಿಕಾರಿಗಳನ್ನು ಅಮಾನತುಪಡಿಸಲಾಗಿದೆ ಎಂದು ತಿಳಿಸಿದರು. ಈ ರೀತಿ ಆಗದಂತೆ ನಾವು ಸೋಷಿಯಲ್ ಆಡಿಟ್ ನಡೆಸುತ್ತಿದ್ದೇವೆ. ಮುಂದೆ ಈ ರೀತಿ ಆಗದಂತೆ ಎಚ್ಚರ ವಹಿಸಲಾಗುವುದು. 10ರಿಂದ 12 ವರ್ಷ ಉದ್ಯೋಗ ಖಾತ್ರಿಯಲ್ಲಿ ಅವ್ಯವಹಾರ ನಡೆದಿದೆ ಎಂಬ ಆರೋಪವಿದೆ. ಮುಂದಿನ ದಿನಗಳಲ್ಲಿ ಇದರ ಬಗ್ಗೆ ವಿವರವನ್ನು ನೀಡಲಾಗುವುದೆಂದು ಮಾಹಿತಿ ನೀಡಿದರು.

ನರೇಗಾ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಒಟ್ಟು 344 ಸಹಾಯಕ ನಿರ್ದೇಶಕ ಹುದ್ದೆಗಳು ಖಾಲಿಯಿವೆ. ಇದನ್ನು ಹಂತ ಹಂತವಾಗಿ ಭರ್ತಿ ಮಾಡಿಕೊಳ್ಳಲಾಗುವುದು. ಯಾರಿಗೂ ಕಾರ್ಯ ಒತ್ತಡವಾಗದಂತೆ ಕ್ರಮ ಕೈಗೊಂಡಿದ್ದೇವೆ. ಮುಂದಿನ ದಿನಗಳಲ್ಲಿ ಈ ಬಗ್ಗೆ ಕ್ರಮ ವಹಿಸುವುದಾಗಿ ತಿಳಿಸಿದರು.

## ನ್ಯಾಯಾಂಗ ಬಂಧನ

ಕಸ್ಟಡಿ ಅವಧಿ ಮುಗಿದ ಹಿನ್ನೆಲೆ ತರುಣ ರಾಜುವನ್ನು ಅಧಿಕಾರಿಗಳು ಶುಕ್ರವಾರ ನ್ಯಾಯಾಲಯಕ್ಕೆ ಹಾಜರುಪಡಿಸಿ ನ್ಯಾಯಾಂಗ ಬಂಧನ ವಿಧಿಸುವಂತೆ ಮನವಿ ಮಾಡಿದ್ದರು. ನ್ಯಾಯಾಧೀಶರಾದ ವಿಶ್ವನಾಥ್ ಸಿಗೌಡರ್ ಅವರು ಆರೋಪಿ ತರುಣ್ ರಾಜುಗೆ 14 ದಿನ ನ್ಯಾಯಾಂಗ ಬಂಧನ ವಿಧಿಸಿ ಆದೇಶ ಹೊರಡಿಸಿದ್ದಾರೆ. ಈಗಾಗಲೇ ನಟಿ ರನ್ಯಾರಾವ್ 15 ದಿನಗಳ ಕಾಲ ನ್ಯಾಯಾಂಗ ಬಂಧನದಲ್ಲಿದ್ದಾರೆ.

## ಪಾಕ್ ಉಗ್ರ ತಾಣ

ಶಫ್ಕತ್ ಅಲಿ ಖಾನ್ ಹೇಳಿಕೆಗೆ ಭಾರತದ ವಿದೇಶಾಂಗ ಸಚಿವಾಲಯ ತೀವ್ರ ಆಕ್ರೋಶ ವ್ಯಕ್ತಪಡಿಸಿದೆ.

ಪಾಕಿಸ್ತಾನದ ಬಲುಚಿಸ್ತಾನದಲ್ಲಿ ರೈಲು ಹೈಜಾಕ್ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ ಭಾರತ, ಭಯೋತ್ಪಾದನೆಯ ತಾಣ ಯಾವುದು ಎನ್ನುವುದು ಇಡೀ ಜಗತ್ತಿಗೆ ಗೊತ್ತಿದೆ ಎಂದು ಪಾಕಿಸ್ತಾನಕ್ಕೆ ವಿದೇಶಾಂಗ ಸಚಿವಾಲಯ ತಿರುಗೇಟು ನೀಡಿದೆ.

ಜಾಗತಿಕ ಭಯೋತ್ಪಾದನೆಯ ತಾಣ ಯಾವುದೇ ಎನ್ನುವುದು ಇಡೀ ಜಗತ್ತಿಗೆ ಗೊತ್ತಿರುವಾಗ ಭಯೋತ್ಪಾದನೆ ವಿಷಯದಲ್ಲಿ ಪದೇ ಪದೇ ನಿರಾಕರಿಸುವುದು, ಭಯೋತ್ಪಾದನೆಯೇ ಇಲ್ಲ ಎನ್ನುವು ಹೇಳಿಕೆ ಹಾಸ್ಯಾಸ್ಪದ ಎಂದು ಪಾಕಿಸ್ತಾನದ ವಿರುದ್ಧ ವಿದೇಶಾಂಗ ವ್ಯವಹಾರಗಳ ಸಚಿವಾಲಯ ವಾಗ್ದಾಳಿ ನಡೆಸಿದೆ.

ಪಾಕಿಸ್ತಾನ, ಭಾರತದ ವಿರುದ್ಧ ಭಯೋತ್ಪಾದನೆಯನ್ನು ಬೆಂಬಲಿಸುತ್ತಿದೆ ಎಂದು ಹೇಳಿರುವ ಭಾರತ, ಬಲೂಚಿಸ್ತಾನದಲ್ಲಿ ರೈಲು ಹೈಜಾಕ್ ಮಾಡಿ 21 ಜನರನ್ನು ಕೊಂದ ಬಲೂಚಿಸ್ತಾನ್ ರೈಲು ದಾಳಿಗೆ ಅದನ್ನು ನೇರ ಸಂಬಂಧವಿದೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಹೇಳಿದ್ದಾರೆ.

ಪಾಕಿಸ್ತಾನ ನಿರಂತರವಾಗಿ ಭಯೋತ್ಪಾದನೆಗೆ ಕುಮ್ಮಕ್ಕು, ಪಾಕಿಸ್ತಾನದ ನೆಲದಲ್ಲಿ ಯಾವುದೇ ಭಯೋತ್ಪಾದನೆ ಕೃತ್ಯಗಳಿಗೆ ಅವಕಾಶ ಅಥವಾ ಬೆಂಬಲ ನೀಡುವುದಿಲ್ಲ ಎಂದು ಹೇಳಿಕೆ ನೀಡುತ್ತಿರುವ ಪಾಕಿಸ್ತಾನದ ಕ್ರಮ ಅತ್ಯಂತ ಖಂಡನಾರ್ಹ ಎಂದಿದ್ದಾರೆ

ಭಾರತದ ವಿರುದ್ಧ "ಪಾಕಿಸ್ತಾನ ಮಾಡಿದ ಆಧಾರರಹಿತ ಆರೋಪಗಳನ್ನು ಬಲವಾಗಿ ತಿರಸ್ಕರಿಸುತ್ತೇವೆ. ಜಾಗತಿಕ ಭಯೋತ್ಪಾದನೆಯ ಕೇಂದ್ರಬಿಂದು ಎಲ್ಲಿದೆ ಎಂದು ಇಡೀ ಜಗತ್ತಿಗೆ ತಿಳಿದಿದೆ" "ಪಾಕಿಸ್ತಾನ ಬೆರಳುಗಳನ್ನು ತೋರಿಸಿ ತನ್ನ ಆಂತರಿಕ ಸಮಸ್ಯೆಗಳು ಮತ್ತು ವೈಫಲ್ಯಗಳ ಹೊಣೆಯನ್ನು ಇತರರ ಮೇಲೆ ಹೊರಿಸುವ ಬದಲು ತನ್ನಲ್ಲಿರುವ ಸಮಸ್ಯೆಯನ್ನು ಅರ್ಥ ಮಾಡಿಕೊಂಡು ಅದಕ್ಕೆ ಪರಿಹಾರ ಕಂಡುಕೊಳ್ಳಬೇಕಾಗಿದೆ ಎಂದು ಹೇಳಿದ್ದಾರೆ.

ಬಲುಚಿಸ್ತಾನ ಪ್ರಾಂತ್ಯದಲ್ಲಿ ಜಾಫರ್ ಎಕ್ಸ್‌ಪ್ರೆಸ್ ಮೇಲೆ ನಡೆದ ಮಾರಕ ದಾಳಿಯ ನಂತರ ಪಾಕಿಸ್ತಾನದ ಆರೋಪಗಳು ಕೇಳಿಬಂದವು, 24 ಗಂಟೆಗಳಿಗೂ ಹೆಚ್ಚು ಕಾಲ ಒತ್ತೆಯಾಳನ್ನು ಉಗ್ರರು ತಮ್ಮ ವಶದಲ್ಲಿಟ್ಟುಕೊಂಡಿದ್ದರು

ಭಾರತ ನೆರೆಯ ರಾಷ್ಟ್ರಗಳನ್ನು ಅಸ್ಥಿರಗೊಳಿಸಲು "ಜಾಗತಿಕ ಹತ್ಯೆ ಅಭಿಯಾನ" ನಡೆಸುತ್ತಿದೆ ಎಂದು ಪಾಕಿಸ್ತಾನ ಆರೋಪಿಸಿದ್ದು ಪಾಕಿಸ್ತಾನ ಭಯೋತ್ಪಾದಕ ಸಂಘಟನೆ ಎಂದು ಪರಿಗಣಿಸುವ ಬಲೂಚಿಸ್ತಾನ್ ಲಿಬರೇಶನ್ ಆರ್ಮಿಯನ್ನು ಉಲ್ಲೇಖಿಸಿ "ಬಿಎಲ್‌ಎಯನ್ನು ವೈಭವೀಕರಿಸುತ್ತಿದೆ" ಎಂದು ಅವರು ಭಾರತೀಯ ಮಾಧ್ಯಮವನ್ನು ಗುರಿಯಾಗಿಸಿಕೊಂಡು ದಾಳಿ ಮಾಡಲಾಗಿದೆ

## ಕೇಂದ್ರ ಸಚಿವರಿಗೆ ಪತ್ರ

ಮತ್ತು ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿನ ಹೊಟ್ಟೆಬಾಕುತನದಿಂದ ದೊಡ್ಡ ಪ್ರಮಾಣದ ಮೆಣಸಿನಕಾಯಿ ಮಾರಾಟವಾಗದೇ ಹಾಗೇ ಉಳಿದಿದ್ದು, ರೈತರನ್ನು ಸಂಕಷ್ಟಕ್ಕೀಡು ಮಾಡಿದೆ. ರಸಗೊಬ್ಬರ ಕೀಟನಾಶಕಗಳ ಬೆಲೆ ಹೆಚ್ಚಳದಿಂದಾಗಿ ಮೆಣಸಿನಕಾಯಿ ಬೆಳೆಯಲು ಸಾಕಷ್ಟು ವೆಚ್ಚವಾಗುತ್ತಿರುವುದು ತಮಗೆ ಗೊತ್ತಿದೆ. ಇದರಿಂದ ಮೆಣಸಿನಕಾಯಿ ಬೆಳೆಗಾರರು ಸಾಕಷ್ಟು ನಷ್ಟ ಅನುಭವಿಸುತ್ತಿದ್ದಾರೆ.

ಕೇಂದ್ರ ಸರ್ಕಾರ ಆಂಧ್ರಪ್ರದೇಶದ ರೈತರು ಬೆಳೆದ ಮೆಣಸಿನಕಾಯಿ ಖರೀದಿಸಲು ತೀರ್ಮಾನಿಸಿ ಆ ರೈತರ ರಕ್ಷಣೆಗೆ ಮುಂದಾಗಿರುವುದಕ್ಕೆ ಕೇಂದ್ರ ಸರ್ಕಾರಕ್ಕೆ ಧನ್ಯವಾದ ಅರ್ಪಿಸುತ್ತೇನೆ. ಆದರೆ, ಇದರಲ್ಲಿ ಕರ್ನಾಟಕದ ರೈತರು ಇದರಲ್ಲಿ ಸೇರ್ಪಡೆಯಾಗಿರುವುದಿಲ್ಲ. ಈ ಯೋಜನೆ ಅಡಿ ಕರ್ನಾಟಕದ ರೈತರೂ ಬೆಳೆದ ಮೆಣಸಿನಕಾಯಿಯನ್ನೂ ಖರಿದಿಸುವುದು ಅತ್ಯಂತ ಮುಖ್ಯವಾಗಿರುತ್ತದೆ. ಇದರಿಂದ ಕರ್ನಾಟಕದ ರೈತರಿಗೂ ಅನುಕೂಲವಾಗಲಿದೆ. ಆದ್ದರಿಂದ ಇದೊಂದು ಮಹತ್ವದ ಮತ್ತು ಜರೂರು ವಿಷಯವೆಂದು ಪರಿಗಣಿಸಿ ಕರ್ನಾಟಕರ ರಾಜ್ಯದ ಮೆಣಸಿನಕಾಯಿ ಬೆಳೆಯುವ ರೈತರ ರಕ್ಷಣೆಗೆ ಬರಬೇಕೆಂದು ವಿನಂತಿಸಿಕೊಂಡಿದ್ದಾರೆ.

# ಡಿ.ಎನ್.ಎ. ಸಂಶೋಧನೆಯಲ್ಲಿ ಕ್ರಾಂತಿಕಾರಕ ಬದಲಾವಣೆ

**ಬೆಂಗಳೂರು:** ಕಾನ್‌ಕಾರ್ಡ್ ಹೋಟೆಲ್ ಸಭಾಂಗಣದಲ್ಲಿ ಡಾ. ಅಗರ್ವಾಲ್ ಆಸ್ಪತ್ರೆಗಳು ಮತ್ತು ಜೀನ್ ಸಂಶೋಧನಾ ಪ್ರತಿಷ್ಠಾನ ವತಿಯಿಂದ ಜೆನೆಟಿಕ್ ಸಂಶೋಧನೆ ಮತ್ತು ಡಿಎನ್‌ಎ ಮೈಕ್ರೋನ್ ಮ್ಯಾನಿಪ್ಯುಲೇಷನ್‌ಗಾಗಿ ಇನ್ವರ್ಟೆಡ್ ಮೈಕ್ರೋಸ್ಕೋಪ್ ಕಾರ್ಯಗಾರ ಉದ್ಘಾಟನೆಯನ್ನು ಶ್ರೀ ಚೈತನ್ಯಾನಂದ ಸ್ವಾಮೀಜಿರವರು, ಜೆನಟಿಕ್ ಸಂಶೋಧನೆ ಸಂಸ್ಥೆ ಮತ್ತು ಡಾ.ಅಗರವಾಲ್ ಆಸ್ಪತ್ರೆಯ ಅಧ್ಯಕ್ಷೆ ಡಾ. ಸುನಿತಾ ರಾಣಾ ಅಗರ್ವಾಲ್ , ನಟಿ ಅಂಗನಾ ರಾಯ್ ರವರು ಚಾಲನೆ ನೀಡಿದರು.



ಚೈತನ್ಯನಂದಾ ಸರಸ್ವತಿ ಸ್ವಾಮೀಜಿ ರವರು ಮಾತನಾಡಿ, ಜೀನಟಿಕ್ ಚಿಕಿತ್ಸೆಯಿಂದ ರೋಗಿಗಳ ಬಹಳ ಉಪಯೋಗವಾಗಿದೆ. ಜೆನೆಟಿಕ್ ಚಿಕಿತ್ಸೆ ಕಳೆದ 12ವರ್ಷಗಳಿಂದ ಪಡೆಯುತ್ತಿದ್ದೇನೆ ಇದರ ಅನುಕೂಲವಾಗಿದೆ. ಒಲಗಣ್ಣು ತೊಂದರೆಯಾಗಿತ್ತು ಎಡಗಣ್ಣು ಟ್ಯೂಮರ್ ನಿಂದ ಬಳಲುತ್ತಿದೆ. ನನ್ನ ಮೇಲೆ ಒಂದು ತಿಂಗಳ ಕ್ಲಿನಿಕಲ್ ಟ್ರಯಲ್ ನಂತರ ಆರೋಗ್ಯದಲ್ಲಿ ಉತ್ತಮ ಸುಧಾರಣೆಯಾಯಿತು ಎಂದರು.

ಭಾರತದಲ್ಲಿ ವೈದ್ಯಕೀಯ ಕ್ಷೇತ್ರದಲ್ಲಿ ಮಹತ್ವದ ಬದಲಾವಣೆಯಾಗಿದೆ, ಇಡಿ ವಿಶ್ವವೇ ಮೆಚ್ಚುವಂತದಾಗಿದೆ ಅಮೇರಿಕಾಗಿಂತ ಭಾರತ ದೇಶದಲ್ಲಿ ವೈದ್ಯಕೀಯ ಕ್ಷೇತ್ರ ಮುಂದಿದೆ. ಹೀಲಿಂಗ್ ವೈದ್ಯಕೀಯ ಚಿಕಿತ್ಸೆ ಮೂಲಕ ರೋಗ ವಾಸಿಯಾಗುತ್ತಿದೆ.ಡಾ.ಸುನಿತಾ ಅಗರವಾಲ್ ರವರು ವೈದ್ಯಕೀಯ ಕ್ಷೇತ್ರದಲ್ಲಿ ಉತ್ತಮ ಸೇವೆ ಸಲ್ಲಿಸುತ್ತಿದ್ದಾರೆ ಎಂದು ಹೇಳಿದರು.

ಡಾ॥ಸುನೀತಾ ರಾಣಾ ಅಗರವಾಲ್ ರವರು ಮಾತನಾಡಿ ಡಾ. ಅಗರವಾಲ್ ಆಸ್ಪತ್ರೆಗಳು ಮತ್ತು ಜೆನ್ ರಿಸರ್ಚ್ ಫೌಂಡೇಶನ್ ಅಫ್ತಾಲ್ಮಾಲಜಿ (ಕಣ್ಣಿನ ವೈದ್ಯಕೀಯ ಮತ್ತು ಜನಿಟಿಕ್ ಸಂಶೋಧನೆ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿವೆ. ಈಗ, ಈ ಸಂಸ್ಥೆಗಳು ಅತ್ಯಾಧುನಿಕ ತಂತ್ರಜ್ಞಾನಯುತ ಇನ್ವರ್ಟೆಡ್ ಫೇಸ್ ಕಾನ್ಟ್ರಾಸ್ಟ್ ಮೈಕ್ರೋಸ್ಕೋಪ್ ಅನ್ನು ಸಂಶೋಧನೆಗೆ ಬಳಸಲಿದ್ದಾರೆ, ಇದು ಜನಿಟಿಕ್ ಅಧ್ಯಯನ ಮತ್ತು ಡಿಎನ್‌ಎ ಮೈಸ್ಕೋನ್ ಮ್ಯಾನಿಪ್ಯುಲೇಷನ್ ಗಾಗಿ ಸಹಾಯಕವಾಗಲಿದೆ ಎಂದು ತಿಳಿಸಿದರು.

ಹೆಚ್ಚಿನ ಜನರು ಸಂಶೋಧಕರು ಆಗಿದ್ದಾರೆ, ಹೆಚ್ಚಿನ ಉಪಕರಣಗಳು ಸಂಶೋಧನೆಗೆ ಬಂದಿವೆ, ಆದರೆ ಇವುಗಳ ಸಂಯೋಜನೆಯಿಂದ ಅಸಾಧಾರಣ ಫಲಿತಾಂಶ ಬರಬೇಕು ಎಂಬುದರ ತುದಿಗಂತಿಗೆ ನಾವು ಮುಟ್ಟಲು ಹೊರಟಿದ್ದೇವೆ.ಈಗ, ಸ್ನಾಯು ಜೀವಶಾಸ್ತ್ರದ ಸಹಾಯದಿಂದ ಕೇವಲ ಒಂದು ಹನಿಯಷ್ಟು ರಕ್ತವನ್ನು ಬಳಸಿ ರೋಗಿಯದೇ ಆರೋಗ್ಯಕರ ಭ್ರೂಣ ಡಿಎನ್‌ಎ ಮತ್ತು ಸ್ಟೆಮ್ ಸೆಲ್‌ಗಳನ್ನು ಉತ್ಪಾದಿಸಿ, ಅದನ್ನು ರೋಗಿಯ ಚಿಕಿತ್ಸೆಗೆ ಬಳಸಬಹುದು. ಇದನ್ನು ಪ್ರಪಂಚದಲ್ಲಿ ಕೇವಲ ಜೆನ್ ರಿಸರ್ಚ್ ಫೌಂಡೇಶನ್ ಮತ್ತು ಡಾ. ಅಗರವಾಲ್ ಆಸ್ಪತ್ರೆಗಳು ಮಾತ್ರ ಕೈಗೊಳ್ಳುತ್ತಿವೆ ಎಂದರು.

21ವರ್ಷಗಳಲ್ಲಿ 20000ಕ್ಕೂ ಹೆಚ್ಚು ರೋಗಿಗಳಿಗೆ ನೀಡಲಾಗಿದೆ. ಡಿ.ಎನ್.ಎ.ವಯಸ್ಸದಂತೆ ಕುಗ್ಗಿಹೋಗುತ್ತದೆ. ಇದರಿಂದ ಮಧುಮೇಹ, ಕಿಡ್ನಿ ಸಮಸ್ಯೆ, ಮೆದಳು , ನರಗಳ ಸಂಭಂದಿತ ಖಾಯಿಲೆಗಳು ಬರುತ್ತದೆ. ಲೈವ್ ಸೆಲ್ ಇಮೇಜಿಂಗ್ ತಂತ್ರಜ್ಞಾನ ಬಳಸಿ ಆರೋಗ್ಯಕರ ಡಿ.ಎನ್.ಎ. ರೋಗಿಯ ದೇಹ ಸೇರಿಸುವುದರಿಂದ ರೋಗ ವಾಸಿಯಾಗಿ ಆರೋಗ್ಯವಂತರಾಗುತ್ತಾರೆ. ಡಿ.ಎನ್.ಎ.ಯಲ್ಲಿ ಕ್ರಾಂತಿಕಾರ ಸಂಶೋಧನೆಯಾಗುತ್ತಿದೆ ರೋಗಿಗಳ ಗುಣಮುಖರಾಗಲು ಹೊಸ ಬೆಳಕನ್ನು ನೀಡಿದೆ ಎಂದು ಹೇಳಿದರು.

ನಟಿ ಅಂಗನ ರಾಯ್ ರವರು ಡಾ.ಸುನಿತಾ ಅಗರವಾಲ್ ರವರು ಜೆನಟಿಕ್ ಕುರಿತು ಬಹಳ ಅಧ್ಯಯನ ಮಾಡುತ್ತಿದ್ದಾರೆ, ಇದರಿಂದ ಜನರಿಂದ ರೋಗ ತಡೆಗಟ್ಟಲು ಅನುಕೂಲವಾಗಲಿದೆ. ಕೊರೋನ ನಂತರ ಲಕ್ಷಾಂತರ ಜನರಿಗೆ ಅಡ್ ಪರಿಣಾಮ ಬೀರಿತು ಇದರಿಂದ ರೋಗ ಎದುರಿಸುವ ಶಕ್ತಿ ಪಡೆಯಲು ಡಾ.ಸುನಿತಾ ಅಗರವಾಲ್ ರವರ ಸಲಹೆ ಪಡೆಯಬಹುದು ಎಂದು ಹೇಳಿದರು.

# ಈಶಾನ್ಯ ರಾಜ್ಯಗಳ ಮಾದರಿ ಅನುಸರಿಸುವಂತೆ ಒತ್ತಾಯ

**ಬೆಂಗಳೂರು:** ಕ್ಷೇತ್ರ ಪುನರ್ ವಿಂಗಡಣೆ ಮಾಡುವಾಗ ಕರ್ನಾಟಕದ ಪಶ್ಚಿಮಘಟ್ಟ ಪ್ರದೇಶದಲ್ಲಿ ಈಶಾನ್ಯ ರಾಜ್ಯಗಳ ಮಾದರಿ ಅನುಸರಿಸಬೇಕು ಎಂದು ಮೂಡಿಗೆರೆ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಎಂ.ಪಿ.ಕುಮಾರಸ್ವಾಮಿ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ.



ಬೆಂಗಳೂರಿನಲ್ಲಿ ಈ ವಿಷಯ ಕುರಿತು ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಮಾಜಿ ಶಾಸಕ ಎಂ ಪಿ ಕುಮಾರಸ್ವಾಮಿ ಕ್ಷೇತ್ರ ಪುನರ್ ವಿಂಗಡನೆ ಸಮಯದಲ್ಲಿ ಮೊದಲಿನಿಂದಲೂ ಮಲೆನಾಡು ಹಾಗೂ ಪಶ್ಚಿಮಘಟ್ಟ ಪ್ರದೇಶಕ್ಕೆ ಅನ್ಯಾಯವಾಗಿದೆ. ಹಿಂದಿನಿಂದಲೂ ಎರಡು ಮೂರು ತಾಲ್ಲೂಕು ಸೇರಿಸಿ ವಿಧಾನಸಭಾ ಕ್ಷೇತ್ರ ಹಾಗೂ ಎರಡು ಮೂರು ಜಿಲ್ಲೆ ಸೇರಿಸಿ ಲೋಕಸಭಾ ಕ್ಷೇತ್ರ ಮಾಡಲಾಗಿದೆ ಉದಾಹರಣೆಗೆ ಉಡುಪಿ-ಚಿಕ್ಕಮಗಳೂರು ಲೋಕಸಭಾ ಕ್ಷೇತ್ರ. ಹೀಗೆ ಮಾಡುವುದರಿಂದ ಮಲೆನಾಡು ಭಾಗದ ಸಮಗ್ರ ಅಭಿವೃದ್ಧಿಗೆ ತುಂಬಾ ತೊಂದರೆಯಾಗುತ್ತದೆ ಎಂದು ಎಂ.ಪಿ.ಕುಮಾರಸ್ವಾಮಿ ಹೇಳಿದ್ದಾರೆ.

ಈಶಾನ್ಯ ರಾಜ್ಯಗಳಲ್ಲಿ ಜನಸಂಖ್ಯೆ ಕಡಿಮೆ ಮಾಡಿ ವಿಧಾನಸಭಾ ಕ್ಷೇತ್ರ ಹಾಗೂ ಲೋಕಸಭಾ ಕ್ಷೇತ್ರ ರಚಿಸಲಾಗಿದೆ, ಅದೇ ಮಾದರಿಯಲ್ಲಿ ರಾಜ್ಯದ ಪಶ್ಚಿಮಘಟ್ಟ ಹಾಗೂ ಮಲೆನಾಡು ಪ್ರದೇಶಗಳಲ್ಲೂ ಜನಸಂಖ್ಯೆ ಹಾಗೂ ಭೌಗೋಳಿಕ ವಿಸ್ತೀರ್ಣ ಮಿತಿಗೊಳಿಸಿ ಕ್ಷೇತ್ರ ಪುನರ್ ವಿಂಗಡನೆ ಮಾಡಬೇಕು. ಈ ನಿಯಮವನ್ನು ಪಶ್ಚಿಮ ಘಟ್ಟ ಪ್ರದೇಶಗಳಿಗೆ ಮಾತ್ರ ಅನ್ವಯಿಸಬೇಕು ಎಂದು ಸಲಹೆ ನೀಡಿದ ಅವರು ಹೀಗೆ ಮಾಡುವುದರಿಂದ ಆ ಭಾಗದಿಂದ ಆಯ್ಕೆಯಾಗಿಬಂದ ಜನಪ್ರತಿನಿಧಿಗಳಿಗೆ ತಮ್ಮ ಕ್ಷೇತ್ರದ ಸಮಗ್ರ ಅಭಿವೃದ್ಧಿ ಮಾಡಲು ಸಹಕಾರಿಯಾಗುತ್ತದೆ ಎಂದರು.

ಈ ಸಂಬಂಧ ಪಶ್ಚಿಮ ಘಟ್ಟ ಪ್ರದೇಶಗಳಲ್ಲಿ ಜನಜಾಗೃತಿ ಮೂಡಿಸಿ ಬೇಡಿಕೆ ಈಡೇರಿಸಲು ಹೋರಾಟ ನಡೆಸಲಾಗುವುದು ಹಾಗೂ ಕೇಂದ್ರ ಚುನಾವಣಾ ಅಯೋಗಕ್ಕೂ ಮನವಿ ಸಲ್ಲಿಸಲಾಗುವು ಎಂದು ಮಾಜಿ ಶಾಸಕ ಎಂ.ಪಿ.ಕುಮಾರಸ್ವಾಮಿ ಹೇಳಿದ್ದಾರೆ.

# ಸೌಜನ್ಯ ಪರ ನಾನು ನಿಲ್ಲುತ್ತೇನೆ:ನಾಗಲಕ್ಷ್ಮಿ ಚೌದರಿ




**ಮೈಸೂರು:** ನಗರ ಕೇಂದ್ರ ಕಾರಾಗೃಹಕ್ಕೆ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌದರಿ ಭೇಟಿ. ಕಾರಾಗೃಹದಲ್ಲಿ ಏರ್ಪಡಿಸಿರುವ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗಿ.

ಈ ವೇಳೆ, ಕಾರಾಗೃಹಕ್ಕೆ ಭೇಟಿ ಕೊಡುತ್ತಿದ್ದಂತೆ ಅಹವಾಲುಗಳ ಕೊಡಲು ಮುಗಿ ಬಿದ್ದ ಮಹಿಳೆಯರು. ಹಲವಾರು ಸಮಸ್ಯೆಗಳ ಪರಿಹಾರಕ್ಕೆ ಒತ್ತಾಯಿಸಿ ಮನವಿ ಪತ್ರಗಳ ಸಲ್ಲಿಸಿದ ಸಾರ್ವಜನಿಕರು. ಮಾಧ್ಯಮ ಪ್ರತಿನಿಧಿಗಳ ಪ್ರವೇಶಕ್ಕೆ ಅವಕಾಶ ಕೊಡದ ಕಾರಾಗೃಹ ಸಿಬ್ಬಂದಿ . ಹೊರ ಭಾಗದಲ್ಲೇ ನಿಂತು ಸಾರ್ವಜನಿಕರ ಜೊತೆ ಕೆಲ ಕಾಲ ಸಮಸ್ಯೆ ಆಲಿಸಿದ ನಾಗಲಕ್ಷ್ಮಿ ಚೌದರಿ.

ಸೌಜನ್ಯ ಕೊಲೆ ಪ್ರಕರಣ ಮತ್ತೆ ಮುನ್ನಲೆಗೆ ಬಂದ ವಿಚಾರ, ಸೌಜನ್ಯ ಕೊಲೆ ಪ್ರಕರಣ ಕುರಿತು ನ್ಯಾಯಾಲಯದಿಂದಲೂ ತೀರ್ಪು ಬಂದಿದೆ. ನಾನು ಒಂದು ಸಾಂವಿಧಾನಿಕ ಹುದ್ದೆಯಲ್ಲಿದ್ದುಕೊಂಡು ನ್ಯಾಯಾಲಯದ ತೀರ್ಪನ್ನು ಪ್ರಶ್ನೆ ಮಾಡಲಿಕ್ಕೆ ಆಗಲ್ಲ. ನಾನು ಮಾತ್ರ ಆ ಹೆಣ್ಣು ಮಗಳ ಪರವಾಗಿ ನಿಲ್ಲುತ್ತೇನೆ. ಆ ಪ್ರಕರಣದಲ್ಲಿ ಸಾವಿಗೀಡಾದ ಎಲ್ಲರಿಗೂ ನ್ಯಾಯ ಸಿಗಬೇಕು ಎನ್ನುವುದು ನನ್ನ ಆಶಯ. ಸಂತ್ರಸ್ತ ಕುಟುಂಬ ಭೇಟಿ ಮಾಡಿಲ್ಲ. ಧರ್ಮ ಸ್ಥಳಕ್ಕೆ ಹೋದಾಗ ಭೇಟಿ ಮಾಡುತ್ತೇನೆ.

ಗ್ಯಾರಂಟಿ ಯೋಜನೆಗಳಿಂದ ಮಹಿಳೆಯರ ಸಬಲೀಕರಣ ಆಗುತ್ತಿದೆ. ಅದನ್ನ ಪ್ರಶ್ನೆ ಮಾಡುವ ಅಧಿಕಾರ ವಿಪಕ್ಷಗಳಿಗಿಲ್ಲ. ಹೆಣ್ಣು ಮಕ್ಕಳ ಸಬಲೀಕರಣಕ್ಕೆ ಒಳ್ಳೆ ಕೆಲಸ ಸರ್ಕಾರ ಮಾಡುತ್ತಿದೆ. ಗ್ಯಾರಂಟಿಗಳಿಂದ ಒಬ್ಬ ಹೆಣ್ಣು ಮಗಳಿಗೆ ತಿಂಗಳಿಗೆ ನಾಲ್ಕೈದು ಸಾವಿರ ಉಳಿತಾಯ ಆಗುತ್ತದೆ. ಅದರ ಬಗ್ಗೆ ಟೀಕೆ ಮಾಡೋದು ತಪ್ಪು. ಎಂದು ಹೇಳಿದರು.

ಕೊಪ್ಪಳದಲ್ಲಿ ವಿದೇಶಿ ಮಹಿಳೆ ಮೇಲೆ ಗ್ಯಾಂಗ್ ರೇಪ್ ಪ್ರಕರಣ ವಿಚಾರ, ಮೈಸೂರಿನಲ್ಲಿ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌಧರಿ ಪ್ರತಿಕ್ರಿಯೆ. ಇದೊಂದು ಅಮಾನವೀಯ ಕೃತ್ಯ. ಈಗಾಗಲೇ ಅಲ್ಲಿನ ಎಸ್ಪಿಗೆ ಪತ್ರ ಬರೆದಿದ್ದೇನೆ. ಹಂಪಿಯನ್ನ ನೋಡಲು ಸಾಕಷ್ಟು ವಿದೇಶಿಗರು ಅಲ್ಲಿಗೆ ಬರುತ್ತಾರೆ. ಅಂಥವರ ಮೇಲೆ ಹೇಯ ಕೃತ್ಯ ನಡೆಸಿದರೆ ಯಾವ ಸಂದೇಶ ಹೋಗುತ್ತದೆ. ಇದೊಂದು ತಲೆ ತಗ್ಗಿಸುವ ಪರಿಸ್ಥಿತಿ . ಕಿಡಿಗೇಡಿಗಳಿಗೆ ಕಠಿಣ ಶಿಕ್ಷೆ ಆಗಬೇಕು. ಜೊತೆಗೆ ಅಲ್ಲಿರುವ ಅನಧಿಕೃತ ಹೋಮ್ ಸ್ಟೇ, ರೆಸಾರ್ಟ್ ಗಳನ್ನ ಬಂದ್ ಮಾಡಬೇಕು. ಅಲ್ಲಿಗೆ ಬರುವಂತ ವಿದೇಶಿಗರಿಗೆ ಆಹ್ವಾನ ನೀಡಬೇಕು. ಜತೆಗೆ ಹೆಚ್ಚಿನ ಭದ್ರತೆ ಕೊಡಬೇಕು ಎಂದು ಒತ್ತಾಯಿಸಿದರು.

# ಶಿಕ್ಷಣ ಕ್ಷೇತ್ರ ನಿರ್ಲಕ್ಷ್ಯದ ವಿರುದ್ಧ ಚಿಂತನಾ ಸಭೆ




**ಬೆಂಗಳೂರು:** ರಾಜ್ಯದ ಕಾಂಗ್ರೆಸ್ ಸರ್ಕಾರದಿಂದ ಶಿಕ್ಷಣ ಕ್ಷೇತ್ರದ ಬಗ್ಗೆ ನಿರ್ಲಕ್ಷ್ಯದ ವಿರುದ್ಧ ಚಿಂತನಾ ಸಭೆಯು ಗುರುವಾರ ಬೆಂಗಳೂರಿನ ಕ್ಯಾಪಿಟಲ್ ಹೋಟೆಲ್‌ನಲ್ಲಿ ನಡೆಯಿತು.

ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದ ರಾಜ್ಯ ಸರ್ಕಾರವು ಶಿಕ್ಷಣ ವಿರೋಧಿ ನೀತಿಯನ್ನು ನಿರಂತರವಾಗಿ ಅಳವಡಿಸಿಕೊಂಡಿದೆ ಎಂದು ತೀವ್ರ ಆಕ್ಷೇಪ ವ್ಯಕ್ತವಾಯಿತು. ಸರ್ಕಾರವು ತನ್ನ ನೀತಿಯನ್ನು ಬದಲಿಸಿ ಶಿಕ್ಷಣವನ್ನು ಪ್ರೋತ್ಸಾಹಿಸುವ ನೀತಿಯನ್ನು ಅಳವಡಿಸಿಕೊಳ್ಳಬೇಕೆಂದು ಆಗ್ರಹಿಸಲಾಯಿತು.

ಈ ಸಂದರ್ಭದಲ್ಲಿ ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಉಪಮುಖ್ಯಮಂತ್ರಿ ಡಾ. ಸಿ.ಎನ್. ಅಶ್ವತ್ಥನಾರಾಯಣ್, ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್. ಮಹೇಶ್, ವಿಧಾನ ಪರಿಷತ್ತಿನ ಮುಖ್ಯ ಸಚೇತಕ ಎನ್. ರವಿಕುಮಾರ್ , ವಿಧಾನಪರಿಷತ್ ಸದಸ್ಯ ಸಿ.ಟಿ. ರವಿ , ಪದವೀಧರ ಮತ್ತು ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಸದಸ್ಯರು, ಶಿಕ್ಷಣ ತಜ್ಞರು, ಬಿಜೆಪಿ ಶಿಕ್ಷಣ ಪ್ರಕೋಷ್ಠದ ಎಲ್ಲಾ ಸದಸ್ಯರು ಭಾಗವಹಿಸಿದ್ದರು.

# ರಂಜಾನ್ ವಿಶೇಷ; ಬಡವರಿಗೆ ರೇಶನ್ ಕಿಟ್ ವಿತರಣೆ




**ಬೆಂಗಳೂರು:** ರಂಜಾನ್ ಪ್ರಯುಕ್ತ ಕಳೆದ ಹದಿನೈದು ವರ್ಷಗಳಿಂದ ರೇಶನ್ ಕಿಟ್ ಗಳನ್ನು ವಿತರಣೆ ಮಾಡುತ್ತಿದ್ದ ಅಶೀರ್ ಷರೀಪ್ ಈ ಬಾರೀ ರಂಜಾನ್ ಪ್ರಯುಕ್ತ ಮುಸ್ಲಿಂ, ಸಿಖ್ ಸಮುದಾಯದವರಿಗೆ ರೇಶನ್ ಕಿಟ್ ವಿತರಿಸಿದರು.

ಸುಮಾರು 10ಸಾವಿರಕ್ಕೂ ಅಧಿಕ ರೇಶನ್ ಕಿಟ್ ಗಳನ್ನು ವಿತರಿಸಿದರು. ಸಾರಿಗೆ ಸಚಿವರಾದ ರಾಮಲಿಂಗಾರೆಡ್ಡಿ,ಮಾಜಿ ಶಾಸಕಿ ಸೌಮ್ಯ ರೆಡ್ಡಿ, ಕೆಎಸ್ ಆರ್ ಟಿಸಿ ಉಪಾಧ್ಯಕ್ಷ ಮೊಹಮ್ಮದ್ ರಿಜ್ವಾನ್ ನವಾಬ್ ಬಡವರಿಗೆ ರೇಶನ್ ಕಿಟ್ ಗಳನ್ನು ವಿತರಿಸಿದರು.

ಅಶೀರ್ ಷರೀಪ್ ಅನೇಕ ವರ್ಷಗಳಿಂದ ಸಮಾಜಿಕ ಸೇವಾ ಕಾರ್ಯಗಳನ್ನು ಮಾಡುತ್ತಿದ್ದು, ಅನೇಕ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಹಾಗೂ ರೋಗಿಗಳಿಗೆ ಆಸ್ಪತ್ರೆಯ ಬಿಲ್ ಗಳನ್ನು ಭರಿಸುತ್ತಿದ್ದಾರೆ.

# ತೆರಿಗೆ ಸಂಗ್ರಹ ಇಲಾಖೆಗಳಲ್ಲಿ ಕೌನ್ಸೆಲಿಂಗ್ ಮೂಲಕ ವರ್ಗಾವಣೆಗೆ ಸರ್ಕಾರ ಸಿದ್ಧತೆ?

ಬೆಂಗಳೂರು: ವರ್ಗಾವಣೆ ದಂಧೆಗೆ ನಿಯಂತ್ರಣ ಹೇರುವ ನಿಟ್ಟಿನಲ್ಲಿ ಕೌನ್ಸೆಲಿಂಗ್ ಮೂಲಕ ವರ್ಗಾವಣೆಗೆ ಹೆಚ್ಚಿನ ಒತ್ತು ಕೊಡಲು ರಾಜ್ಯ ಸರ್ಕಾರ ತೀರ್ಮಾನಿಸಿದೆ. ಈ ಮೂಲಕ ದಕ್ಷತೆ, ಪಾರದರ್ಶಕತೆ ಕಾಪಾಡಿಕೊಳ್ಳುವ ಜೊತೆಗೆ ಕಮಿಷನ್, ಭ್ರಷ್ಟಾಚಾರ ನಿಯಂತ್ರಣಕ್ಕೆ ರಾಜ್ಯ ಸರ್ಕಾರ ಮುಂದಾಗಿದೆ. ಹೀಗಾಗಿ ತೆರಿಗೆ ಸಂಗ್ರಹಣಾ ಇಲಾಖೆಗಳಲ್ಲಿ ಈ ಕೌನ್ಸೆಲಿಂಗ್ ವರ್ಗಾವಣೆ ನೀತಿ ಜಾರಿಗೊಳಿಸಲು ತೀರ್ಮಾನಿಸಿದೆ.



ಸರ್ಕಾರಿ ನೌಕರರ ವರ್ಗಾವಣೆ ನಿರಂತರ ನಡೆಯುವ ಪ್ರಕ್ರಿಯೆ. ಪ್ರತಿವರ್ಷ ಎಲ್ಲಾ ಇಲಾಖೆಗಳಲ್ಲಿ ಸಾಮಾನ್ಯ ವರ್ಗಾವಣೆ ಪ್ರಕ್ರಿಯೆ ನಡೆಯುತ್ತದೆ. ಈ ಮೂಲಕ ಆಡಳಿತಕ್ಕೆ ಚುರುಕು ನೀಡಲಾಗುತ್ತದೆ. ಆದರೆ, ಈ ವರ್ಗಾವಣೆ ಪ್ರಕ್ರಿಯೆ ದಂಧೆ ರೂಪ ಪಡೆಯುವ ಮೂಲಕ ವ್ಯಾಪಕ ಭ್ರಷ್ಟಾಚಾರಕ್ಕೆ ಕಾರಣವಾಗುತ್ತಿದೆ. ವರ್ಗಾವಣೆಗಾಗಿ ಕಮಿಷನ್, ಲಾಬಿ, ಪ್ರಭಾವಿಗಳ ಪ್ರಭಾವ, ಶಾಸಕ – ಸಚಿವರ ಪ್ರಭಾವ, ಲಂಚ ಆರೋಪಗಳಿಂದ ಪ್ರತಿ ಸರ್ಕಾರಗಳು ಸುದ್ದಿಗೆ ಗ್ರಾಸವಾಗುತ್ತಲೇ ಇರುತ್ತವೆ.

ಈ ವರ್ಗಾವಣೆ ಪ್ರಕ್ರಿಯೆ ಪ್ರತಿ ಸರ್ಕಾರಗಳಿಗೆ ದೊಡ್ಡ ತಲೆನೋವಿನ ವಿಚಾರವಾಗಿದೆ. ವರ್ಗಾವಣೆಯಲ್ಲಿ ಪಾರದರ್ಶಕತೆ, ಸಮತೋಲನ ಕಾಪಾಡಲು ಸಾಧ್ಯವಾಗದೇ ಆಡಳಿತಕ್ಕೆ ನಿರೀಕ್ಷಿತ ದಕ್ಷತೆ, ಚುರುಕು ಮುಟ್ಟಿಸಲು ವಿಫಲವಾಗುತ್ತಿವೆ. ಆಡಳಿತದ ಕಾರ್ಯಕ್ಷಮತೆಯನ್ನು ಹೆಚ್ಚಿಸಲು ಇದೀಗ ರಾಜ್ಯ ಸರ್ಕಾರ ಇನ್ನಷ್ಟು ಹೆಚ್ಚಿನ ಇಲಾಖೆಗಳಲ್ಲಿ ಕೌನ್ಸೆಲಿಂಗ್ ಮೂಲಕ ವರ್ಗಾವಣೆ ಮಾಡಲು ಮುಂದಾಗಿದೆ.

ತೆರಿಗೆ ಸಂಗ್ರಹಣಾ ಇಲಾಖೆಗಳಲ್ಲಿ ಕೌನ್ಸೆಲಿಂಗ್ ವರ್ಗಾವಣೆಗೆ ತೀರ್ಮಾನ: ರಾಜ್ಯದ ಬೊಕ್ಕಸ ತುಂಬಿಸುವ ಪ್ರಮುಖ 5 ಇಲಾಖೆಗಳಾದ ವಾಣಿಜ್ಯ ಇಲಾಖೆ, ಅಬಕಾರಿ, ನೋಂದಣಿ ಹಾಗೂ ಮುದ್ರಾಂಕ ಇಲಾಖೆ, ಸಾರಿಗೆ ಮತ್ತು ಗಣಿ ಹಾಗೂ ಭೂ ವಿಜ್ಞಾನ ಇಲಾಖೆಯಲ್ಲಿ ದಕ್ಷತೆ, ಕಾರ್ಯಕ್ಷಮತೆ, ಆಡಳಿತದಲ್ಲಿ ಚುರುಕು ಮುಟ್ಟಿಸುವುದು ಅತಿ ಮುಖ್ಯವಾಗಿದೆ. ಜೊತೆಗೆ ಭ್ರಷ್ಟಾಚಾರಗಳನ್ನು ನಿಯಂತ್ರಿಸಿ ಹೆಚ್ಚಿನ ತೆರಿಗೆ ಸಂಗ್ರಹಕ್ಕೆ ಅನುಕೂಲವಾಗಲಿದೆ. ಇದರಿಂದ ಬಜೆಟ್ ಗುರಿಯಂತೆ ಹೆಚ್ಚಿನ ಆದಾಯ ಸಂಗ್ರಹಿಸಲು ಸಹಕಾರಿಯಾಗಲಿದೆ. ಹೀಗಾಗಿ ಪ್ರಮುಖ ತೆರಿಗೆ ಸಂಗ್ರಹಿಸುವ ಈ ಐದು ಇಲಾಖೆಗಳಲ್ಲಿ ಕೌನ್ಸೆಲಿಂಗ್ ಮೂಲಕ ವರ್ಗಾವಣೆ ಪ್ರಕ್ರಿಯೆ ಮಾಡಲು ರಾಜ್ಯ ಸರ್ಕಾರ ತೀರ್ಮಾನಿಸಿದೆ. ಈ ನಿಟ್ಟಿನಲ್ಲಿ ಪೂರಕ ನೀತಿ ರೂಪಿಸಲು ಮುಂದಾಗಿದೆ.

ವಾಣಿಜ್ಯ ತೆರಿಗೆ, ಅಬಕಾರಿ, ನೋಂದಣಿ ಮತ್ತು ಮುದ್ರಾಂಕ, ಸಾರಿಗೆ ಮತ್ತು ಗಣಿ ಹಾಗೂ ಭೂ ವಿಜ್ಞಾನ ಇಲಾಖೆಗಳ 'ಬಿ' ಮತ್ತು 'ಸಿ' ವೃಂದಗಳಲ್ಲಿ ಕೌನ್ಸೆಲಿಂಗ್ ಮೂಲಕ ವರ್ಗಾವಣೆ ಪ್ರಕ್ರಿಯೆ ಜಾರಿಗೊಳಿಸಲು ತೀರ್ಮಾನಿಸಲಾಗಿದೆ. ಇದರ ಜೊತೆಗೆ ವಿವಿಧ ನಿಯಮಗಳ ಸರಳೀಕರಣದ ಮೂಲಕ ಆಡಳಿತದಲ್ಲಿ ದಕ್ಷತೆಯನ್ನು ಹೆಚ್ಚಿಸಲು ಯೋಜಿಸಲಾಗಿದೆ. ಆ ಮೂಲಕ ಬೆಂಗಳೂರಲ್ಲೇ ಬಹಳ ವರ್ಷಗಳಿಂದ ನೆಲೆಯೂರಿರುವ ಅಧಿಕಾರಿ, ಸಿಬ್ಬಂದಿಯನ್ನು ವರ್ಗಾವಣೆ ಮಾಡಿ ದಕ್ಷತೆ ಹೆಚ್ಚಿಸಲಾಗುವುದು ಎಂದು ಆರ್ಥಿಕ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

ಏನಿದು ಹೊಸ ಕೌನ್ಸೆಲಿಂಗ್ ವರ್ಗಾವಣೆ ನೀತಿ: ಈಗಾಗಲೇ ಅರಣ್ಯ ಇಲಾಖೆ, ಆರೋಗ್ಯ ಇಲಾಖೆ ಹಾಗೂ ಶಿಕ್ಷಣ ಇಲಾಖೆ ಕೌನ್ಸೆಲಿಂಗ್ ಮೂಲಕ ವರ್ಗಾವಣೆ ಪ್ರಕ್ರಿಯೆ ಆರಂಭಿಸಿವೆ. ಇದೀಗ ತೆರಿಗೆ ಸಂಗ್ರಹಣಾ ಇಲಾಖೆಗಳಲ್ಲೂ ಕಟ್ಟುನಿಟ್ಟಾಗಿ ಕೌನ್ಸೆಲಿಂಗ್ ಮೂಲಕ ವರ್ಗಾವಣೆ ಮಾಡಲು ತೀರ್ಮಾನಿಸಲಾಗಿದೆ. ಈ ಕೌನ್ಸೆಲಿಂಗ್ ವರ್ಗಾವಣೆಯಲ್ಲಿ ಶಾಸಕರ, ಸಚಿವರ, ಪ್ರಭಾವಿಗಳ ಪ್ರಭಾವ ನಡೆಯುವುದಿಲ್ಲ. ನೇರವಾಗಿ ಸಿಬ್ಬಂದಿಗೆ ಕೌನ್ಸೆಲಿಂಗ್ ಮಾಡಿ ವರ್ಗಾವಣೆ ಮಾಡಲಾಗುತ್ತದೆ.

ಈ ಕೌನ್ಸೆಲಿಂಗ್ ವರ್ಗಾವಣೆ ನೀತಿಯಲ್ಲಿ ಸಿಬ್ಬಂದಿ ಅರ್ಜಿ ಸಲ್ಲಿಸಬೇಕು. ತಮ್ಮ ಆದ್ಯತೆಯ ಸ್ಥಳಗಳನ್ನು ಆಯ್ಕೆ ಮಾಡುವ ಅವಕಾಶ ಇರಲಿದೆ. ವರ್ಗಾವಣೆಗಾಗಿ ಸಿಬ್ಬಂದಿಗೆ ಒಂದು ನಿರ್ದಿಷ್ಟ ಕಾಲ ಮಿತಿ ನಿಗದಿಗೊಳಿಸಲಾಗುತ್ತದೆ. ಒಂದೇ ಸ್ಥಳದಲ್ಲಿ ಮೂರು ಅಥವಾ ಐದು ವರ್ಷ (ನಿಗದಿ ಪಡಿಸಿದಂತೆ) ಪೂರೈಸಿದ ಸಿಬ್ಬಂದಿಗೆ ವರ್ಗಾವಣೆ ಪ್ರಕ್ರಿಯೆಗೊಳಗಾಗುತ್ತಾರೆ. ತಾವು ಸಲ್ಲಿಸಿದ ಅರ್ಜಿ, ಸ್ಥಳದ ಆಯ್ಕೆಗಳನ್ನು ಪರಿಗಣಿಸಿ ಆನ್ ಲೈನ್ ಅಥವಾ ನೇರವಾಗಿ ಕೌನ್ಸೆಲಿಂಗ್ ನಡೆಸಿ ಸಕಾಲದಲ್ಲಿ ವರ್ಗಾವಣೆ ಮಾಡಲಾಗುತ್ತದೆ. ಒಬ್ಬ ಅಧಿಕಾರಿ ಒಂದೇ ಹುದ್ದೆಯಲ್ಲಿ ದೀರ್ಘಕಾಲ ಮುಂದುವರಿಯಲು ಈ ಕೌನ್ಸೆಲಿಂಗ್ ವರ್ಗಾವಣೆ ನೀತಿ ತಡೆಯುತ್ತದೆ. ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಹಾಗೂ ಆಯಕಟ್ಟಿನ ಸ್ಥಳಗಳಲ್ಲಿ ಬಹಳ ವರ್ಷಗಳಿಂದ ಇರುವ ಅಧಿಕಾರಿಗಳನ್ನು ಇತರೆ ಜಿಲ್ಲೆಗಳಿಗೆ ವರ್ಗಾಯಿಸಲು ಈ ವರ್ಗಾವಣೆ ನೀತಿ ಅನುವು ಮಾಡಿಕೊಡಲಿದೆ. ಕೌನ್ಸೆಲಿಂಗ್ ವರ್ಗಾವಣೆ ನೀತಿಯಡಿ ವರ್ಗಾವಣೆ ಕಡ್ಡಾಯವಾಗಿರಲಿದೆ. ಆಯಾ ಇಲಾಖೆಗಳು ತಮ್ಮ ಆಡಳಿತ ಸುಧಾರಣೆ ಅನುಗುಣವಾಗಿ ಕೌನ್ಸೆಲಿಂಗ್ ವರ್ಗಾವಣೆ ಮಾನದಂಡ ರೂಪಿಸಲಿದೆ.

ಇನ್ನು ಜುಲೈ 2024ರಂದು ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ಉಪ ನೋಂದಣಾಧಿಕಾರಿ, ಹಿರಿಯ ನೋಂದಣಾಧಿಕಾರಿಗಳ ವರ್ಗಾವಣೆಗೆ ಕೌನ್ಸೆಲಿಂಗ್ ವ್ಯವಸ್ಥೆ ಜಾರಿಗೆ ತರಲಾಗಿದೆ. ಇಲಾಖೆಯ ಪ್ರಥಮ ದರ್ಜೆ ಸಹಾಯಕರ ವರ್ಗಾವಣೆಯೂ ಕೌನ್ಸೆಲಿಂಗ್ ಮೂಲಕ ನಡೆಯಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಶಾಸಕರು, ಅಧಿಕಾರಿ ವರ್ಗದಿಂದ ಪ್ರತಿರೋಧ: ತಮ್ಮ ಹಸ್ತಕ್ಷೇಪ ಮೊಟಕುಗೊಳುವ ಹಿನ್ನೆಲೆ ಕೌನ್ಸೆಲಿಂಗ್ ಮೂಲಕ ವರ್ಗಾವಣೆ ನೀತಿಗೆ ಶಾಸಕರು, ಅಧಿಕಾರಿ ವರ್ಗದವರು ತೀವ್ರ ಪ್ರತಿರೋಧ ತೋರುತ್ತಿದ್ದಾರೆ. ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು (ಪಿಡಿಒ)ಗಳನ್ನು ಕೌನ್ಸೆಲಿಂಗ್ ಮೂಲಕ ವರ್ಗಾಯಿಸುವುದಕ್ಕೆ ಎಲ್ಲ ಶಾಸಕರು ವಿರೋಧಿಸುತ್ತಿದ್ದಾರೆ. ಇತ್ತ ಅರಣ್ಯ ಇಲಾಖೆಯಲ್ಲೂ ಹೊಸ ವರ್ಗಾವಣೆ ನಿಯಮ ವಿರೋಧಿಸಿ ಸುಮಾರು 40ಕ್ಕೂ ಅಧಿಕ ಶಾಸಕರು ಸಿಎಂ ಹಾಗೂ ಅರಣ್ಯ ಸಚಿವರಿಗೆ ಪತ್ರ ಬರೆದು ಆಕ್ಷೇಪ ವ್ಯಕ್ತಪಡಿಸಿದ್ದರು.

ನೋಂದಣಿ ಹಾಗೂ ಮುಂದ್ರಾಂಕ ಇಲಾಖೆಯಲ್ಲಿ ಉಪ ನೋಂದಣಿ ಅಧಿಕಾರಿಗಳನ್ನು ಕೌನ್ಸೆಲಿಂಗ್ ಮೂಲಕ ವರ್ಗಾವಣೆ ಮಾಡಿರುವುದಕ್ಕೂ ತೀವ್ರ ವಿರೋಧ ವ್ಯಕ್ತವಾಗಿದೆ. ಸಬ್ ರಿಜಿಸ್ಟ್ರಾರ್?ಗಳು ಈ ಸಂಬಂಧ ನ್ಯಾಯಾಲಯದ ಕದ ತಟ್ಟಿ ವರ್ಗಾವಣೆಗೆ ತಡೆಯಾಜ್ಞೆ ತಂದಿದ್ದಾರೆ. ವರ್ಗಾವಣೆ ಗೊಂದಲ ಹಿನ್ನೆಲೆ ಕಂದಾಯ ಭವನದಲ್ಲಿ ಅಹೋರಾತ್ರಿ ಪ್ರತಿಭಟನೆ ನಡೆಸಿದ್ದರು. ಐದು ವರ್ಷಗಳಿಂದ ಒಂದೇ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪ ನೋಂದಾಣಿ ಅಧಿಕಾರಿಗಳನ್ನು ಕೌನ್ಸೆಲಿಂಗ್ ಮೂಲಕ ವರ್ಗಾವಣೆ ಮಾಡಲಾಗಿತ್ತು. ಆದರೆ, ಅಧಿಕಾರಿಗಳು ಇದರ ವಿರುದ್ಧ ಹೈಕೋರ್ಟ್ ಮೊರೆ ಹೋಗಿ ಸದ್ಯ ಪ್ರಕ್ರಿಯೆಗೆ ಬ್ರೇಕ್ ಬಿದ್ದಿದೆ.

# ನಿಯಮಕ್ಕಿರೊ ದಂಡಾನೆ ಬೇರೆ, ವಸೂಲಿ ಮಾಡೋ ಹಣಾನೆ ಬೇರೆ..!

**ರಾಮಸಮುದ್ರ ಎಸ್.ವೀರಭದ್ರಸ್ವಾಮಿ**

ಚಾಮರಾಜನಗರ: ವಾಹನ ಸವಾರರು ನಿಯಮ ಉಲ್ಲಂಘನೆ ಮಾಡಿದಾಗ ದಂಡ ತೆತ್ತೋದು ಸಾಮಾನ್ಯ ..ಆದರೆ ನಿಯಮ ಉಲ್ಲಂಘನೆ ಮಾಡಿದ ತಪ್ಪಿಗೆ ಇರಬೇಕಾದ ದಂಡ ಬಿಟ್ಟು ಹೆಚ್ಚು ಹಣ ಕೊಡಬೇಕಾದ ದುಸ್ಥಿತಿನೊ ಅಥವಾ ಹೆಚ್ಚು ಹಣ ಪಡೆದು ಕಡಿಮೆ ಮೊತ್ತದ ರಶೀದಿ ಪಡೆದು ಹೋಗಬೇಕಾದ ಸ್ಥಿತಿ ತಲುಪಿದರೆ ವಾಹನ ಸವಾರರ ಗೋಳು ಏನಾಗಬೇಡ..

ಹೌದು ಗಡಿ ಜಿಲ್ಲೆ ಚಾಮರಾಜನಗರದಲ್ಲಿ ಕೆಲ ದಂಡ ಹಾಕೊ ಕೆಲ ಪೊಲೀಸರು ವಾಹನ ಸವಾರರನ್ನ ಯಾಮಾರಿಸುವ ಪ್ರಕ್ರಿಯೆಯಲ್ಲಿ ಮುಂದಾಗಿದ್ದು ಈ ಸಂಬಂದ ಚಾ.ನಗರ ಪೊಲೀಸ್ ಅದೀಕ್ಷಕರಿಗೆ ವಾಹನ ಸವಾರರು ದೂರು ಸಲ್ಲಿಸಿದ್ದಾರೆ.



ಚಾಮರಾಜನಗರ ಸಂಚಾರಿ ಠಾಣೆಯಲ್ಲಿ ಕೆಲ ಪೊಲೀಸರು ಜನದಟ್ಟಣೆಯ ಜಾಗದಲ್ಲಿ ತಡೆಯುವುದರಿಂದ ವಾಹನ ಸಂಚಾರ ಕಿರಿಕಿರಿಯಾಗುತ್ತದೆ ಎಂಬ ಪ್ರಜ್ಞೆ ಇಲ್ಲದೆ ಕಾಯಕ ಮಾಡುತ್ತಿರುತ್ತಾರೆ. ಇನ್ನ ಕೆಲವೆಡೆ ರಾಂಗ್ ವೇ ಬಂದರೆ ಅದ್ಕೆ ಇರೊ ದಂಡ 500/- ಆದರೆ 3000/- ರೂ ವರೆಗೂ ಎಲ್ಲ ದಾಖಲೆ ಇದ್ದರೂ ಪ್ರಶ್ನಿಸಿದಾಗ ಗಲಾಟೆ ಮಾಡಿದೆ ಎಂದು ಕೇಸಾಕಬೇಕಾಗುತ್ತದೆ ಎಂದು ಹೆದರಿಸಿ(ಕರ್ತವ್ಯಕ್ಕೆ ಅಡ್ಡಿ) ಹಣ ಕೀಳುತ್ತಾರೆ..ವಿಪರ್ಯಾಸವೆಂದರೆ ಆ ಪಡೆದ ಹಣಕ್ಕೂ ಸರಿಯಾದ ರಶೀದಿ ನೀಡದೆ , ಯಾರಿಗೊ ಹಾಕಿದ 100-200 ರೂ ರಶೀದಿ ಕೊಟ್ಟು ಈ ವಾಹನ ಸವಾರರನ್ನ ಕಳಿಸುತ್ತಾರೆ.

ನಿದರ್ಶನ ಎಂಬಂತೆ ಜೋಡಿರಸ್ತೆ ಯಲ್ಲೊಬ್ಬ ಸವಾರ ರಾಂಗ್ ವೇ ಬಂದಾತನ್ನ ತಡೆದು ಎಲ್ಲಾ ದಾಖಲೆ ಇದ್ರು 500/- ಪಡೆದು, 200/ ರೂ ರಶಿದಿ ಕೊಟ್ಟು ಕಳಿಸಿದ್ದಾರೆ..ಈತ ಇದನ್ನ ಮನಗಂಡು ಸಾವರನೊಬ್ಬ ತಪ್ಪು ಮಾಡಿದ್ಕೆ ಇಲಾಖೆಗೆ ಪಾವತಿಡಿದ ದಂಡ ಹಣ ಸರ್ಕಾರಕ್ಕೆ ಪಾವತಿಸಿಕೊಂಡು ಲೋಪವೆಸಗಿದ ಸಿಬ್ಬಂದಿ ಮೇಲೆ ಕ್ರಮ ಕೈಗೊಳ್ಳಿ ಎಂದು ದೂರು ಸಲ್ಲಿಸಿದ್ದಾರೆ.

ಪತ್ರಿಕೆಗೆ ಬಂದ ದೂರಿನನ್ವಯ ತನಿಖೆ ಆರಂಬಿಸಿದಾಗ ದಂಡ ಹಾಕಿದ ರಶೀದಿ ಆಟೊ ಆಗಿದ್ದು ದಾಖಲೆ ಪ್ರಕಾರ ಹೊರಜಿಲ್ಲೆ ವ್ಯಾಪ್ತಿಗೆ ಸೇರಿದೆ..ಆ ವಾಹನ ಸ್ಥಳೀಯ ಸಂಬಂದಿಕರಿಗೆ ವರ್ಗಾವಣೆ ಮಾಡಿದ್ದು ಅದು ವರ್ಗಾವಣೆಯಾದ್ದರಿಂದ ಆತ ಇನ್ನೇನೊ ತಪ್ಪೆಸಗಿದ ಆಟೊ ಚಾಲಕನಿಗೆ 200 ಹಾಕಿ ಹೆಚ್ಚುವರಿ ಪ್ರಯಾಣಿಕರ ರಶೀದಿ ಹರಿದಿದ್ದಾರೆ..ವಿಪರ್ಯಾಸವೆಂದರೆ ಅದೆ ರಶೀದಿಯನ್ನ ದ್ವಿಚಕ್ರವಾಹನ ಸವಾರರಿಗೂ ಕೊಟ್ಟಿದ್ದಾರೆ.ವಾಹನ ಸವಾರರು ಇದ್ಯಾವ್ದನ್ನ ನೋಡದೆ ಬಿಟ್ರೆ ಸಾಕು ಅಂತ ಹೋಗಿ ಬಿಡೋದು ಸಾಮಾನ್ಯ.

ಚಾಮರಾಜನಗರ ಸಂಚಾರಿ ಠಾಣೆಯಲ್ಲಿ ಕೆಲವರು ದಿನಂಪ್ರತಿ 5-10 ಪ್ರಕರಣಗಳಿಗೇನು ಕಡಿಮೆ ಇಲ್ಲ ಎಂಬ ಆರೋಪಗಳು ಕೇಳಿ ಬರುತ್ತಿದೆ.300 ರೂ ನಂತೆ ಪ್ರಕರಣ ಹೆಚ್ಚಾದರೆ ಸರ್ಕಾರದ ಬೊಕ್ಕಸಕ್ಕೆ ಜಮಾ ಆಗಬೇಕಾದ ಹಣ ಕೆಲವರ ಜೇಬಿನ ಕಿಸೆ ತುಂಬಿಸುತ್ತಿದೆ ಎಂಬ ಆರೋಪಗಳು ಕೇಳಿ ಬರುತ್ತಿದೆ. ಇದು ಒಂದು ಕಡೆಯಲ್ಲ ರಾಜ್ಯದ ವಿವಿದೆಡೆ ಇಂತ ಪ್ರಕರಣ ನಡೆಯುತ್ತದೆ..ಅದು ಕೆಲ ಮೇಲಾದಿಕಾರಿಗಳಿಗೂ ಗೊತ್ತಿರುತ್ತದೆ. ಎಲ್ಲ ಒಂದು ಭ್ರಷ್ಟ ವ್ಯವಸ್ಥೆಯಲ್ಲಿ ನಡೆದುಕೊಂಡೆ ಹೋಗುತ್ತದೆ ಎಂಬುದು ಇಲಾಖೆಯಲ್ಲಿ ಸತ್ಯ ತಿಳಿಯದೆ ಇರಲಾರದವರು ಇಲ್ಲ ಎಂಬುದು ಕೂಡ ಸತ್ಯ.

ದಂಡ ಹಾಕೊ ಪೊಲೀಸರೆಲ್ಲ ಇದೆ ಕೆಲಸ ಮಾಡ್ತಾರೆ ಅಂತ ಹೇಳೊಲ್ಲ..ಅದ್ರಲ್ಲಿ ಕೆಲ ಪ್ರಾಮಾಣಿಕ,ಮಾನವೀಯತೆ ಆರಕ್ಷಕರೂ ಇರೋದು ಸಹಜ .ಇದನ್ನ ನೋಡಿದಾಗ ಅಸಹಾಯಕ ವಾಹನ ಸವಾರರಿಬ್ಬರು ಸಿಕ್ಕೊಂಡಾಗ ಇಬ್ಬರ ಜೊತೆ ಮಾತನಾಡಿ ತಲಾ 250/- ರೂ ಅಂತೆ ಇಬ್ಬರದ್ದು ಸೇರಿಸಿ ಒಬ್ಬರಿಗೆ ಶಿರಸ್ತ್ರಾಣ ರಹಿತ ದಂಡ 500/- ಹಾಕಿ ಮಾನವೀಯತೆ ಮೆರೆಯೋವ್ರು ಉಂಟು..ಆದರೆ ನಿಯಮ ಪ್ರಕಾರ ತಪ್ಪು.ಆದರೂ ಅವರ ಸಂದರ್ಭ ಸನ್ನಿವೇಶ ಅರಿತು ಮಾನವೀಯ ನೆಲಗಟ್ಟಿನಲ್ಲಿ ಕೆಲಸ ಮಾಡಬೇಕಾಗುತ್ತದೆ ಇದರಿಂದ ನಮ್ಮ ಕಾರ್ಯ ವೈಖರಿ , ಸಮದಾನ ಇರಲಿದೆ ಜೊತೆಗೆ ಮುಂದೆ ಇಂತ ತಪ್ಪು ಮಾಡದಂತೆ ಎಚ್ಚರಿಕೆ ನೀಡಿ ಕಳಿಸುವ ನಿದರ್ಶನಗಳಿದೆ.

ಒಟ್ಟಾರೆ ಆರಂಬಿಕ ಹಂತದಲ್ಲಿ ದೂರುಗಳನ್ನು ಮಾದ್ಯಮದವರು ಎಸ್ಪಿ ಅವರಿಗೆ ತಿಳಿಸಲಾಗುತ್ತಿದ್ದರೂ ಕ್ರಮ ಇರಲಿಲ್ಲ. ಈಗ ದಾಖಲೆ ಸಮೇತ ವಾಹನ ಸವಾರರು ಇಟ್ಟಿದ್ದು ಅವರು ಧರಿಸಿರೊ ಬಾಡಿಕ್ಯಾಮ್ ವಿಡಿಯೊ, ದಂಡ ಹಾಕೊ ಸಂಚಾರಿ ಪೊಲೀಸರೊಂದಿಗಿನ ಮಾತುಕತೆ, ದಂಡ ಹಾಕೊ ಮೆಷಿನ್ ತರಿಸಿ ಇಂತ ಕುಕೃತ್ಯ ನಡೆದಿದಿಯೆ..ಯಾರು ಮಾಡಿ ಇಲಾಖಾ ಬೊಕ್ಕಸಕ್ಕೆ ನಷ್ಟ ಉಂಟು ಮಾಡುವಲ್ಲಿ ತೊಡಗಿದವರನ್ನ ಪತ್ತೆ ಹಚ್ಚಿ ಕ್ರಮ ಕೈಗೊಳ್ಳಬೇಕಾಗಿದೆ. ಇಲ್ಲಾವದರೆ ಬಡ/ ಮದ್ಯಮ ವಾಹನ ಸವಾರ ಪಾಡು ಹೇಳತೀರದಾಗಿದೆ.

ದೂರುಗಳು ಬಂದಿದೆ. ಪರಿಶೀಲಿಸಿ ವರದಿ ನೀಡಲು ಅದೀನ ಅಧಿಕಾರಿ ಗಳಿಗೆ ಸೂಚಿಸಿದ್ದೇವೆ..ವರದಿಬಂದ ನಂತರ ಲೋಪವೆಸಗಿದ್ದಲ್ಲಿ ಕ್ರಮಕೈಗೊಳ್ಳ ಲಾಗುವುದು ಎಂದು ತಿಳಿಸಿದ್ದಾರೆ.

**ಬಿ.ಟಿ.ಕವಿತಾ । ಎಸ್ಪಿ**

ವಾಹನ ಸವಾರರು ದಂಡ ಹಾಕಿದಾಗ ನಮ್ಮ ವಾಹನಕ್ಕೆ ,ನಮ್ಮಹೆಸರಿಗೆ ದಂಡ ಹಾಕಲಾಗಿದಿಯೆ? ನಿಯಮಾನುಸಾರ ದಂಡ ಎಷ್ಟು? ಹೆಚ್ಚುವರಿ ಪಡೆದಾಗ ಹಿರಿಯ ಅದಿಕಾರಿಗಳಿಗೆ ದೂರು ಸಲ್ಲಿಸುವ ಬಗೆ ಹೇಗೆ ಎಂಬುದನ್ನ ಪರಿಶೀಲಿಸಿಕೊಳ್ಳಬೇಕು ಎಂದು ನೊಂದ ವಾಹನ ಸವಾರ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ

# ಪಕ್ಷ ಸಂಘಟನೆಗೆ ಒತ್ತು ನೀಡಿ: ವಿ.ಆದಿನಾರಾಯಣ



**ಮುಳಬಾಗಲು:** ಕಾಂಗ್ರೆಸ್ ಪಕ್ಷದ ಸಂಘಟನೆಗಾಗಿ ಹೆಚ್ಚು ಒತ್ತು ನೀಡಿ. ಪಕ್ಷಕ್ಕಾಗಿ ಹಗಲು ರಾತ್ರಿ ದುಡಿಯುತ್ತಿದ್ದ. ಆವಣಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ ಸಿ ನೀಲಕಂಠೇಗೌಡರ ಭಾವಪೂರ್ಣ ಶ್ರದ್ಧಾಂಜಲಿ ಸಭೆಯ ಕಾರ್ಯಕ್ರಮವನ್ನು ಮಾ 25ರಂದು ಅರ್ಥಪೂರ್ಣವಾಗಿ ಆಚರಣೆ ಮಾಡಲು ತಾಲೂಕಿನ ಪಕ್ಷದ ಮುಖಂಡರ ಸಲಹೆ ಮೇರೆಗೆ ತೀರ್ಮಾನಿಸಲಾಗಿದೆ ಎಂದು ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ವಿ.ಆದಿನಾರಾಯಣ ತಿಳಿಸಿದರು.

ಅವರು ಕಾಂಗ್ರೆಸ್ ಪಕ್ಷದ ಕಚೇರಿಯಲ್ಲಿ ಆವರಣದಲ್ಲಿ ಏರ್ಪಡಿಸಿದ್ದ ಆವಣಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ಸಿ.ನೀಲಕಂಠೇಗೌಡ ರವರ ಭಾವಪೂರ್ಣ ಶ್ರದ್ಧಾಂಜಲಿ ಪೂರ್ವ ಭಾವಿಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು ಕಾಂಗ್ರೆಸ್ ಪಕ್ಷದ ತಾಲೂಕು ಅಧ್ಯಕ್ಷರಾದ ಮೇಲೆ ಅವರ ವೈಯಕ್ತಿಕ ಕೆಲಸಗಳಿಗೆ ಹೆಚ್ಚಿನ ಗಮನ ನೀಡದೆ . ಪಕ್ಷ ಸಂಘಟನೆಗೆ ಹೆಚ್ಚು ಒತ್ತು ನೀಡುವ ಮೂಲಕ ಪಕ್ಷದ ಅಭಿವೃದ್ಧಿಗೆ ಹೆಚ್ಚು ಶ್ರಮಸಿದ್ದಾರೆ ಶ್ರದ್ಧಾಂಜಲಿ ಸಭೆಯ ಕಾರ್ಯಕ್ರಮವನ್ನು ಪಕ್ಷದಿಂದ ಅರ್ಥಪೂರ್ಣವಾಗಿ ಅವರ ಜ್ಞಾಪಕಾರ್ಥಕವಾಗಿ ರಕ್ತದಾನ ಶಿಬಿರ. ಬಡ ಮಕ್ಕಳಿಗೆ ಸಹಕಾರಿ ಯಾಗುತ್ತದೆ, ಮತ್ತು ಆರೋಗ್ಯ ಶಿಬಿರವನ್ನು ಹಮ್ಮಿಕೊಳ್ಳುವ ಮುಖಾಂತರ ಶದ್ಧಾಂಜಲಿ ಕಾರ್ಯ ಕ್ರಮವನ್ನು ಮಾಡಬೇಕೆಂದು ಎಲ್ಲಾ ಮುಖಂಡರ ಸಲಹೆ ಮೇಲೆ ತೀರ್ಮಾನಿಸಲಾಯಿತು ಎಂದರು.

ಕೆಪಿಸಿಸಿ ಸದಸ್ಯ ರಾಮಲಿಂಗಾರೆಡ್ಡಿ ಮಾತನಾಡಿ, ತಾಲೂಕಿನಲ್ಲಿ ಮಹಿಳೆಯರಿಗಾಗಿ ದೀರ್ಘ ಸುಮಂಗಲಿ ಭವ ಅಡಿಯಲ್ಲಿ ಹೆಣ್ಣು ಮಕ್ಕಳಿಗೆ ಅತಿ ಹೆಚ್ಚು ಒತ್ತು ನೀಡಿ ಮಹಿಳಾ ಕಾರ್ಯಕ್ರಮಗಳನ್ನು ಆಯೋಜಿಸುವ ಬಗ್ಗೆ ಮುಂಚೂಣಿಯಲ್ಲಿದ್ದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ಸಿ. ನೀಲ ಕಂಠೇಗೌಡ ಅವರು ನಮ್ಮನ್ನೆಲ್ಲ ಬಿಟ್ಟು ಹೋಗಿರುವುದು ದುಃಖಕರ ಸಂಗತಿಯಾಗಿದೆ. ಅವರಿಗಾಗಿ ಕಾಂಗ್ರೆಸ್ ಪಕ್ಷದಿಂದ ಆಯೋಜಿ ಸಿರುವ ಶ್ರದ್ಧಾಂಜಲಿ ಕಾರ್ಯಕ್ರಮಕ್ಕೆ ತಾಲ್ಲೂಕಿನ ಪ್ರತಿ ಗ್ರಾಮದಿಂದ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರ ಭಾಗವಹಿಸಿ ಅವರ ಆತ್ಮಕ್ಕೆ ಶಾಂತಿ ಕೋರಿದಾಗ ಮಾತ್ರ ಅರ್ಥಪೂರ್ಣ ವಾದ ಶ್ರದ್ಧಾಂಜಲಿ ಕಾರ್ಯಕ್ರಮ ಮಾಡಿದಂತಾಗುತ್ತದೆ ಎಂದು ತಿಳಿಸಿದರು.

ಭಾವಪೂರ್ಣ ಶ್ರದ್ಧಾಂಜಲಿ ಕಾರ್ಯಕ್ರಮವನ್ನು ಬಾಲಾಜಿ ಭವನ ಪಕ್ಕದಲ್ಲಿರುವ ಮೈದಾನದಲ್ಲಿ ಇದೇ ತಿಂಗಳ 25ರಂದು ಮಂಗಳವಾರ ಸಭೆ ನಡೆಸಿ ಊಟದ ವ್ಯವಸ್ಥೆಯನ್ನು ಕಾಂಗ್ರೆಸ್ ಪಕ್ಷದ ಕಚೇರಿ ಆವರಣದಲ್ಲಿ 10 ಕೌಂಟರ್ ಗಳಲ್ಲಿ ಮಾಡಲು ಎಲ್ಲಾ ಮುಖಂಡರ ಸಲಹೆ ಮೇರೆಗೆ ಹಾಗೂ ಕೊತ್ತೂರು ಮಂಜುನಾಥ್ ಮಾರ್ಗದರ್ಶನದಲ್ಲಿ ನಡೆಸಲಾಗುತ್ತದೆ ಎಂದ ತಿಳಿದು ಬಂದಿದೆ.

ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಮಾನುಲ್ಲ. ಆಲಂಗೂರು ಶಿವಣ್ಣ. ಆರ್ ಆರ್ ರಾಜೇಂದ್ರ ಗೌಡ. ಸಿ ವಿ ಗೋಪಾಲ್. ನಗರಸಭೆ ಮಾಜಿ ಅಧ್ಯಕ್ಷ ರಿಯಾಜ್ ಅಹ್ಮದ್. ದರ್ಕಾಸು ಸಮಿತಿಯ ಸದಸ್ಯರಾದ ಜಮುನಳ್ಳಿ ಕೃಷ್ಣಪ್ಪ. ಲೀಲಾವತಿ. ಗುಜ್ಜನಹಳ್ಳಿ ಮಂಜುನಾಥ್. ಪಿ ಎಲ್ ಡಿ ಬ್ಯಾಂಕ್ ಅಧ್ಯಕ್ಷ ಗಂಗಿ ರೆಡ್ಡಿ. ಉಪಾಧ್ಯಕ್ಷ ಮಂಡಿಕಲ್ ಮಂಜುನಾಥ್. ಕಾರ್ಗಿಲ್ ವೆಂಕಟೇಶ್. ಮೆಕ್ಯಾನಿಕ್ ಶ್ರೀನಿವಾಸ್. ಉತ್ತನೂರು ಅರವಿಂದ್. ಸುಹಾಸ್ ಶೆಟ್ಟಿ, ಚನ್ನಾಪುರ ವೆಂಕಟೇಶ್ ಗೌಡ. ಡಾಕ್ಟರ್ ನವೀನ್. ನಗರಸಭಾ ಸದಸ್ಯರಾದ ಜಬಿವುಲ್ಲಾ. ನಿರೂಪಮಾ ಜಗನ್ಮೋಹನ ರೆಡ್ಡಿ. ಚಾಂದ್ ಭಾಷಾ. ದಿವ್ಯಶ್ರೀ ಹಾಜರಿದ್ದರು

# ನಿಯಮಿತವಾಗಿ ತ್ಯಾಜ್ಯ ನಿರ್ವಹಣೆ ಮಾಡಿ

**ಶಿಡ್ಲಘಟ್ಟ:** ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅಂಗಡಿ ತ್ಯಾಜ್ಯವನ್ನು ಎಲ್ಲೆಂದರಲ್ಲಿ ಬಿಸಾಡದೆ ಕಸವಿಲೇವಾರಿ ವಾಹನಕ್ಕೆ ನೀಡುವ ಮೂಲಕ ಸ್ವಚ್ಛತೆ ಜತೆಗೆ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು, ಸಮರ್ಪಕವಾಗಿ ಅನುಷ್ಠಾನಕ್ಕೆ ತಂದು ನಿಯಮಿತವಾಗಿ ತ್ಯಾಜ್ಯ ನಿರ್ವಹಣೆ ಮಾಡಬೇಕು ಎಂದು ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ತಾಲ್ಲೂಕು ಪಂಚಾಯತಿ ಇ.ಒ.ಹೇಮಾವತಿ ತಿಳಿಸಿದರು.



ತಾಲ್ಲೂಕಿನ ಬಹುಗ್ರಾಮ ಪಂಚಾಯಿತಿಗಳ ಸ್ವಚ್ಛ ಸಂಕೀರ್ಣ ಘಟಕಗಳ ವ್ಯಾಪ್ತಿಗೆಬರುವ ತಲಕಾಯಲಬೆಟ್ಟ, ದಿಬ್ಬೂರಹಳ್ಳಿ, ತಿಮ್ಮನಾಯ ಕನಹಳ್ಳಿ ಗ್ರಾಮ ಪಂಚಾಯಿತಿಗಳ ಸ್ವಚ್ಛತಾ ವಾಹನಕ್ಕೆ ಹಸಿರು ನಿಶಾನೆ ತೋರುವಮೂಲಕ ಚಾಲನೆ ಅವರು ನೀಡಿ ಅವರು ಮಾತನಾಡಿದರು.


ಗ್ರಾಮಗಳಲ್ಲಿ ಡೆಂಗ್ಯೂ, ಮಲೇರಿಯಾ ಸೇರಿದಂತೆ ಸಾಂಕ್ರಾಮಿಕ ರೋಗಗಳನ್ನು ಹರಡದಂತೆ ತಡೆಗಟ್ಟಲು ಈ ಘಟಕಗಳು ಅನುಕೂಲವಾಗಲಿದ್ದು ಪ್ರತಿಯೊಬ್ಬರು ಕಸವನ್ನು ವಿಲೇವಾರಿ ಮಾಡಲು ಸ್ವಯಂ ಪ್ರೇರಿತರಾಗಿ ಮುಂದಾಗಬೇಕು ಎಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ನರೇಗಾ ಸಹಾಯಕ ನಿರ್ದೇಶಕರಾದ ಚಂದ್ರಪ್ಪ, ತಲಕಾಯಲಬೆಟ್ಟ ಪಂಚಾಯಿತಿ ಪಿಡಿಒ ಶ್ರೀನಿವಾಸ್, ದಿಬ್ಬೂರಹಳ್ಳಿ ಪಂಚಾಯಿತಿ ಪಿಡಿಒ ರಮೇಶ್, ತಿಮ್ಮನಾಯಕನಹಳ್ಳಿ ಪಿಡಿಒ ರಾಮಚಂದ್ರಪ್ಪ, ತಾಲೂಕು ಸಂಯೋಜಕರಾದ ಲೋಕೇಶ, ಇಂಜಿನಿಯರ್ ಹರಿನಾಥ್, ಗ್ರಾಮ ಪಂಚಾಯತಿ ಸದಸ್ಯರು, ತಲಕಾಯಲಬೆಟ್ಟ, ದಿಬ್ಬೂರಹಳ್ಳಿ, ತಿಮ್ಮನಾಯಕನಹಳ್ಳಿ ಗ್ರಾಮ ಪಂಚಾಯಿತಿ ಸಿಬ್ಬಂದಿ ಹಾಗೂ ಸ್ವಚ್ಛತಾ ಸಿಬ್ಬಂದಿ ಇನ್ನಿತರರು ಹಾಜರಿದ್ದರು.

# ಬಿಜೆಪಿ ನೂತನ ಅಧ್ಯಕ್ಷರಾಗಿ ಅಂಬರೀಷ್‌ಗೌಡ ಆಯ್ಕೆ

**ದೇವನಹಳ್ಳಿ:** ಭಾರತೀಯ ಜನತಾ ಪಾರ್ಟಿ(ಬಿಜೆಪಿ) ದೇವನಹಳ್ಳಿ ತಾಲೂಕು ಅಧ್ಯಕ್ಷರಾಗಿ ನೀಲೇರಿ ಎನ್.ಎಲ್. ಅಂಬರೀಷ್‌ಗೌಡರನ್ನು ಆಯ್ಕೆ ಮಾಡಲಾಗಿದೆ ಎಂದು ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಹೆಚ್.ಎಂ. ರವಿಕುಮಾರ್ ತಿಳಿಸಿದ್ದಾರೆ.

ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ನಿರ್ದೇಶನದಂತೆ ಜಿಲ್ಲಾಧ್ಯಕ್ಷರಾದ ರಾಮಕೃಷ್ಣಪ್ಪ ನೇತೃತ್ವದಲ್ಲಿ ಸಭೆಯ ತೀರ್ಮಾನದಂತೆ ಎನ್.ಎಲ್. ಅಂಬರೀಶ್‌ಗೌಡರನ್ನು ದೇವನಹಳ್ಳಿ ತಾಲೂಕು ಬಿಜೆಪಿ ಅಧ್ಯಕ್ಷರನ್ನಾಗಿ ನೇಮಿಸಲಾಗಿದ್ದು, ಅವರು ಹಿಂದೆಯು ಬಿಜೆಪಿಯಲ್ಲಿ ಸಕ್ರಿಯವಾಗಿ ಕೆಲಸ ಮಾಡಿಕೊಂಡಿದ್ದು ಜಿಲ್ಲಾ ಕಾರ್ಯದರ್ಶಿಯಾಗಿ, ಪಕ್ಷ ನಿಷ್ಟೆಯಿಂದ ನಡೆದು ಇನ್ನೂ ಉನ್ನತಮಟ್ಟದ ಅಧಿಕಾರ ಪಡೆಯುವಂತಾಗಲೆಂದು ಶುಭ ಕೋರುತ್ತೇನೆ ಎಂದು ತಿಳಿಸಿದರು.

ತಾಲೂಕು ಬಿಜೆಪಿ ನೂತನ ಅಧ್ಯಕ್ಷ ಅಂಬರೀಷ್‌ಗೌಡ ಮಾತನಾಡಿ ನನಗೆ ದೇವನಹಳ್ಳಿ ತಾಲೂಕು ಅಧ್ಯಕ್ಷನನ್ನಾಗಿ ನೇಮಕ ಮಾಡಿರುವ ರಾಜ್ಯದ ವರಿಷ್ಠರಿಗೆ ಜಿಲ್ಲಾ ಅಧ್ಯಕ್ಷ ರಾಮಕೃಷ್ಣಪ್ಪ ಹಾಗೂ ಪ್ರ. ಕಾರ್ಯದರ್ಶಿ ಹೆಚ್.ಎಂ. ರವಿಕುಮಾರ್ ರವರಿಗೆ ಹಾಗೂ ಎಲ್ಲಾ ಮುಖಂಡರುಗಳಿಗೆ ಕೃತಜ್ಞತೆಗಳನ್ನು ತಿಳಿಸುತ್ತೇನೆ, ಬಿಜೆಪಿಯಲ್ಲಿ ಕಾರ್ಯಕರ್ತನಾಗಿ,ಜಿಲ್ಲಾ ಕಾರ್ಯದರ್ಶಿಯಾಗಿ, ಕಾರ್ಮಿಕ ಪ್ರಕೋಸ್ಟಾದಲ್ಲಿ ಸಂಚಾಲಕನಾಗಿ ಕೆಲಸ ಮಾಡಿದ್ದು ನನ್ನ ಮೇಲೆ ಇಟ್ಟಿರುವ ನಂಬಿಕೆಗೆ ಯಾವುದೇ ಚ್ಯುತಿ ಬಾರದ ಹಾಗೆ ಕೆಲಸ ಮಾಡಲಾಗುವುದು, ಮುಂಬರುವ ತಾ.ಪಂ. ಜಿ.ಪಂ ಹಾಗೂ ಗ್ರಾ.ಪಂ. ಚುನಾವಣೆಗಳಲ್ಲಿ ನಮ್ಮ ಪಕ್ಷದ ಸದಸ್ಯರು ಗೆಲ್ಲಲು ಬೂತ್ ಮಟ್ಟದಿಂದ ಕಾರ್ಯಕರ್ತರನ್ನು ಹುರಿದುಂಬಿಸಿ ಸಕ್ರಿಯರಾಗಿ ಕೆಲಸ ಮಾಡುವಂತೆ ಪ್ರೇರಿಪಿಸಲಾಗುವುದು ಎಂದರು.




ದೇವನಹಳ್ಳಿ ತಾಲೂಕು ಬಿಜೆಪಿ ಅಧ್ಯಕ್ಷರಾಗಿ ನೇಮಕಗೊಂಡ ಅಂಬರೀಷ್‌ಗೌಡರನ್ನು ತಾಲೂಕಿನ ಮುಖಂಡರು ಅಭಿನಂದಿಸಿದರು.

ಈ ಸಮಯದಲ್ಲಿ ಜಿಲ್ಲಾಧ್ಯಕ್ಷ ರಾಮಕೃಷ್ಣಪ್ಪ, ಬೂದಿಗೆರೆ ಪ್ರಭಾಕರ್,ವಿನಯ್‌ಕುಮಾರ್, ಪ್ರ. ಕಾರ್ಯದರ್ಶಿ ಹೆಚ್.ಎಂ. ರವಿಕುಮಾರ್, ಕಾರ್ಮಿಕ ಪ್ರಕೋಷ್ಠಾ ಜಿಲ್ಲಾ ಸಂಚಾಲಕ ಸುರೇಶಾಚಾರ್, ಕನಕರಾಜು, ಮುನೇಗೌಡ, ರಮೇಶ್ ಸೇರಿದಂತೆ ಅನೇಕ ಮುಖಂಡರು ಕಾರ್ಯಕರ್ತರು ಉಪಸ್ಥಿತರಿದ್ದರು.

# ಆದಿಚುಂಚನಗಿರಿಯಲ್ಲಿ ಚಂದ್ರಮಂಡಲೋತ್ಸವ, ಸಿದ್ಧಸಿಂಹಾಸನ ಪೂಜೆ



ನಾಗಮಂಗಲ: ಶ್ರೀ ಆದಿ ಚುಂಚನಗಿರಿ ಜಾತ್ರಾ ಮಹೋತ್ಸವ ಅಂಗವಾಗಿಚಂದ್ರ ಮಂಡಲೋತ್ಸವ ಉತ್ಸವಮತ್ತು ಸಿದ್ಧಸಿಂಹಾಸನ ಪೂಜೆ, ಜ್ವಾಲಾಪೀಠಾ ರೋಹಣ ಕಾರ್ಯಕ್ರಮ ಜರಗಿತು.

ತಾಲೂಕಿನ ಶ್ರೀ ಕ್ಷೇತ್ರ ಆದಿಚುಂಚ ನಗಿರಿ ಜಾತ್ರಾ ಮಹೋತ್ಸವದ ಪ್ರಯುಕ್ತ ಸರ್ವಾಲಂಕೃತ ಚಂದ್ರಮಂಡಲೋತ್ಸವ ಉತ್ಸವ ಮತ್ತು ಸಿದ್ಧಸಿಂಹಾಸನ ಪೂಜೆ, ಜ್ವಾಲಾಪೀಠಾ ರೋಹಣ ಹಾಗೂ ಷೋಡಶೋಪಚಾರ ಪೂಜೆಯು ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಪರಮಪೂಜ್ಯ ಜಗದ್ಗುರು ಶ್ರೀ ಶ್ರೀ ಶ್ರೀ ಡಾ. ನಿರ್ಮಲಾನಂದನಾಥ ಮಹಾ ಸ್ವಾಮೀಜಿಗಳವರಿಗೆ ನೆರವೇರಿದವು. ಪೂಜಾ ಕಾರ್ಯಕ್ರಮದಲ್ಲಿ ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನದ ಎಲ್ಲಾ ಶಾಖಾ ಮಠಗಳ ಪೂಜ್ಯ ಸ್ವಾಮೀಜಿಗಳವರು, ಶ್ರೀ ಮಠದ ಸದ್ಭಕ್ತರು ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಉಪಸ್ಥಿತರಿದ್ದು ಪರಮಪೂಜ್ಯ ಮಹಾ ಸ್ವಾಮೀಜಿಯವರ ಆಶೀರ್ವಾದ ಪಡೆದರು.

# ವಿಜೃಂಭಣೆಯ ಕಲ್ಕುಂಟೆ ಬ್ರಹ್ಮರಥೋತ್ಸವ

**ಮಾಲೂರು:** ತಾಲ್ಲೂಕಿನ ಚಿಕ್ಕತಿರುಪತಿ ಸಮೀಪದ ಕಲ್ಕುಂಟೆ ಅಗ್ರಹಾರದಲ್ಲಿ ಶ್ರೀ ರಂಗನಾಥ ಸ್ವಾಮಿ ಬ್ರಹ್ಮರಥೋತ್ಸವ ಬಹಳ ವಿಜೃಂಭಣೆಯಿಂದ ಜರುಗಿತು.

ಬ್ರಹ್ಮರಥೋತ್ಸವವು ಮಧ್ಯಾಹ್ನ ಸಮಯದಲ್ಲಿ ನೂರಾರು ಭಕ್ತರು ಸಮ್ಮುಖದಲ್ಲಿ ನಡೆಯಿತು. ಧಾರ್ಮಿಕ ದತ್ತಿ ಇಲಾಖೆ ವ್ಯಾಪ್ತಿಗೆ ಒಳಪಡುವ ಶ್ರೀ ರಂಗನಾಥ ಸ್ವಾಮಿ ದೇವಸ್ಥಾನದಲ್ಲಿ ಹಲವು ದಿನಗಳಿಂದ ಒಂದೊಂದು ದಿನ ಒಂದೊಂದು ಉತ್ಸವ ಕಾರ್ಯಕ್ರಮಗಳು ನಡೆದವು.

ಬ್ರಹ್ಮರಥೋತ್ಸವ ನಂತರ ಪಲ್ಲಕ್ಕಿ ಉತ್ಸವ ಸೇರಿದಂತೆ ಇನ್ನೂ ಮೂರು ದಿನಗಳ ಕಾಲ ಜಾತ್ರೆ ಮಹೋತ್ಸವವು ನಡೆಯಲಿದೆ.




ಈ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ನಿವೃತ್ತ ಸೈನಿಕರಾದ ರಾಮು ಅವರು ಸುಮಾರು ಐನೂರು ವರ್ಷಗಳ ಇತಿಹಾಸ ಹೊಂದಿರುವ ನಮ್ಮ ದೇವಸ್ಥಾನವು ಕೋಲಾರ ಜಿಲ್ಲೆಯ ವಕ್ಕಲೇರಿ ಗ್ರಾಮದಲ್ಲಿ ಸಿಕ್ಕ ಉದ್ಭವ ಮೂರ್ತಿಯನ್ನು ನಮ್ಮ ಕಲ್ಕುಂಟೆ ಅಗ್ರಹಾರ ಗ್ರಾಮದ ಬ್ರಾಹ್ಮಣ ಸಮುದಾಯದವರು ತಂದು ಪ್ರತಿಸ್ಥಾಪಿಸಿದ್ದರು ಇನ್ನೂ ಪ್ರತಿ ವರ್ಷವು ಬ್ರಹ್ಮರಥೋತ್ಸವ ವಿಜೃಂಭಣೆಯಿಂದ ನೆರವೇರುತ್ತದೆ ಎಂದರು.

ಮುಖಂಡರಾದ ಶ್ರೀನಿವಾಸ್ ರವರು ಮಾತನಾಡಿ, ರಂಗನಾಥ ಸ್ವಾಮಿ ಬ್ರಹ್ಮರಥೋತ್ಸವ ಬಹಳ ವಿಜೃಂಭಣೆಯಿಂದ ಜರುಗಿತು ಬ್ರಹ್ಮರಥೋತ್ಸವದಲ್ಲಿ ಸುತ್ತ ಮುತ್ತಲಿನ ಗ್ರಾಮಸ್ಥರು ಪಾಲ್ಗೊಂಡು ದೇವರ ಕೃಪೆಗೆ ಪಾತ್ರರಾಗಿದ್ದಾರೆ.

ಬ್ರಹ್ಮರಥೋತ್ಸವ ಅಂಗವಾಗಿ ಪ್ರತಿದಿನ ಒಂದೊಂದು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಮಾರ್ಚ್ 15 ಶನಿವಾರದಂದು ಶ್ರೀಬಾಯ್ಸ್ ವತಿಯಿಂದ ರಸಸಂಜೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ ಈ ರಸಸಂಜೆ ಕಾರ್ಯಕ್ರಮದಲ್ಲಿ ಕರುನಾಡಿನ ಹೆಸರಾಂತ ಕಲಾವಿದರು, ಗಾಯಕರು, ಭಾಗವಹಿಸಲಿದ್ದಾರೆ ಕನ್ನಡ ಕೋಗಿಲೆ, ಡಿಕೆಡಿ, ಸರಿಗಮಪ ಖ್ಯಾತಿಯ ಪುರುಷೋತ್ತಮ್, ದಿಯ ಹೆಗ್ಡೆ, ಬಿಗ್ ಬಾಸ್ ಖ್ಯಾತಿಯ ಹನುಮಂತು ನಟರಾದ ಡ್ರ್ಯಾಗನ್ ಮಂಜು, ಜಾಕ್ ಜಾಲಿ, ಮಲ್ಲ ಸೇರಿದಂತೆ ಇನ್ನಿತರು ಭಾಗವಹಿಸುತ್ತಾರೆ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಕಲ್ಕುಂಟೆ ಅಗ್ರಹಾರದ ಮಂಜುನಾಥ್ (ರೋಸ್) ಆನಂದ್, ಮಾಜಿ ಗ್ರಾ ಪಂ ಅಧ್ಯಕ್ಷರಾದ ವೆಂಕಟೇಶ್, ರಂಗನಾಥ್, ಮಂಜುನಾಥ್, ನಟರಾಜ್, ಗುಮ್ಮಡಿ ರಮೇಶ್, ಮಧು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಮಿಡಿದ ಮರಗಳು ಪುಸ್ತಕ ಬಿಡುಗಡೆ

**ಕೆ.ಆರ್.ಪುರ:** ಪರಿಸರ ಸಂರಕ್ಷಣೆ ಜೊತೆಗೆ ಪರಿಸರ ಸಾಹಿತ್ಯ ಕ್ಷೇತ್ರದಲ್ಲೂ ಸಹ ಅಭಿವೃದ್ಧಿ ಹೊಂದಬೇಕು ಎಂದು ಶಾಸಕ ಬೈರತಿ ಬಸವರಾಜ ಹೇಳಿದರು.




ಕೆ.ಆರ್.ಪುರ ಸಾರ್ವಜನಿಕ ಆಸ್ಪತ್ರೆ ಆವರಣದಲ್ಲಿ ಮಿಡಿತ ಫೌಂಡೇಶನ್ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಪರಿಸರ ಮಂಜುರವರ ಮೂರನೇ ಕೃತಿ ಮಿಡಿದ ಮರಗಳು ಪುಸ್ತಕ ಲೋಕಾರ್ಪಣೆ ಹಾಗೂ 501 ಔಷದ ಗಿಡಗಳ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಅತಿ ವೇಗವಾಗಿ ಬೆಳೆಯುತ್ತಿರುವ ಬೆಂಗಳೂರು ನಗರದಲ್ಲಿ ಪರಿಸರ ಸಂರಕ್ಷಣೆ ಬಹಳ ಮುಖ್ಯ. ಅಭಿವೃದ್ಧಿ ವಿಚಾರ ಬಂದಾಗ ಮರಗಳು ಕಡಿಯುವುದು ಅನಿವಾರ್ಯ. ಒಂದು ಮರ ಕಡಿದರೆ ಅದಕ್ಕೆ ಪ್ರತಿಯಾಗಿ ಹನ್ನೊಂದು ಗಿಡ ನೆಡುವ ಮೂಲಕ ಪರಿಸರ ಸಂರಕ್ಷಣೆಗೆ ಮುಂದಾಗಬೇಕು ಎಂದರು.

ಅನಾಧಿಕೃತವಾಗಿ ಯಾರೇ ಮರಗಳನ್ನು ಕಡಿದರು ಅವರಿಗೆ ತಕ್ಕ ಶಿಕ್ಷೆಯಾಗಬೇಕು, ಮರ ಸಂರಕ್ಷಣೆ ಕಾಯ್ದೆ ಬಲಿಷ್ಠವಾಗಬೇಕು, ನಗರದ ಮರಗಳು ಉಳಿದರೆ ಮಾತ್ರ ನಗರವಾಸಿಗಳು ಆರೋಗ್ಯ ರಕ್ಷಣೆಯಾಗುತ್ತದೆ ಎಂದು ಸಾಹಿತಿ ಪರಿಸರ ಮಂಜು ಅಭಿಪ್ರಾಯಪಟ್ಟರು.

ಈ ಸಂಧರ್ಭದಲ್ಲಿ ಮಾಜಿ ಪಾಲಿಕೆ ಸದಸ್ಯ ಪಿ.ಜೆ. ಅಂತೋಣಿಸ್ವಾಮಿ, ಮುಖಂಡರಾದ ಶಿವಪ್ಪ, ಭಾಗ್ಯಮ್ಮ, ಎಂ.ಆರ್.ವೆಂಕಟೇಶ್, ವಿಕ್ರಮ್, ಪಟಾಕಿ ರವಿ, ಗಂಧರ್ವ ರಮೇಶ್, ಉಪೇಂದ್ರಕುಮಾರ್, ಮಿಡಿತ ಫೌಂಡೇಶನ್ ಸದಸ್ಯರು ಸದಸ್ಯರು ಮತ್ತಿತರರು ಉಪಸ್ಥಿತರಿದ್ದರು.

# ಅನ್ನದಾತನಿಗೆ ಪ್ರೋತ್ಸಾಹಿಸುವ ಯೋಜನೆಗಳನ್ನ ಸರ್ಕಾರಗಳು ನೀಡಬೇಕು

**ಕೆ.ಆರ್.ಪೇಟೆ.:** ಯಾವುದೇ ಸರ್ಕಾರ ಗಳಾಗಲಿ ಅನ್ನದಾತನಿಗೆ ಪ್ರೋತ್ಸಾಹಿಸುವ ಯೋಜನೆಗಳನ್ನು ಅನುಷ್ಠಾನಗೊಳಿಸಿದರೆ ರೈತ ಶ್ರಮವಹಿಸಿ ಬೆಳೆಗಳನ್ನು ಬೆಳೆದು ನಾಡಿಗೆ ಅನ್ನ ನೀಡುತ್ತಾನೆ ಎಂದು ಶಾಸಕ ಹೆಚ್.ಟಿ.ಮಂಜು ತಿಳಿಸಿದರು.

ಅವರು ತಾಲ್ಲೂಕಿನ ಶೀಳನೆರೆ ಹೋಬಳಿ ಯ ರಾಯಸಮುದ್ರ ಗ್ರಾಮದಲ್ಲಿ ಒಂದು ಕೋಟಿ ಇಪ್ಪತ್ತು ಲಕ್ಷ ರೂ.ಗಳ ವೆಚ್ಚದಲ್ಲಿ ನಬಾರ್ಡ ಹಾಗೂ ಸಣ್ಣನೀರಾವರಿ ಇಲಾಖೆಗಳ ವತಿಯಿಂದ ಪೈಪ್‌ಲೈನ್, ಬಾಕ್ಸ್ ಡ್ರೈನ್ ಕಾಮಗಾರಿಗೆ ಗುದ್ದಲಿಪೂಜೆ ನೆರವೇರಿಸಿ ಮಾತನಾಡಿದರು.

ರೈತರ ಬೆಳೆಗಳಿಗೆ ಕೆರೆಕಟ್ಟೆಗಳ ಮೂಲಕ ನೀರಿನ ಸೌಕರ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಕಾರ್ಯಕ್ರಮಗಳನ್ನು ಹಾಕಿಕೊಂಡು ಅನುಷ್ಠಾನ ಮಾಡಲಾಗುತ್ತಿದೆ. ಕೆರೆಕಟ್ಟೆಗಳನ್ನು ತುಂಬಿಸುವುದು ಸೇರಿದಂತೆ ಕೊಳವೆ ಬಾವಿಗಳ ಅಂತರ್ಜಲ ಹೆಚ್ಚಿಸಿದರೆ ರೈತರುಗಳು ಸಮೃದ್ಧಿಯಾದ ಬೆಳೆಯನ್ನು ಬೆಳೆಯುತ್ತಾರೆ. ಇದಕ್ಕೆ ಸರ್ಕಾರ ಕ್ರಮವಹಿಸಬೇಕು. ನೀರಾವರಿ ಯೋಜನೆಗಳನ್ನು ಅನುಷ್ಠಾನಗೊಳಿಸಿ ಬರಡುಭೂಮಿಗೆ ನೀರುಣಿಸುವ ಹಾಗೂ ಹಸಿರು ಕ್ರಾಂತಿಗೆ ಸಹಾಯಕವಾಗಬಲ್ಲ ಯೋಜನೆಗಳನ್ನು ಜಾರಿಗೆ ತಂದರೆ ರೈತರ ಬದುಕು ಹಸನಾಗುತ್ತದೆ. ಅತಿವೃಷ್ಟಿಯಿಂದಾಗಿ ಒಡೆದುಹೋದ ಕೆರೆಕಟ್ಟೆಗಳ ಮರು ನಿರ್ಮಾಣ ಮಾಡಲು ಸಾಕಷ್ಟು ಬಾರಿ ಅನುದಾನಕ್ಕಾಗಿ ಮನವಿ ಮಾಡಿದ್ದೇನೆ. ಅಲ್ಲದೇ ತಾಲ್ಲೂಕಿನಲ್ಲಿ ಅನೇಕ ಗ್ರಾಮಗಳಲ್ಲಿ ಹೊಸಹೊಸ ಬಡಾವಣೆಗಳು ತಲೆಎತ್ತುತ್ತಿವೆ. ಅವುಗಳಿಗೆ ಶುದ್ಧ ಕುಡಿಯುವನೀರು, ಒಳಚರಂಡಿ, ವಿದ್ಯುತ್, ರಸ್ತೆ ಸೇರಿದಂತೆ ಮೂಲಭೂತ ಅವಶ್ಯಕತೆಗಳನ್ನು ಒದಗಿಸಿಕೊಡಬೇಕಾದುದು ಸರ್ಕಾರದ ಕರ್ತವ್ಯವಾಗಿದ್ದು ಈ ನಿಟ್ಟಿನಲ್ಲಿ ಅನೇಕ ಗ್ರಾಮಗಳಿಗೆ ಒಳಚರಂಡಿ, ರಸ್ತೆ, ಕುಡಿಯುವ ನೀರಿನ ಪೈಪ್‌ಲೈನ್ ಕಾಮಗಾರಿಗಳನ್ನು ಮಾಡಿಸಲಾಗುತ್ತಿದೆ. ಆದ್ಯತೆಯ ಮೇಲೆ ಹಾಗೂ ಅನುದಾನದ ಲಭ್ಯತೆ ನೋಡಿಕೊಂಡು ಎಲ್ಲಾ ಗ್ರಾಮಗಳನ್ನು ಅಭಿವೃದ್ಧಿಗೊಳಿಸುವ ಕೆಲಸ ಮಾಡಲಾಗುತ್ತದೆ. ಅನುದಾನಕ್ಕಾಗಿ ಸರ್ಕಾರದ ಎಲ್ಲಾ ಸಚಿವರ ಕಛೇರಿಗಳಿಗೂ ಭೇಟಿ ನೀಡಿ ಮನವಿ ಮಾಡಿದ್ದೇನೆ. ಯಾರು ಏನೇ ಹೇಳಿದರೂ ನನ್ನ ಐದು ವರ್ಷಗಳ ಅವಧಿಯಲ್ಲಿ ತಾಲ್ಲೂಕಿನ ಅಭಿವೃದ್ಧಿಗೆ ನನ್ನ ಶಕ್ತಿಮೀರಿ ಪ್ರಯತ್ನಿಸುತ್ತೇನೆ. ಜನರ ನಡುವೆ ಇದ್ದು ಕೆಲಸ ಮಾಡುತ್ತೇನೆ ಎಂದರು.

ಇದೇ ಸಂದರ್ಭದಲ್ಲಿ ಹರಳಹಳ್ಳಿ ಗ್ರಾಮಪಂಚಾಯಿತಿ ಅಧ್ಯಕ್ಷ ಅಶೋಕ್, ಮಾಜಿಅಧ್ಯಕ್ಷ ಹರೀಶ್, ಆರ್. ಕೆ.ಯೋಗೇಶ್, ಎಸ್.ಬಿ.ಬಸವರಾಜು, ಗ್ರಾಪಂ ಸದಸ್ಯ ಚಂದ್ರು, ಸೊಸೈಟಿ ನಿರ್ದೇಶಕ ಪ್ರೇಮಕುಮಾರ್, ಈರೇಗೌಡ, ತಿಮ್ಮಯ್ಯ, ಯೋಗೇಶ್, ಕಾಳೇಗೌಡ, ಬಸವರಾಜು, ನಂದ, ರಮೇಶ, ಉಮೇಶ, ಸತೀಶ ಸೇರಿದಂತೆ ಹಲವರಿದ್ದರು.



# ಕೆ.ಆರ್.ಪೇಟೆ ಪಟ್ಟಣದಲ್ಲಿ ಜಾನಪದ ಉತ್ಸವದ ಮೆರುಗು

**ಕೆ.ಆರ್.ಪೇಟೆ:** ಪಟ್ಟಣದಲ್ಲಿ ಜಾನಪದ ತಂಡಗಳ ಕಲರವ. ಸರಕಾರಿ ಪ್ರಥಮ ದರ್ಜೆ ಕಾಲೇಜಿನ ವತಿಯಿಂದ ಆಯೋಜಿಸಿದ್ದ ಜಾನಪದ ಉತ್ಸವದ ಮೆರುಗು ವಿಶೇಷ ಕಳೆಯನ್ನು ತಂದಿತ್ತು. ಎತ್ತಿನಗಾಡಿಗಳು ಮೆರವಣಿಗೆ, ಹಳ್ಳಿಕಾರ್ ಜೋಡೆತ್ತುಗಳ ಮೆರವಣಿಗೆ, ತಮಟೆಯ ಸದ್ದಿಗೆ ರಸ್ತೆಯಲ್ಲಿಯೆ ರಂಗ ಕುಣಿದ ವಿದ್ಯಾರ್ಥಿಗಳು, ವೀರಗಾಸೆಯ ಕುಣಿತ, ಸೋಬಾನೆ ಪದವನ್ನು ಹಡುವ ಮಹಿಳೆಯರ ಮೆರವಣಿಗೆ ಹೀಗೆ ಹತ್ತು ಹಲವಾರು ಜಾನಪದ ಸಂಸ್ಕೃತಿಯ ಅನಾವರಣ ಗುರುವಾರ ಪ್ರವಾಸಿ ಮಂದಿರದ ಆವರಣದಲ್ಲಿ ನಡೆಯಿತು.

ಶಾಸಕ ಹೆಚ್.ಟಿ.ಮಂಜು ಅವರು ಜಾನಪದ ಕಲಾತಂಡಗಳ ಮೆರವಣಿಗೆಯನ್ನು ಉದ್ಘಾಟಿಸಿ ತಾವೆ ಸ್ವತಃ ಎತ್ತಿನ ಗಾಡಿಯನ್ನು ಚಾಲನೆಯನ್ನು ಮಾಡುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ ದೇಸೀ ಸಂಸ್ಕೃತಿಯ ಉಳಿವಿಗೆ ಕಾಲೇಜು ಶಿಕ್ಷಣ ಇಲಾಖೆ ಜನಪದ ಉತ್ಸವಗಳನ್ನು ಮಾಡುವ ಮೂಲಕ ಒಳ್ಳೆಯ ಹೆಜ್ಜೆಯನ್ನಿಟ್ಟಿದೆ. ಜಾನಪದ ನಮ್ಮ ಮೂಲ ಬೇರು. ಇಂದು ಬೇರನ್ನು ಸಾಯಿಸುವ ಕೆಲಸಗಳು ನಡೆಯುತ್ತಿವೆ. ಯುವಕರು ತಮ್ಮ ಸಂಸ್ಕೃತಿಯನ್ನು ಬಿಟ್ಟು ಅನ್ಯ ಸಂಸ್ಕೃತಿಗೆ ಮಾರು ಹೋಗುತ್ತಿದ್ದಾರೆ. ಇಂತಹ ದಿನಗಳಲ್ಲಿ ಸರಕಾರವು ರೂಪಿಸಿರುವ ಇಂತಹ ಅತ್ಯಮೂಲ್ಯ ಕಾರ್ಯಕ್ರಮಗಳು ಜನರನ್ನು ತಲುಪಬೇಕು. ಈ ನಿಟ್ಟಿನಲ್ಲಿ ನಮ್ಮ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ವತಿಯಿಂದ ಉತ್ತಮವಾದ ಕಾರ್ಯಕ್ರಮವನ್ನು ರೂಪಿಸಿದ್ದು ಉದ್ದೇಶ ಈಡೇರಲಿ ಎಂದು ತಿಳಿಸಿದರು.

ಎಂ.ಕೆ.ಬೊಮ್ಮೇಗೌಡ ವೃತ್ತದಿಂದ ಆರಂಭವಾದ ಮೆರವಣಿಗೆಯು ಹೊಸಹೊಳಲು ರಸ್ತೆಯಲ್ಲಿ ಕಾಲೇಜಿನ ಆವರಣವನ್ನು ತಲುಪಿತು. ಕಾಲೇಜಿನ ಆವರಣವನ್ನು ವಿದ್ಯಾರ್ಥಿಗಳು ತಳಿರು ತೋರಣಗಳಿಂದ ಸಿಂಗರಿಸಿದ್ದರು. ಆವರಣದಲ್ಲಿ ರೈತರ ಆಹಾರ ಧಾನ್ಯಗಳ ಸಂಸ್ಕರಣೆಗೆ ಉಪಯೋಗಿಸುವ ಕಣವನ್ನು ಮಾಡಲಾಗಿತ್ತು. ಕಣದಲ್ಲಿ ಭತ್ತದ ರಾಶಿ, ರಾಗಿಯ ರಾಶಿ, ಕಬ್ಬುಗಳು, ರಾಗಿಯ ತೆನೆಗಳು, ಹಿಂದೆ ಗ್ರಾಮೀಣ ಭಾಗದಲ್ಲಿ ಉಪಯೋಗಿಸುತ್ತಿದ್ದ ಮೊರ, ವೊಂದರಿ, ಒನಕೆ, ಮಡಿಕೆಗಳು, ಗುಡಾಣಗಳು ಹೀಗೆ ಹತ್ತು ಹಲವು ಜಾನಪದ ವಸ್ತುಗಳಿಂದ ಸಿಂಗರಿಸಲಾಗಿತ್ತು. ಆವರಣದಲ್ಲಿ ಎತ್ತುಗಳನ್ನು ಕಟ್ಟುವ ಮೂಲಕ ಜಾತ್ರೆಯ ವೈಭವವನ್ನು ತರಿಸಲಾಗಿತ್ತು.

ಕಣದಲ್ಲಿನ ರಾಶಿ ಪೂಜೆಯನ್ನು ಕರ್ನಾಟಕ ಸಂಘದ ಅಧ್ಯಕ್ಷ ಪ್ರೊ.ಬಿ.ಜಯಪ್ರಕಾಶ್‌ಗೌಡ ನೆರವೇರಿಸಿ ಮಾತನಾಡಿ ಮಂಡ್ಯ ಹೇಳಿ ಕೇಳಿ ಜನಪದರ ತವರೂರು. ನಮ್ಮ ಚಡ್ಡಿ ಸಂಸ್ಕೃತಿ ಇಂಡಿಯಾದಲ್ಲಿಯೆ ಫೇಮಸ್. ಇಂತಹ ಸಂಸ್ಕೃತಿಯನ್ನು ಮಂಡ್ಯದ ಜನರಾದ ನಾವುಗಳು ಉಳಿಸಿ ಬೆಳೆಸಬೇಕು. ಇಂದು ಪ್ರತಿಯೊಬ್ಬ ವಿದ್ಯಾರ್ಥಿ ವಿದ್ಯಾರ್ಥಿನಿಯರು ಕೂಡಾ ದೇಸಿ ಉಡುಗೆಗಳನ್ನು ತೊಟ್ಟು ಬಂದಿದ್ದೀರಿ. ಎಷ್ಟು ಚಂದ ಕಾಣುತ್ತಿದ್ದೀರಿ. ಇದು ನಿಜವಾಗಿಯೂ ನಮ್ಮ ಮಧ್ಯೆ ಉಳಿಯಬೇಕಾದದ್ದು. ಇಂದು ಕೆ.ಆರ್.ಪೇಟೆಯಲ್ಲಿ ಆ ಸಂಸ್ಕೃತಿ ಉಳಿದಿದೆ. ನಿಜವಾಗಿಯೂ ವಿದ್ಯಾರ್ಥಿಗಳ ಶಿಸ್ತು ಎಲ್ಲರೂ ಮೆಚ್ಚುವಂತಹದ್ದು. ತಾವೆ ತಯಾರಿಸಿ ನಮಗೆ ಊಟವನ್ನು ಬಡಿಸಿದ್ದೀರಿ. ಹುರುಳಿಕಾಳು, ಹಲಸಂದೆ ಕಾಳುಗಳ ಪಲ್ಯ, ರಾಗಿಮುದ್ದೆ, ನಾಟಿಕೋಳಿ ಸಾರು, ಒಬ್ಬಟ್ಟು, ತಂಬಿಟ್ಟು ಒಂದಾ ಎರಡಾ. ಇದು ನಮ್ಮ ಹೆಣ್ಣು ಮಕ್ಕಳ ಸಂಸ್ಕೃತಿ. ಇದು ಹೀಗೆಯೆ ಮುಂದುವರೆಯಲಿ ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ರೋಟರಿ ಕ್ಲಬ್ ಅಧ್ಯಕ್ಷ ಆರ್‌ಟಿಓ ಮಲ್ಲಿಕಾರ್ಜುನ್, ಜಾನಪದ ಪರಿಷತ್ ಅಧ್ಯಕ್ಷ ಕೆ.ಎಂ. ವಾಸು, ಮಾಜಿ ಅಧ್ಯಕ್ಷ ಎಂ.ಕೆ.ಹರಿಚರಣ ತಿಲಕ್, ಕಾಲೇಜಿನ ಪ್ರಾಂಶುಪಾಲ ಡಾ.ವಿ.ವಿ.ಜಗದೀಶ್ ಮಾತನಾಡಿದರು. ವೇದಿಕೆಯಲ್ಲಿ ಪ್ರಾಧ್ಯಾಪಕರುಗಳಾದ ಡಾ.ಸಿ.ರಮೇಶ್, ಡಾ.ಸವಿತಾ, ಡಾ.ಮಹೇಶ್, ಡಾ.ಜಯಕೀರ್ತಿ, ಎಂ.ಬೋರೇಗೌಡ, ಕುಮಾರಸ್ವಾಮಿ, ಸುರೇಶ್, ಶಿವಕುಮಾರಸ್ವಾಮಿ, ರಘು, ಪ್ರಕಾಶ್, ಉಮೇಶ್, ರೂಪಾ, ಪುಷ್ಪ, ಶಿಲ್ಪ, ಪತ್ರಾಂಕಿತ ವ್ಯವಸ್ಥಾಪಕರುಗಳಾದ ಬಿ.ಎ.ಮಂಜುನಾಥ್, ಜೆ.ಭುವನೇಶ್ವರಿ ಸೃದಿಂತೆ ಕಾಲೇಜಿನ ಅಧ್ಯಾಪಕ ವರ್ಗ, ಉಪನ್ಯಾಸಕ ವರ್ಗ, ಆಡಳಿತ ಸಿಬ್ಬಂದಿ ವರ್ಗದವರು ಹಾಜರಿದ್ದರು.



# ವಿಕಲಚೇತನ ಮಕ್ಕಳಿಗೆ ಆತ್ಮಧೈರ್ಯ ಬೆಳೆಸಲು ಚಂದ್ರಕಲಾ ಸಲಹೆ

ಮಾಲೂರು: ಹಲವಾರು ಯೋಜನೆಗಳ ಮೂಲಕ ವಿಕಲಚೇತನರಿಗೆ ಸಮನ್ವಯತೆಯನ್ನು ಸಾಧಿಸಲು ಶ್ರಮವಹಿಸುತ್ತಿದ್ದು, ವಿಕಲಚೇತನ ಮಕ್ಕಳಿಗೆ ಆತ್ಮಧೈರ್ಯವನ್ನು ಬೆಳೆಸಿ ಅವಕಾಶ ಮಾಡಿಕೊಟ್ಟಾಗ ಮಾತ್ರ ಸಾಧನೆ ಮಾಡಲು ಸಾಧ್ಯ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಹೆಚ್ ಎಸ್ ಚಂದ್ರಕಲಾ ಅಭಿಪ್ರಾಯ ಪಟ್ಟರು.

ಪಟ್ಟಣದ ಸರ್ಕಾರಿ ಬಾಲಕರ ಹಿರಿಯ ಪ್ರಾಥಮಿಕ ಪಾಠಶಾಲೆ ಆವರಣದಲ್ಲಿ ವಿಶೇಷಚೇತನ ಮಕ್ಕಳಿಗಾಗಿ ಕ್ರೀಡೆ ಮತ್ತು ಅರಿವು ಕಾರ್ಯಕ್ರಮವನ್ನು ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಲಯ ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಯವರ ಸಹಯೋಗದಲ್ಲಿ ಕ್ಷೇತ್ರ ಸಮನ್ವಯಶಿಕ್ಷಣ ಸಂಪನ್ಮೂಲ ಕೇಂದ್ರದ ವತಿಯಿಂದ ವಿಶೇಷ ಆಗತ್ಯತೆಯುಳ್ಳ ವಿದ್ಯಾರ್ಥಿಗಳಿಗಾಗಿ ಕ್ರೀಡೆ ಮತ್ತು ಅರಿವು ಎಂಬ ಕಾರ್ಯಕ್ರಮವನ್ನು ಆಯೋಜನೆಯನ್ನು ಮಾಡಲಾಗಿತ್ತು.

ಸಮನ್ವಯ ಶಿಕ್ಷಣ ಎಂಬುದು ಸಾಮಾನ್ಯ ಮಕ್ಕಳೊಂದಿಗೆ ವಿಕಲಚೇತನ ಮಕ್ಕಳನ್ನು ಒಟ್ಟುಗೂಡಿಸಿ ಅವರಿಗೆ ಶಿಕ್ಷಣವನ್ನು ಕೊಡುವ ವ್ಯವಸ್ಥೆಯಾಗಿದೆ. ವಿಶೇಷ ಅಗತ್ಯತೆಯುಳ್ಳ ಮಕ್ಕಳ ಶಿಕ್ಷಣವನ್ನು ಸಾಮಾನ್ಯ ಶಿಕ್ಷಣ ವ್ಯವಸ್ಥೆಯ ಒಂದು ಅವಿಭಾಜ್ಯ ಅಂಗವನ್ನಾಗಿಸುವುದು ಇದನ್ನು ಖಾತ್ರಿಗೊಳಿಸಲು ಅಂಗವಿಕಲ ಹಕ್ಕುಗಳ ಕಾಯಿದೆ 2016 ಜಾರಿಯಾಗಿದೆ. ಸಮನ್ವಯತೆ ಕೇವಲ ಶಾಲೆಗಳಲ್ಲಿ ಮಾತ್ರ ಸಾದಿಸಿದರೆ ಸಾಧ್ಯವಾಗುವುದಿಲ್ಲ ಎಲ್ಲ ಹಂತಗಳಲ್ಲಿ ಅಂದರೆ ಮನೆ, ನೆರೆಹೊರೆ, ಸಮುದಾಯ ಸ್ಥಳೀಯ ಸಂಸ್ಥೆಗಳು ಶಾಲೆ, ಸಾರ್ವಜನಿಕ ಸ್ಥಳಗಳು ಬಸ್ಸು ನಿಲ್ದಾಣಗಳು ಆಸ್ಪತ್ರೆಗಳು, ಪೋಲೀಸ್ ಠಾಣೆಗಳು ಇತರೆ ಸ್ಥಳಗಳಲ್ಲಿ ವಿಕಲಚೇತನರಿಗೆ ವಿಕಲಚೇತನ ಸ್ನೇಹಿ ಡಿ ನಿಟ್ಟಿನಲ್ಲಿ ಸರ್ಕಾರ ವಾತಾವರಣ ಕಲ್ಪಿಸಿದರೆ ಸಮನ್ವಯತೆಯನ್ನು ಸಾದಿಸಬಹುದು. ಎಲ್ಲ ಹಂತದಲ್ಲಿ ವಿಕಲಚೇತನರಿಗಾಗಿ ರಾಂಪ್ ಅಳವಡಿಸಿದೆ. ವಿಶೇಷ ಶೌಚಾಲಯಗಳು (ಡಿಸೆಬಲ್ ಫ್ರೆಂಡ್ಲಿ ಟ್ಯಾಲೆಟ್ ) ನಿರ್ಮಿಸಿದೆ.ಸಾರಿಗೆ ವಿಶೇಷವಾದ ಆಸನ ವ್ಯವಸ್ಥೆ, ಹೀಗೆ ಹತ್ತು ಹಲವಾರು ಯೋಜನೆಗಳ ಮೂಲಕ ಸಮುದಾಯದಲ್ಲಿ ವಿಕಲಚೇತನರಿಗೆ ಸಮನ್ವಯತೆಯನ್ನು ಸಾಧಿಸಲು ಶ್ರಮವಹಿಸುತ್ತಿದೆ. ವಿಕಲಚೇತನ ಮಕ್ಕಳಿಗೆ ನಾವು ಅವರಲ್ಲಿ ಆತ್ಮಧೈರ್ಯವನ್ನು ಬೆಳೆಸಿ ಅವರಿಗೆ ಅವಕಾಶಗಳನ್ನು ಮಾಡಿಕೊಟ್ಟಾಗ ಅವರ ಸಾದನೆಯನ್ನು ಮಾಡುತ್ತಾರೆ. ಆ ನಿಟ್ಟಿನಲ್ಲಿ ನಮ್ಮ ಇಲಾಖೆಯಿಂದ ವಿಕಲಚೇತನ ಮಕ್ಕಳಿಗೆ ಕ್ರೀಡೆ ಮತ್ತು ಅರಿವು ಕಾರಕ್ರಮವನ್ನು ತುಂಬಾ ವ್ಯವಸ್ಥಿತವಾಗಿ ಆಯೋಜಿಸಿ ಆ ಮಕ್ಕಳಿಗೆ ಬೌದ್ಧಿಕ ಸಾಮರ್ಥ್ಯ ಮತ್ತು ದೈಹಿಕ ಸಾಮರ್ಥ್ಯವನ್ನು ವಿವಿಧ ಕ್ರೀಡೆಗಳು ಮತ್ತು ಚಟುವಟಿಕೆಗಳನ್ನು ಮಾಡಿಸಿ ಅದರಲ್ಲಿ ಗೆಲ್ಲುವ ಮತ್ತು ಭಾಗವಹಿಸುವ ಎಲ್ಲ ಮಕ್ಕಳಿಗೆ ಇಲಾಖೆಯಿಂದ ಬಹುಮಾನ ಮತ್ತು ಪ್ರಶಸ್ತಿ ಪತ್ರಗಳನ್ನು ನೀಡುತ್ತಿದ್ದು, ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿ ಬಹುಮಾನಗಳನ್ನು ಪಡೆಯಿರಿ ಎಂದರು



ಕ್ಷೇತ್ರ ಸಮನ್ವಯಾಧಿಕಾರಿ ಟಿ ವೆಂಕಟಸ್ವಾಮಿ ಮಾತನಾಡಿ, ಸಮಗ್ರ ಶಿಕ್ಷಣ ಕರ್ನಾಟಕ ಸಮನ್ವಯಶಿಕ್ಷಣ ಮಧ್ಯವರ್ತನ ಚಟುವಟಿಕೆಯಡಿಯಲ್ಲಿ ವಿಕಲಚೇತನ ಮಕ್ಕಳಿಗಾಗಿ ತಾಲ್ಲೂಕಿನ ಮೂರು ಸ್ಥಳಗಳಲ್ಲಿ ಕ್ರೀಡೆ ಮತ್ತು ಅರಿವು ಕಾತ್ಯಕ್ರಮವನ್ನು ಮಾಡುವ ನಿಟ್ಟಿನಲ್ಲಿ ಪ್ರಥಮವಾಗಿ ಮಾಲೂರು ಪಟ್ಟಣದ ಸರ್ಕಾರಿ ಬಾಲಕರ ಹಿರಿಯ ಪ್ರಾಥಮಿಕ ಪಾಠಶಾಲೆಯ ಆವರಣದಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಾಗಿದೆ. ಅಂಗವಿಕಲತೆ ಎಂಬುದು ಒಂದು ಶಾಪವಲ್ಲ. ಸಾಕಷ್ಟು ಕಾರಣಗಳಿರುತ್ತವೆ. ವಿಕಲತೆಯನ್ನು ಹೊಂದಿರುವ ಮಗು ವಿಶೇಷ ಜ್ಞಾನವನ್ನು ಹೊಂದಿರುತ್ತದೆ. ಇಂತಹ ಮಕ್ಕಳನ್ನು ಸಲಹುತ್ತಿರುವ ಪೋಷಕರು ನಿಜಕ್ಕೂ ಶ್ರೇಷ್ಠರು ಎಂದರು ಕ್ರೀಡೆಗಳಲ್ಲಿ ಪ್ಯಾರಾ ಒಲಿಪಿಂಕ್ ಕ್ರೀಡೆಗಳಲ್ಲಿ ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಚಿನ್ನದ ಪದಕವನ್ನು ಗಳಿಸಿದ್ದಾರೆ. ಇದರ ಜೊತೆಗೆ ವಿವಿಧ ಕ್ಷೇತ್ರಗಳಲ್ಲಿ ಗಣನೀಯ- ಸಾಧನೆಯನ್ನು ಮಾಡಿದ್ದಾರೆ. ಉದಾ: ಪಂಚಾಕ್ಷರಿ ಗವಾಯಿಯವರು ಅಂದರಾಗಿದ್ದರು ಅವರ ಸಾದನೆ ಆಮೋಘವಾದದ್ದು. ಇಂತಹ ಮಕ್ಕಳಿಗೆ ಅವಕಾಶವನ್ನು ಒದಗಿಸಿಕೊಡುವುದು ನಮ್ಮೆಲ್ಲೇರ ಜವಾಬ್ದಾರಿ ಎಂದರು.

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಷಣ್ಮುಖಯ್ಯ, ಕರ್ನಾಟಕ ರಾಜ್ಯ ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಸಂಘದ ಅಧ್ಯಕ್ಷ ಎಂ. ಶ್ರೀನಿವಾಸ್,ಕರ್ನಾಟಕ ರಾಜ್ಯ ಬಡ್ತಿ ಮುಖ್ಯೋಪಾಧ್ಯಾಯರ ಸಂಘದ ಅಧ್ಯಕ್ಷ ಎಂ. ಮುನಿನಾರಾಯಣ, ಕರ್ನಾಟಕ

ರಾಜ್ಯ ಸರ್ಕಾರಿ ನೌಕರರ ಸಂಘದ ಪ್ರಧಾನ ಕಾರ್ಯದರ್ಶಿ ಎಂ ರವಿ, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿ ಪಿ ರಮೇಶ್ , ಕ್ಷೇತ್ರ ಶಿಕ್ಷಣಾಧಿಕಾರಿಗಳ ಸಂಪನ್ಮೂಲ ಅಧಿಕಾರಿ ಎಸ್. ಮೋಹನ್, ಎಂ.ನಟರಾಜ್, ವಿ.ನಾಗರಾಜ್,

ದೈಹಿಕ ಶಿಕ್ಷಣ ಪರಿವೀಕ್ಷಕ ವೆಂಕಟೇಶ್ , ಶಿಕ್ಷಣ ಸಂಯೋಜಕರಾದ ಸಿ ಶಶಿಧರ್, ಉಪಪ್ರಾಂಶುಪಾಲ ಸಿ ವಿಜಯಕುಮಾರ್ , ಕ್ಷೇತ್ರ ಸಂಪನ್ಮೂಲ ವ್ಯಕ್ತಿಗಳು, ಸಮೂಹ ಸಂಪನ್ಮೂಲವ್ಯಕ್ತಿಗಳು ವಿವಿಧ ಶಾಲೆಗಳಿಂದ ಬಂದಿದ್ದ 60 ವಿಕಲಚೇತನ ಮಕ್ಕಳು ಮತ್ತು ಪೋಷಕರು ಕೇಂದ್ರ ಶಾಲೆಯ ಮುಖ್ಯೋಪಾಧ್ಯಾಯರಾದ ಎಲ್ಲಾ ಕ್ಷೇತ್ರ ಸಿಬ್ಬಂದಿಯವರು ಭಾಗವಹಿಸಿದ್ದರು.

# ಕೇಶವಾರ ಪ್ರೊ.ನವೀನ್ ಕುಮಾರ್‌ಗೆ ರಾಜ್ಯ ಮಟ್ಟದ ಪ್ರಶಸ್ತಿ

ಶಿಡ್ಲಘಟ್ಟ: 2022-23ನೇ ಸಾಲಿನಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಮೂಲಕ ಸಲ್ಲಿಸಿರುವ ಅನುಪಮ ಸೇವೆಯನ್ನು ಪರಿಗಣಿಸಿ ಕರ್ನಾಟಕ ರಾಜ್ಯ ಸರ್ಕಾರ ಕೊಡುವ ಎನ್. ಎಸ್.ಎಸ್. ರಾಜ್ಯ ಮಟ್ಟದ ಅತ್ಯುತ್ತಮ ಎನ್.ಎಸ್.ಎಸ್ ಕಾರ್ಯಕ್ರಮಾಧಿಕಾರಿ ಪ್ರಶಸ್ತಿಗೆ ಯಲಹಂಕ ಉಪನಗರದ ಶೇಷಾದ್ರಿಪುರಂ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕರು ಮತ್ತು ಎನ್.ಎಸ್.ಎಸ್. ಅಧಿಕಾರಿ, ಕೇಶವಾರ ಪ್ರೊ.ನವೀನ್ ಕುಮಾರ್. ಕೆ.ಎಸ್ ಅವರು ಆಯ್ಕೆಯಾಗಿದ್ದಾರೆ.



ನವೀನ್ ಕುಮಾರ್ ರವರು ಮೂಲತಃ ಚಿಕ್ಕಬಳ್ಳಾಪುರ ತಾಲ್ಲೂಕಿನ ಕೇಶವಾರ ಗ್ರಾಮದ ಮಂಜುಳ ಮತ್ತು ಶ್ರೀನಿವಾಸ್ ರವರ ಪುತ್ರ,ಕಳೆದ ಐದು ವರ್ಷಗಳಿಂದ ಯಲಹಂಕ ಉಪನಗರದ ಶೇಷಾದ್ರಿಪುರಂ ಪ್ರಥಮ ದರ್ಜೆ ಕಾಲೇಜಿನಲ್ಲಿ ಸಹಾಯಕ ಪ್ರಾಧ್ಯಾಪಕ ಮತ್ತು ಎನ್‌ಎಸ್‌ಎಸ್ ಅಧಿಕಾರಿಯಾಗಿ ಕರ್ತವ್ಯವನ್ನು ನಿರ್ವಹಿಸುತ್ತಿದ್ದಾರೆ. ಈ ಹಿಂದೆ 2026-17 ನೇ ಸಾಲಿನಲ್ಲಿ ನವೀನ್ ಕುಮಾರ್ ಕೆ.ಎಸ್.ರವರು ಎನ್.ಎಸ್. ಎಸ್. ಅತ್ಯುತ್ತಮ ಸ್ವಯಂ ಸೇವಕ ಪ್ರಶಸ್ತಿಗೆ ಭಾಜನರಾಗಿರುವುದು ಹೆಮ್ಮೆಯ ವಿಚಾರ.

ಬೆಂಗಳೂರಿನ ರಾಜಭವನದ ಗಾಜಿನಮನೆಯಲ್ಲಿ ಮಾರ್ಚ್ 17 ರಂದು ನಡೆಯಲಿರುವ ಕಾರ್ಯಕ್ರಮದಲ್ಲಿ ರಾಜ್ಯಪಾಲ ಶ್ರೀ ಥಾವರ್ ಚಂದ್ ಗೆಹ್ಲೋಟ್ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

ಕೆ.ಎಸ್.ನವೀನ್ ಕುಮಾರ್ ಅವರ ಈ ಸಾಧನೆಗೆ ಶೇಷಾದ್ರಿಪುರಂ ಶಿಕ್ಷಣ ದತ್ತಿಯ ಅಧ್ಯಕ್ಷರಾದ .ಎನ್.ಆರ್ ಪಂಡಿತಾರಾಧ್ಯ ರವರು, ಗೌರವ ಪ್ರಧಾನ ಕಾರ್ಯದರ್ಶಿಗಳಾದ ವೂಡೇ ಪಿ. ಕೃಷ್ಣರವರು, ಶೇಷಾದ್ರಿಪುರಂ ಶಿಕ್ಷಣ ದತ್ತಿಯ ಆಡಳಿತ ಮಂಡಳಿ, ಕಾಲೇಜಿನ ಬೋಧಕ, ಬೋಧಕೇತರ ಸಿಬ್ಬಂದಿಗಳು, ಪೋಷಕರು ಮತ್ತು ಕುಟುಂಬಸ್ಥರು, ಕೇಶವಾರ ಗ್ರಾಮಸ್ಥರು, ಎನ್.ಎಸ್.ಎಸ್. ಸ್ವಯಂಸೇವಕರು, ವಿದ್ಯಾರ್ಥಿಗಳು ಹರ್ಷ ವ್ಯಕ್ತಪಡಿಸಿದ್ದಾರೆ.

# ಕೀಟನಾಶಕ ಸಿಂಪಡಣೆ: ಲಕ್ಷಾಂತರ ರೂ. ಹೂ ಬೆಳೆ ನಾಶ

ಶಿಡ್ಲಘಟ್ಟ: ತಾಲ್ಲೂಕಿನ ಶೆಟ್ಟಿಹಳ್ಳಿ ಗ್ರಾಮದ ರೈತ ಎಸ್.ಆರ್.ಮಂಜುನಾಥ್ ಅವರ ತೋಟದಲ್ಲಿ ಬೆಳೆದ ಶಾಮಂತಿ ಹೂ ಬೆಳೆ ಕೀಟನಾಶಕ ಸಿಂಪಡಣೆ ಬಳಿಕ ಏಕಾಏಕಿ ಬಾಡಲು ಆರಂಭಿಸಿದ ಪರಿಣಾಮ ಲಕ್ಷಾಂತರ ರೂ.ಗಳು ನಷ್ಟವಾಗಿದ್ದು ರೈತ ಸಂಕಷ್ಟಕ್ಕೆ ಸಿಲುಕಿದ್ದಾನೆ.

25 ಗುಂಟೆ ಜಮೀನಿನಲ್ಲಿ "ತ್ರಿಶಾಂಕಮ್ ತಳಿಯ ಶಾಮಂತಿ ಹೂ" ಬೆಳೆ ಬೆಳೆದಿದ್ದ ರೈತ, ಖಾಸಗಿ ಅಂಗಡಿಯಿಂದ ಖರೀದಿಸಿದ ಕೀಟನಾಶಕವನ್ನು ಸಿಂಪಡಿಸಿದ ನಂತರ ಹೂವು ಹಾಗೂ ಗಿಡಗಳು ಬೆಂಕಿಗೆ ಸುಟ್ಟಂತೆ ಬಾಡಲಾರಂಭಿಸಿದವು.

ಸಂಘಟನೆ ಹಾಗೂ ಇಲಾಖೆಗಳ ಗಮನ ಸೆಳೆದ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ತೋಟಗಾರಿಕೆ ಇ ಲ ಾ ಖ ೆ ಂ ು ೆ ು ಮಂಜುಳಾ ಮತ್ತು ಕೃಷಿ ಇಲಾಖೆಯ ರವಿ ಹಾಗೂ ಜಾಗೃತ ದಳದ ಪ್ರತಿನಿಧಿಗಳು ತೋಟಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ರೈತ ಹೂವಿನ ಸಸಿ ಖರೀದಿ ವಿವರಗಳು ಹಾಗೂ ಬಳಸದ ಕೀಟನಾಶಕದ ದಾಖಲೆಗಳನ್ನು ಅಧಿಕಾರಿಗಳಿಗೆ ಒದಗಿಸಿದ್ದು, ಸಂಬಂಧಿಸಿದ ಕಂಪನಿ ಅಧಿಕಾರಿಗಳೊಂದಿಗೆ ಮಾತುಕತೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಲಾಗಿದೆ ಎಂದರು.



ರೈತ ಸಂಘದ ತಾಲ್ಲೂಕು ಅದ್ಯಕ್ಷ ಶೆಟ್ಟಿಹಳ್ಳಿ ರವಿಪ್ರಕಾಶ್ ,ಹೂವಿನ ತೋಟದ ರೈತರಾದ ಎಸ್.ಆರ್.ಮಂಜುನಾಥ್ ಹಾಗು ಗ್ರಾಮದ ರೈತರು ಹಾಜರಿದ್ದರು.

# ಪಿಎಲ್‌ಡಿ ಬ್ಯಾಂಕ್: ಅಧ್ಯಕ್ಷ-ಉಪಾಧ್ಯಕ್ಷರ ಆಯ್ಕೆ



**ಚಿಕ್ಕಬಳ್ಳಾಪುರ:** ರಾಜ್ಯದಲ್ಲಿಯೇ ಪ್ರತಿಷ್ಠಿತ ಭೂ ಅಭಿವೃದ್ಧಿ ಎಂಬ ಖ್ಯಾತಿಗೆ ಒಳಗಾಗಿರುವ ಚಿಕ್ಕಬಳ್ಳಾಪುರ ಪಿಎಲ್‌ಡಿ ಬ್ಯಾಂಕಿನ ಮುಂದಿನ ಅವಧಿಗೆ ನೂತನ ಅಧ್ಯಕ್ಷರಾಗಿ ಗಂಗರೇಕಾಲುವೆ ಪ್ರಸಾದ್ ಪುನರಾಯ್ಕೆಯಾಗಿದ್ದರೆ ಪೆರೇಸಂದ್ರದ ಎಸ್ಸಿ ಮೀಸಲು ಕ್ಷೇತ್ರದ ಪಿ.ಎನ್.ರಾಮಪ್ಪ ಅವರು ಉಪಾಧ್ಯಕ್ಷರಾಗಿ ಅವಿರೋದ ಆಯ್ಕೆಯಾಗಿ ಪದಗ್ರಹಣ ಮಾಡಿದರು.

ಇತ್ತೀಚೆಗೆ ನಡೆದಿದ್ದ ಪಿಎಲ್‌ಡಿ ಬ್ಯಾಂಕ್ ಚುನಾವಣೆಯಲ್ಲಿ ಹನ್ನೊಂದು ಸ್ಥಾನಗಳನ್ನು ತನ್ನದಾಗಿಸಿಕೊಂಡಿದ್ದ ಬಿಜೆಪಿ ಜೆಡಿಎಸ್ ಮೈತ್ರಿಕೂಟವು ಅಧ್ಯಕ್ಷ ಉಪಾಧ್ಯಕ್ಷ ಸ್ಥಾನಗಳನ್ನು ಅವಿರೋದವಾಗಿ ಆಯ್ಕ ಮಾಡಿಕೊಳ್ಳುವಲ್ಲಿಯೂ ಯಶಸ್ವಿಯಾಗಿವೆ. ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿದ್ದರೂ ಇಲ್ಲಿ ಮಾತ್ರ ವಿರೋದ ಪಕ್ಷದಲ್ಲಿದೆ.

ಹೀಗಾಗಿ ಸರಕಾರದ ಬೆಂಬಲದಲ್ಲಿ ತಡೆಯಾಜ್ಞೆ ತರುಬಹುದೆಂಬ ಭೀತಿಯಲ್ಲಿದ್ದ ಎನ್‌ಡಿಎ ಬೆಂಬಲಿತ ನಿರ್ದೇಶಕರಿಗೆ ಯಾವ ತಡೆಯೂ ಇಲ್ಲದೆ ಸುಸೂತ್ರವಾಗಿ ಚುನಾವಣೆ ನಡೆದು ಅಧ್ಯಕ್ಷ ಉಪಾಧ್ಯಕ್ಷರ ಸ್ಥಾನಗಳೆರಡೂ ಅವಿರೋಧವಾಗಿ ಆಯ್ಕೆಯಾಗುವಂತೆ ಆಯಿತು.

ಎನ್‌ಡಿಎ ಮೈತ್ರಿಕೂಟದಲ್ಲಿ ಬಿಜೆಪಿಯ 10 ಮಂದಿ ಜೆಡಿಎಸ್‌ನ 1ಸದಸ್ಯರಿದ್ದು ಒಟ್ಟು 12 ಸದಸ್ಯಬಲದ ಪಿಎಲ್‌ಡಿ ಬ್ಯಾಂಕಿನಲ್ಲಿ ಸಂಸದ ಡಾ.ಕೆ,ಸುಧಾಕರ್ ಬೆಂಬಲಿತರು ಅಧಿಕಾರಕ್ಕೇರಿದ್ದಾರೆ. ಬಿಜೆಪಿ ಪಕ್ಷದ ಬೆಂಬಲಿತ ಸದಸ್ಯರೇ ಅಧ್ಯಕ್ಷ ಉಪಾಧ್ಯಕ್ಷರಾಗಿದ್ದಾರೆ.ಅದರಂತೆ ಅಧ್ಯಕ್ಷರಾಗಿ ಗಂಗರೇಕಾಲುವೆ ಪ್ರಸಾದ್ 2ನೇ ಬಾರಿಗೆ ಪುನರಾಯ್ಕೆಯಾಗಿದ್ದರೆ ಉಪಾಧ್ಯಕ್ಷ ಸ್ಥಾನಕ್ಕೆ ಪೆರೇಸಂದ್ರ ಎಸ್ಸಿ ಮೀಸಲು ಕ್ಷೇತ್ರದ ರಾಮಪ್ಪ ಮೊದಲ ಬಾರಿಗೆ ಅವಿರೋದವಾಗಿ ಆಯ್ಕೆ ಮಾಡಲಾಯಿತು.

ಈ ವೇಳೆ ಮಾತನಾಡಿದ ನೂತನ ಅಧ್ಯಕ್ಷ ಪ್ರಸಾದ್ ಕಳೆದ ಬಾರಿ ಬ್ಯಾಂಕ್ ಗಳಿಸಿದ್ದ ಲಾಭದ ಹಣವನ್ನು ಷೇರುದಾರರಿಗರ ಬೋನಸ್ ರೂಪದಲ್ಲಿ ಹಂಚಿಕೆ ಮಾಡಿ ರಾಜ್ಯಕ್ಕೆ ಮಾದರಿಯಾಗಿತ್ತು.ನಮಗೂ ಹಿಂದೆ ಇದ್ದ ಅಧ್ಯಕ್ಷರು ಹೈಟೆಕ್ ಕಟ್ಟಡ ನಿರ್ಮಾಣಕ್ಕೆ ಶ್ರಮವಹಿಸಿದ್ದರು. ಕಾಳೆಗೌಡರು ಸಹ ಅಭಿವೃದ್ದಿಗೆ ಶ್ರಮವಹಿಸಿದ್ದಾರೆ. ನನಗೆ ಕೊನೆ ಹಂತದಲ್ಲಿ ಅಧಿಕಾರ ಸಿಕ್ಕಿತ್ತು.

ಇರುವಷ್ಟು ಕಾಲದಲ್ಲಿಯೇ ಉತ್ತಮವಾಗಿ ಕೆಲಸ ಮಾಡಿದ್ದೇನೆ.ಎರಡನೇ ಅವಧಿಗೆ ಕೂಡ ನನ್ನನ್ನೇ ಆರಿಸುವ ಮೂಲಕ ಸಂಸದ ಸುಧಾಕರ್ ಆಶೀರ್ವಾದ ಮಾಡಿದ್ದಾರೆ.ಈ ಅವಧಿಯಲ್ಲಿ ಎಲ್ಲಾ ಸದಸ್ಯರ ಬೆಂಬಲದಿಂದ ಉತ್ತಮವಾಗಿ ಕೆಲಸ ಮಾಡುಕೊಂಡು ಹೋಗಲಾಗುವುದು ಎಂದರು.

ಕೆ.ವಿ.ನಾಗರಾಜ್ ಮಾತನಾಡಿ ಪಿಎಲ್‌ಡಿ ಬ್ಯಾಂಕ್ ನಿರ್ದೇಶಕರ ಚುನಾವಣೆ ವೇಳೆ ಕಾಂಗ್ರೆಸ್ ಏನೇನೋ ಮಾಡಿ ತಮ್ಮ ಅಭ್ಯರ್ಥಿಗಳನ್ನು ಗೆಲ್ಲಿಸಲು ಪ್ರಯತ್ನಿಸಿದರು. ಆದರೆ ಒಂದೇ ಒಂದು ಸ್ಥಾನಕ್ಕೆ ತೃಪ್ತಿ ಪಟ್ಟರು.ಆ ಸ್ಥಾನಕ್ಕೆ ಚುನಾವಣೆ ನಡೆದಿದ್ದರೆ ಅದು ಕೂಡ ಎನ್.ಡಿ.ಎ ಪಾಲಾಗುತ್ತಿತ್ತು. ಅಧ್ಯಕ್ಷ ಉಪಾಧ್ಯಕ್ಷರ ಚುನಾವಣೆಗೂ ತಡೆ ತರಲು ಪ್ರಯತ್ನ ನಡೆಸಿ ವಿಫಲರಾದರು. ಇದರ ನಡುವೆ ಇಂದು ನಡೆದ ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಎನ್‌ಡಿಎ ಬೆಂಬಲಿತರು ಆಯ್ಕೆಯಾಗಿದ್ದು ಸಂತೋಷದ ವಿಷಯ. ಇಬ್ಬರು ಚುನಾಯಿತರು ಎಲ್ಲರ ಸಹಕಾರದೊಂದಿಗೆ ಬ್ಯಾಂಕನ್ನು ಅಭಿವೃದ್ಧಿಯತ್ತ ಸಾಗುವುದರಲ್ಲಿ ಯಾವುದೇ ಸಂಶಯವಿಲ್ಲ ಎಂದರು.

ಈ ವೇಳೆ ಪಿಎಲ್‌ಡಿ ಬ್ಯಾಂಕ್ ಮಾಜಿ ಅಧ್ಯಕ್ಷರಾದ ನಾಗೇಶ್, ಕಾಳೆ ಗೌಡ, ಗಿರೀಶ್ ಹರಿಸ್ಥಳ,ಗಂಗರೇಕಾಲುವೆ ಮೂರ್ತಿ,ಟಿಎಪಿಸಿಎಂಎಸ್ ಮಾಜಿ ಉಪಾಧ್ಯಕ್ಷ ಈರಾಂಜಿನಪ್ಪ, ಬಾಗೇಪಲ್ಲಿ ಜೆಡಿಎಸ್ ಮುಖಂಡರಾದ ಹರಿನಾಥ್ ರೆಡ್ಡಿ ಮತ್ತು ಇತರರು ಶುಭಕೋರಿದರು.

# ಮಾ.24, 25ರಂದು ರಾಷ್ಟ್ರವ್ಯಾಪಿ ಬ್ಯಾಂಕ್ ಮುಷ್ಕರ

**ಕೋಲ್ಕತಾ:** ಈ ಹಿಂದೆ ನಿಗದಿಯಾದಂತೆ ಮಾರ್ಚ್ 24 ಮತ್ತು 25ರಂದು ಎರಡು ದಿನಗಳ ಕಾಲ ರಾಷ್ಟ್ರವ್ಯಾಪಿ ಬ್ಯಾಂಕ್ ಮುಷ್ಕರ ನಡೆಸಲಾಗುವುದು ಎಂದು ಯುನೈಟೆಡ್ ಫೋರಂ ಆಫ್ ಬ್ಯಾಂಕ್ ಯೂನಿಯನ್ಸ್ ತಿಳಿಸಿದೆ. ತಮ್ಮ ಪ್ರಮುಖ ಬೇಡಿಕೆಗಳ ಈಡೇರಿಕೆಗಾಗಿ ಭಾರತೀಯ ಬ್ಯಾಂಕ್ ಗಳ ಸಂಘ ದೊಂದಿಗೆ ನಡೆದ ಮಾತುಕತೆಗಳು ಯಾವುದೇ ಸಕಾರಾತ್ಮಕ ಫಲಿತಾಂಶ ನೀಡದ ಕಾರಣ ನಿಗದಿಯಾದಂತೆ ಮುಷ್ಕರ ನಡೆಸಲು ನಿರ್ಧರಿಸಲಾಗಿದೆ ಎಂದು ಯುಎಫ್ ಬಿಯು ಹೇಳಿದೆ.

ಎಲ್ಲಾ ಕೇಡರ್‌ಗಳಲ್ಲಿ ನೇಮಕಾತಿ ಮತ್ತು ವಾರಕ್ಕೆ ಐದು ದಿನಗಳ ಕೆಲಸ ಸೇರಿದಂತೆ ಇನ್ನಿತರ ಸಮಸ್ಯೆಗಳನ್ನು ಐಬಿಎ ಜೊತೆಗಿನ ಸಭೆಯಲ್ಲಿ ಯುಎಫ್‌ಬಿಯುನ ಎಲ್ಲ ಘಟಕಗಳು ಪ್ರಸ್ತಾಪಿಸಿವೆ. ಆದಾಗ್ಯೂ ಪ್ರಮುಖ ಸಮಸ್ಯೆಗಳು ಬಗೆಹರಿದಿಲ್ಲ ಎಂದು ಬ್ಯಾಂಕ್ ನೌಕರರ ರಾಷ್ಟ್ರೀಯ ಒಕ್ಕೂಟ ಪ್ರಧಾನ ಕಾರ್ಯದರ್ಶಿ ಎಲ್ ಚಂದ್ರಶೇಖರ್ ಹೇಳಿದ್ದಾರೆ.




ಸಾರ್ವಜನಿಕ ವಲಯದ ಬ್ಯಾಂಕುಗಳಲ್ಲಿ ಕೆಲಸಗಾರರು ಮತ್ತು ಅಧಿಕಾರಿ ನಿರ್ದೇಶಕ ಹುದ್ದೆಗಳನ್ನು ಭರ್ತಿ ಮಾಡುವುದು ಸೇರಿದಂತೆ ತಮ್ಮ ಇನ್ನಿತರ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಒಂಬತ್ತು ಬ್ಯಾಂಕ್ ನೌಕರರ ಸಂಘಗಳ ಒಕ್ಕೂಟವಾದ ಯುಎಫ್‌ಬಿಯು ಈ ಹಿಂದೆ ಮುಷ್ಕರ ನಡೆಸುವುದಾಗಿ ಘೋಷಿಸಿತ್ತು.

ಕಾರ್ಯಕ್ಷಮತೆ ವಿಮರ್ಶೆಗಳು ಮತ್ತು ಕಾರ್ಯಕ್ಷಮತೆ ಸಂಬಂಧಿತ ಪ್ರೋತ್ಸಾಹಕಗಳಿಗೆ ಸಂಬಂಧಿಸಿದಂತೆ ಹಣಕಾಸು ಸೇವೆಗಳ ಇಲಾಖೆಯು ಇತ್ತೀಚೆಗೆ ಹೊರಡಿಸಲಾದ ನಿರ್ದೇಶನಗಳನ್ನು ಹಿಂತೆಗೆದುಕೊಳ್ಳಬೇಕೆಂದು ಒಕ್ಕೂಟಗಳು ಬೇಡಿಕೆ ಇಟ್ಟಿವೆ. ಇಂಥ ಕ್ರಮಗಳು ಉದ್ಯೋಗ ಭದ್ರತೆಗೆ ಅಪಾಯವನ್ನುಂಟು ಮಾಡುತ್ತವೆ ಎಂದು ಅವು ಆರೋಪಿಸಿವೆ. ಡಿಎಫ್‌ಎಸ್ ನಿಂದ ಸಾರ್ವಜನಿಕ ವಲಯದ ಬ್ಯಾಂಕುಗಳನ್ನು "ಸೂಕ್ಷ್ಮ ನಿರ್ವಹಣೆ" ಮಾಡುವುದನ್ನು ವಿರೋಧಿಸಿರುವ ಯುಎಫ್‌ಬಿಯು, ಇಂಥ ಹಸ್ತಕ್ಷೇಪಗಳು ಬ್ಯಾಂಕ್ ಮಂಡಳಿಗಳ ಸ್ವಾಯತ್ತತೆಯನ್ನು ದುರ್ಬಲಗೊಳಿಸುತ್ತವೆ ಎಂದು ಆರೋಪಿಸಿದೆ.

ಐಬಿಎಯೊಂದಿಗಿನ ಉಳಿದ ಸಮಸ್ಯೆಗಳನ್ನು ಪರಿಹರಿಸುವುದು ಮತ್ತು ಗ್ರಾಚ್ಯುಟಿ ಮಿತಿಯನ್ನು 25 ಲಕ್ಷ ರೂ.ಗೆ ಹೆಚ್ಚಿಸಲು ಗ್ರಾಚ್ಯುಟಿ ಕಾಯ್ದೆಗೆ ತಿದ್ದುಪಡಿ ಮಾಡುವುದು, ಅದನ್ನು ಸರ್ಕಾರಿ ನೌಕರರ ಯೋಜನೆಯೊಂದಿಗೆ ಹೊಂದಿಸುವುದು ಮತ್ತು ಆದಾಯ ತೆರಿಗೆಯಿಂದ ವಿನಾಯಿತಿ ಪಡೆಯುವುದು ಇತರ ಬೇಡಿಕೆಗಳಲ್ಲಿ ಸೇರಿವೆ. ಅಖಿಲ ಭಾರತ ಬ್ಯಾಂಕ್ ನೌಕರರ ಸಂಘ, ಅಖಿಲ ಭಾರತ ಬ್ಯಾಂಕ್ ಅಧಿಕಾರಿಗಳ ಒಕ್ಕೂಟ, ಬ್ಯಾಂಕ್ ನೌಕರರ ರಾಷ್ಟ್ರೀಯ ಒಕ್ಕೂಟ ಮತ್ತು ಅಖಿಲ ಭಾರತ ಬ್ಯಾಂಕ್ ಅಧಿಕಾರಿಗಳ ಸಂಘ ಸೇರಿದಂತೆ ಪ್ರಮುಖ ಬ್ಯಾಂಕ್ ಒಕ್ಕೂಟಗಳನ್ನು ಯುಎಫ್‌ಬಿಯು ಒಳಗೊಂಡಿದೆ.

# ಬುಡಕಟ್ಟು ಜನಾಂಗದ ವಿಭಿನ್ನ ಹೋಳಿ

**ರಾಂಚಿ:**ಇಲ್ಲಿನ ಬುಡಕಟ್ಟು ಜನಾಂಗದವರಿಗೆ ಹೋಳಿ ಹಬ್ಬ ಬಹಳ ವಿಶೇಷ. ಅದರಲ್ಲೂ ಯುವತಿಯರಿಗೆ ಈ ದಿನ ಬಂತೆಂದರೆ ಸಂತಸಕ್ಕಿಂತ ಆತಂಕವೇ ಜಾಸ್ತಿ. ಏಕೆಂದರೆ, ಇಂದು ಯಾವ ಹುಡುಗ ಯಾವ ಅವಿವಾಹಿತ ಹುಡುಗಿಯ ಮೇಲೆ ಬಣ್ಣದ ನೀರೆರಚುತ್ತಾನೋ ಅವರಿಬ್ಬರ ನಡುವೆ ವಿವಾಹ ನಡೆಯುತ್ತದೆ ಎಂದರ್ಥ!. ಆದರೆ ಯುವತಿ ಆ ಯುವಕನನ್ನು ಒಪ್ಪಿದರೆ ಮಾತ್ರ. ತಿರಸ್ಕರಿಸಿದರೆ ದಂಡ ಹಾಕಲಾಗುತ್ತದೆ. ಇದು ಜಾರ್ಖಂಡ್‌ನ ಬುಡಕಟ್ಟು ಜನಾಂಗದ ವಿಶೇಷ ಹೋಳಿ ಆಚರಣೆ.

ಬನಾರಸ್ ಪಂಚಾಂಗ್ ಅಥವಾ ಮಿಥಿಲಾ ಪಂಚಾಂಗ್ ಪ್ರಕಾರ, ಜಾರ್ಖಂಡ್‌ನ ಬುಡಕಟ್ಟು ಜನಾಂಗದವರಲ್ಲಿ ಈ ರೀತಿ ಹೋಳಿ ಆಚರಿಸಲಾಗುತ್ತದೆ.

ರಾಂಚಿಯ ಡಾ.ಶ್ಯಾಮ ಪ್ರಸಾದ್ ಮುಖರ್ಜಿ ವಿಶ್ವವಿದ್ಯಾಲಯದ ಸಂತಾಲ್ ಭಾಷೆಯ ಸಹಾಯಕ ಪ್ರಾಧ್ಯಾಪಕಿ ದುಮ್ನಿ ಮಾಯ್ ಮುರ್ಮು ಅವರು ಹೇಳುವಂತೆ, ಬುಡಕಟ್ಟು ಜನಾಂಗದವರು ನೀರನ್ನೇ ಎಲ್ಲಾ ಬಣ್ಣಗಳ ಸಂಯೋಜನೆ ಎಂದು ನಂಬುತ್ತಾರೆ. ಹಾಗಾಗಿ ಇವರು ನೀರೆರಚುವ ಮೂಲಕ ಹೋಳಿ ಆಚರಿಸುತ್ತಾರೆ. ಆದರೆ ಯುವಕ ಯುವತಿಗೆ ಬಣ್ಣವನ್ನು ಹಚ್ಚಿದರೆ ಅಥವಾ ಬಣ್ಣ ಮಿಶ್ರಿತ ನೀರನ್ನು ಹಾಕಿದರೆ ಅವರಿಬ್ಬರ ನಡುವೆ ಮದುವೆ ಎಂದರ್ಥ. ಹಾಗೆಯೇ ಇಲ್ಲಿಯ ಇನ್ನೊಂದು ನಂಬಿಕೆ ಅವಿವಾಹಿತ ಹುಡುಗಿಯ ಹಣೆಯ ಮೇಲೆ ಇಟ್ಟಿಗೆಯ ಧೂಳು ಬಿದ್ದರೆ, ಅದು ಮಹಿಳೆಯರಲ್ಲಿ ಮದುವೆಯ ಸಂಕೇತವಾದ ಸಿಂಧೂರಕ್ಕೆ ಸಮಾನ ಎಂದು ಪರಿಗಣಿಸಲಾಗುತ್ತದೆ.

**ಯುವತಿ ತಿರಸ್ಕರಿಸಿದರೆ ಶಿಕ್ಷೆ:** ಆದರೆ ಹೋಳಿ ಬಣ್ಣದ ನೀರನ್ನೆರಚುವ ಆಚರಣೆಯನ್ನು ಸಂಬಂಧ ನೋಡಿಕೊಂಡು ಆಡಲಾಗುತ್ತದೆ. ಉದಾಹರಣೆಗೆ, ಗಂಡ-ಹೆಂಡತಿ ಪರಸ್ಪರ ಹೋಳಿ ಆಡಬಹುದು. ಸಹೋದರ ಮತ್ತು ಸಹೋದರಿಯರು ಆಡುವಂತಿಲ್ಲ. ಯುವಕ ಅವಿವಾಹಿತ ಹುಡುಗಿಗೆ ಬಣ್ಣ ಅಥವಾ ಬಣ್ಣದ ನೀರನ್ನು ಹಾಕಿದರೆ ಆಕೆ ಅದೇ ವ್ಯಕ್ತಿಯನ್ನು ಮದುವೆಯಾಗಬೇಕು. ಈ ಸಂಬಂಧವನ್ನು ಗ್ರಾಮ ಸಭೆಯು ಅನುಮೋದಿಸುತ್ತದೆ ಎಂದು ಸಂಪ್ರದಾಯ ಆದೇಶಿಸುತ್ತದೆ. ಇದನ್ನು ಹೋಳಿಯ 'ಬಹಾ' ಹಬ್ಬ ಎಂದು ಕರೆಯಲಾಗುತ್ತದೆ. ಎಂದು ಪ್ರಾಧ್ಯಾಪಕಿ ದುಮ್ನಿ ಮಾಯ್ ಮುರ್ಮು ತಿಳಿಸಿದ್ದಾರೆ.

# ಅಡಿಕೆ ಕೃಷಿಯಲ್ಲಿ ದಾಖಲೆ ಮಟ್ಟದ ಇಳುವರಿ ಪಡೆದ ರೈತ

ಕಣ್ಣೂರು: ಸಾಂಪ್ರದಾಯಿಕ ಅಡಕೆ ಕೃಷಿಯಲ್ಲಿ ಲಾಭದಾಯಕ ಇಳುವರಿ ಪಡೆಯುವ ಮೂಲಕ ಕಾಸರಗೋಡಿನ ಕುದಕುಜಿ ಕೊಟ್ಟವಯಲ್‌ನ ದೇವರಾಜು ರಾವ್ ದಾಖಲೆ ಸೃಷ್ಟಿಸಿದ್ದಾರೆ. ಸಾಮಾನ್ಯವಾಗಿ ಒಂದು ಮರದಲ್ಲಿ ನಾಲ್ಕು ಕೆಜಿ ಅಡಕೆ ಸಿಗಬಹುದು ಎಂಬ ಕೃಷಿ ಇಲಾಖೆ ಅಂದಾಜನ್ನೇ ಇವರು ಉಲ್ಟಾ ಮಾಡಿದ್ದಾರೆ.

ಒಂದು ಗಿಡಕ್ಕೆ 6 ಕೆಜಿ ಇಳುವರಿ: 2020ರಲ್ಲಿ ಇವರು ಒಂದು ಅಡಕೆ ಮರದ ಗೊಂಚಲಿನಲ್ಲಿ 6 ಕೆಜಿ ಇಳುವರಿಯನ್ನು ಪಡೆದಿದ್ದಾರೆ. ತಮ್ಮ ಅದ್ಭುತ ಕೃಷಿ ಮೂಲಕ ಇವರು ಒಂದೇ ಗೊಂಚಲಿನಲ್ಲಿ 618 ಅಡಕೆ ಕಾಯಿ ಬೆಳೆದು ಬೆರಗು ಮೂಡಿಸಿದ್ದಾರೆ. ಅದು ಅಂತಿತಹದ್ದಲ್ಲ ಅತ್ಯುತ್ತಮ ಗುಣಮಟ್ಟದ ಕಾಯಿ. ಈ ರೀತಿ ಅಧಿಕ ಮಟ್ಟದ ಇಳುವರಿ ಪಡೆಯುತ್ತಿರುವ ಇವರ ಅಡಕೆ ಸಸಿಗಳಿಗೆ ಕೇರಳದ ಹಲವು ಜಿಲ್ಲೆ ಹಾಗೂ ಕರ್ನಾಟಕದ ರೈತರಿಂದ ಭಾರೀ ಬೇಡಿಕೆ ಕೂಡ ಇದೆ.

ಬಂಜರು ಭೂಮಿಯಲ್ಲಿ ಬಂಗಾರದ ಬೆಳೆ: ಕಳೆದ 20 ವರ್ಷದಿಂದ ರಾವ್ ಕೊಟ್ಟವಯಲ್‌ನಲ್ಲಿ ನೆಲೆಸಿದ್ದಾರೆ. ಕಲ್ಲು-ಮುಳ್ಳುಗಳು ಅದರಲ್ಲೂ ಕೆಂಪು ಲ್ಯಾಟರೈಟ್‌ಗಳಿದ್ದ ಭೂಮಿಯಲ್ಲಿ ಕೃಷಿ ಊಹಿಸಲು ಸಾಧ್ಯ ಎನ್ನುವ ಪರಿಸ್ಥಿತಿ ಇದೆ. ಆದರೆ ಇವರು ಇಲ್ಲಿ ಬಂಗಾರದ ಬೆಳೆ ಬೆಳೆಯುತ್ತಿದ್ದಾರೆ. ಈ ರೀತಿ ಬಂಜರಾಗಿದ್ದ ಭೂಮಿಯನ್ನು ಮೊದಲಿಗೆ ರಾವ್ ಬಹಳ ಎಚ್ಚರಿಕೆಯಿಂದ ಭೂಮಿಯಲ್ಲಿ ಹೊಂಡಗಳನ್ನು ತೆಗೆದು ಅದನ್ನು ಗೊಬ್ಬರ ಮತ್ತು ಸಸಿಗಳಿಂದ ಮುಚ್ಚಿ ಭೂಮಿಯನ್ನು ಹದಗೊಳಿಸಿದರು. ಬಳಿಕ ಮೋಹಿತ್‌ನಗರ್ ತಳಿಯ 300 ಅಡಕೆ ಸಸಿಗಳನ್ನು ಮೊದಲ ವರ್ಷ ನೆಟ್ಟರು. ಸಸಿಗಳು ಆರೋಗ್ಯಯುತವಾಗಿ ಬೆಳೆದು ಮೂರು ವರ್ಷಕ್ಕೆ ಫಲ ನೀಡಲು ಶುರು ಮಾಡಿದವು. ಆರಂಭದಲ್ಲಿ ಇವರನ್ನು ಲೇವಡಿ ಮಾಡಿದ ಜನರು ಇವರ ಸಮರ್ಪಣೆ ಮತ್ತು ಕೌಶಲ್ಯ ಕಂಡು ಬೆರಗಾದರು. ತದನಂತರದಲ್ಲಿ ಕೃಷಿಯಲ್ಲಿ ದೇವರಾಜ್ ರಾವ್ ಅವರ ಕೌಶಲ್ಯ ಕಂಡು ಸ್ಥಳೀಯ ಕೃಷಿಕರು ಮತ್ತು ಕೃಷಿ ತಜ್ಞರಿಬ್ಬರೂ ಮೆಚ್ಚುಗೆ ಸೂಚಿಸಿದ್ದಾರೆ.

ಇಂಟರ್ ಮೋಹಿತ್ ನಗರ್ ತಳಿ ಅಭಿವೃದ್ಧಿ: ರಾವ್ ಅವರ ಈ ಕಾರ್ಯ ಅವರಿಗೆ ಪ್ರಶಸ್ತಿ, ಗೌರವಗಳನ್ನು ತಂದುಕೊಡುವಂತೆ ಮಾಡಿದೆ. ಅಷ್ಟೇ ಅಲ್ಲದೇ, ರಾಜ್ಯ ಕೃಷಿ ಇಲಾಖೆಯ 'ವೈಗ ಕೃಷಿಮೇಳ'ದಲ್ಲಿ 600 ತೆಂಗಿನ ಸಸಿ ತಂದು ನೆಟ್ಟು ಐಸಿಹಾಸಿಕ ಸಾಧನೆ ಮಾಡಿದ್ದಾರೆ. ಕೆಂಪು ಕಲ್ಲುಗಳಿಂದ ಕೂಡಿದ ಭೂಮಿಯಲ್ಲಿಂದು ರಾವ್ ಅವರು, ಪ್ರತಿ ವರ್ಷ 16 ಕ್ವಿಂಟಾಲ್ ಅಡಕೆ ಬೆಳೆಯುತ್ತಿದ್ದಾರೆ.



ಇದರ ಜೊತೆಗೆ ದೇವರಾಜ್ ರಾವ್, ಇಂಟರ್ ಮೋಹಿತ್ ನಗರ್ ಎಂಬ ತಳಿಯನ್ನು ಅಭಿವೃದ್ಧಿಪಡಿಸಿದ್ದಾರೆ. ಮಧ್ಯಮದಿಂದ ಹೆಚ್ಚಿನ ಇಳುವರಿ ನೀಡುವ ಅಡಕೆ ಸಸಿಗಳಿವು. ಈ ತಳಿಯನ್ನು ಅವರು ಸ್ಥಳೀಯ ಹಾಗೂ ಮೋಹಿತ್ ನಗರ ಅಡಕೆ ಸಸಿಯ ಸಂಯೋಜನೆಯಿಂದ ತಯಾರಿಸಿದ್ದಾರೆ.

ರೈತರಿಗೆ ರಾವ್ ಸಲಹೆ ಏನು: ಸಾಂಪ್ರದಾಯಿಕ ಕೃಷಿಯಿಂದಾಗಿ ಇವರು, ಅತ್ಯುತ್ತಮ ಗುಣಮಟ್ಟದ ಅಡಕೆ ಕಾಯಿಯನ್ನು ಪ್ರತಿವರ್ಷ ಉತ್ಪಾದಿಸುತ್ತಾರೆ. ಅಲ್ಲದೇ ತಮ್ಮ ಸಹಚರ ರೈತರಿಗೂ ಕೂಡ ಉತ್ತಮ ತಳಿ ಲಭ್ಯವಾಗುವಂತೆ ನೋಡಿ ಕೊಳ್ಳುತ್ತಿದ್ದಾರೆ. ರಾವ್ ಹೇಳುವ ಪ್ರಕಾರ ಅಡಕೆ ನೆಡಲು ಪ್ರತಿ ಪ್ರದೇಶದಲ್ಲಿ ನಿರ್ದಿಷ್ಟ ಸಮಯ ಇರುತ್ತದೆ. ಆ ಸಮಯದಲ್ಲಿ ಅಡಕೆ ಸಸಿ ನೆಡಬೇಕು ಎನ್ನುತ್ತಾರೆ. ಶುಷ್ಕ ಪ್ರದೇಶದಲ್ಲಿ ಬೇಸಿಗೆಯಲ್ಲಿ ಅಡಕೆ ಸಸಿ ನೆಡಬೇಕು. ಮಳೆ ಮತ್ತು ಪ್ರವಾಹ ಎದುರಾಗುವ ಸ್ಥಳಗಳಲ್ಲಿ ಆರು ತಿಂಗಳ ಸಸಿಗಳನ್ನು ನೆಡಬೇಕು. ಇಲ್ಲದೇ ಹೋದಲ್ಲಿ ಅದು ಕೊಳೆಯುತ್ತದೆ ಎನ್ನುತ್ತಾರೆ ಇವರು.

ಬೀಜಗಳ ಆಯ್ಕೆಯಲ್ಲೂ ಕೂಡ ರಾವ್ ತುಂಬಾ ನಿರ್ದಿಷ್ಟವಾಗಿದ್ದಾರೆ. ಆರಂಭದಲ್ಲಿ ಅಡಕೆ ಕೃಷಿಗೆ ಹೆಚ್ಚಿನ ಬಿಸಿಲು ಬೀಳುವಂತೆ ಮತ್ತು ನೀರಿರುವಂತೆ ನೋಡಿಕೊಳ್ಳಬೇಕು. 45-55 ದಿನದಲ್ಲಿ ಅದು ಮೊಳಕೆ ಒಡೆಯುತ್ತದೆ ಎಂದು ಸಲಹೆ ನೀಡುತ್ತಾರೆ. ಅಡಕೆ ಜೊತೆಗೆ ರಾವ್ 50 ತೆಂಗಿನ ಮರ ಮತ್ತು ಹಸುಗಳ ಪೋಷಣೆ ಮಾಡುತ್ತಿದ್ದಾರೆ. ಅನೇಕ ಜನರು ಇವರ ಕೃಷಿ ತೋಟಕ್ಕೆ ಭೇಟಿ ನೀಡಿ ಇವರ ಸಾಂಪ್ರದಾಯಿಕ ವಿಧಾನ ಅರಿಯುವ ಯತ್ನ ನಡೆಸಿದ್ದಾರೆ.

# ಹುಂಡಿ ಹಣ ಎಣಿಕೆ: 20 ದಿನಗಳಲ್ಲಿ 2 ಕೋಟಿ, 85 ಲಕ್ಷ, 69 ಸಾವಿರ ರೂ.ಗಳು ಸಂಗ್ರಹ

**ಹನೂರು:** ತಾಲೂಕಿನ ಪ್ರಸಿದ್ಧ ಧಾರ್ಮಿಕ ಪುಣ್ಯಕ್ಷೇತ್ರ ಶ್ರೀ ಮಲೆ ಮಹದೇಶ್ವರ ಬೆಟ್ಟದಲ್ಲಿ ಹುಂಡಿ ಹಣ ಎಣಿಕೆ ಕಾರ್ಯ ನಡೆದಿದ್ದು 20 ದಿನಗಳಲ್ಲಿ ಸುಮಾರು ಒಟ್ಟು ಮೊತ್ತ 2 ಕೋಟಿ, 85 ಲಕ್ಷ, 69 ಸಾವಿರ ರೂ ಗಳು ಸಂಗ್ರಹವಾಗಿದೆ.

ಮಲೈ ಮಹದೇಶ್ವರ ಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದಲ್ಲಿ ಈ ದಿನ ಬೆಳಿಗ್ಗೆ 7.000 ಗಂಟೆಯಿಂದ ಶ್ರೀ ಸಾಲೂರು ಬೃಹನ್ಮಠಾಧ್ಯಕ್ಷರು ಶ್ರೀ ಶಾಂತ ಮಲ್ಲಿಕಾರ್ಜುನ ಸ್ವಾಮಿಗಳು, ಪ್ರಾಧಿಕಾರ ಕಾರ್ಯದರ್ಶಿ ರಘು ರವರ ನೇತೃತ್ವದಲ್ಲಿ ಹುಂಡಿ ಎಣಿಕೆ ಕಾರ್ಯ ಪ್ರಾರಂಭವಾಗಿ ಸಂಜೆಯವರೆಗೆ ನಡೆಯಿತು.

ದಿನಾಂಕ : 20/02/2025 ರಿಂದ 11/03/2025ರ ವರೆಗಿನ 20 ದಿನಗಳಲ್ಲಿ ಒಟ್ಟು ಮೊತ್ತ ರೂ.2,85,69,937.00ಗಳು (ಹುಂಡಿ ಮತ್ತು ಇ-ಹುಂಡಿ ಸೇರಿ) ಹಾಗೂ ಚಿನ್ನ 27 ಗ್ರಾಂ 06 ಮಿ, ಬೆಳ್ಳಿ 01 ಕೆ.ಜಿ 800 ಗ್ರಾಂ ಹುಂಡಿಯಲ್ಲಿ ದೊರೆತಿದೆ. ಹಾಗೂ ವಿದೇಶಿ ನೋಟುಗಳು 31, ಮತ್ತು ಚಲಾವಣೆಯಾಗದ 2ಸಾವಿರ ಮುಖ ಬೆಲೆಯ 1ನೋಟು ಹುಂಡಿಯಲ್ಲಿ ದೊರೆತಿದೆ.



ಎಣಿಕೆ ಕಾರ್ಯದಲ್ಲಿ ಪ್ರಾಧಿಕಾರದ ಉಪ ಕಾರ್ಯದರ್ಶಿ . ಜಿ.ಎಲ್, ಲೆಕ್ಕಾಧೀಕ್ಷಕ ಗುರುಮಲ್ಲಯ್ಯ, ಪ್ರಾಧಿಕಾರದ ನಾಮನಿರ್ದೇಶಿತ ಸದಸ್ಯರುಗಳಾದ ಗಂಗನ ತಿಮ್ಮಯ್ಯ, ಭಾಗ್ಯಮ್ಮ, ಮಹದೇವಪ್ಪ ಬಿ, ಮರಿಸ್ವಾಮಿ ಹಾಗು ಚಾಮರಾಜನಗರ ಜಿಲ್ಲಾಡಳಿತ ಕಛೇರಿಯ ಹರೀಶ್ ಕುಮಾರ್, ಹಾಗೂ ಪ್ರಾಧಿಕಾರದ ಸಿಬ್ಬಂದಿಗಳು, ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಹಾಗೂ ಕೊಳ್ಳೇಗಾಲದ ಬ್ಯಾಂಕ್ ಆಫ್ ಬರೋಡ ಮುಖ್ಯ ವ್ಯವಸ್ಥಾಪಕರು, ಸಿಬ್ಬಂದಿಗಳು ಹಾಜರಿದ್ದರು.

# ಅಪ್ಪು ಪಕ್ಕದಲ್ಲಿ ಡ್ಯಾನ್ಸ್ ಮಾಡುವುದಕ್ಕೆ ಭಯ ಆಗುತ್ತಿತ್ತು



23 ವರ್ಷಗಳ ಹಿಂದೆ 100 ದಿನಗಳ ಯಶಸ್ವಿ ಪ್ರದರ್ಶನ ಪೂರೈಸಿದ್ದು ಪವರ್ ಸ್ಟಾರ್ ಪುನೀತ್ ರಾಜ್‌ಕುಮಾರ್‌ರವರ ಅಪ್ಪು ಸಿನಿಮಾ. ರಕ್ಷಿತಾ ಮತ್ತು ಪುನೀತ್ ಜೋಡಿಯಾಗಿ ನಟಿಸಿದ ಮೊದಲ ಸಿನಿಮಾ ಹಾಗೂ ಇದು ಅವರಿಬ್ಬರ ಚೊಚ್ಚಲ ಸಿನಿಮಾ ಆಗಿತ್ತು.

ಓಪನಿಂಗ್ ಚಿತ್ರವೇ 100 ದಿನ ಪ್ರದರ್ಶನ ಪಡೆದ ಪ್ರಯುಕ್ತ ಅಣ್ಣಾವ್ರು ಮತ್ತು ಪಾರ್ವತಮ್ಮನವರು ಅದ್ಧೂರಿ ಕಾರ್ಯಕ್ರಮ ಹಮ್ಮಿಕೊಂಡಿದ್ದರು. ತಲಾ ರಜನಿಕಾಂತ್ ಸೇರಿಂದತೆ ದೊಡ್ಡ ಸ್ಟಾರ್‌ಗಳು ಭಾಗಿಯಾಗಿ 100 ಡೇಸ್ ಶೀಲ್ಡ್ ನೀಡಿದ್ದರು.

ಈಗ ಪುನೀತ್ 50ನೇ ಹುಟ್ಟುಹಬ್ಬದ ಪ್ರಯುಕ್ತ ಪಿಆರ್‌ಕೆ ಸ್ಟುಡಿಯೋಸ್ ಅಡಿಯಲ್ಲಿ ಅಪ್ಪು ಸಿನಿಮಾವನ್ನು ಮತ್ತೆ ರಿಲೀಸ್ ಮಾಡಲಾಗುತ್ತಿದೆ. ಇದರ ಬಗ್ಗೆ ನಟಿ ರಕ್ಷಿತಾ ತಮ್ಮ ಸಂತೋಷ ಹಂಚಿಕೊಂಡಿದ್ದಾರೆ.'ಫಸ್ಟ್ ಸಿನಿಮಾ ಅಂದಾಗ ಎಲ್ಲಾ ನೆನಪುಗಳು ತುಂಬಾ ಬ್ಯೂಟಿಫುಲ್ ಆಗಿರುತ್ತದೆ. ಆ ಎಕ್ಸ್‌ಪೀರಿಯನ್ಸ್ ತುಂಬಾ ಬ್ಯೂಟಿಫುಲ್ ಆಗಿರುತ್ತದೆ.

ಅಪ್ಪು ಸಿನಿಮಾ ನನ್ನ ಜೀವನದಲ್ಲಿ ಡಬಲ್ ಸ್ಪೆಷಲ್ ಆಗಿರುತ್ತದೆ. ವಜ್ರೇಶ್ವರಿ ಕಂಬೈನ್ಸ್‌ನಲ್ಲಿ ನಮ್ಮ ಅಪ್ಪ ಮತ್ತು ಅಮ್ಮ ಅವರವರ ಕರಿಯರ್ ಶುರು ಮಾಡಿದ್ರು. ನನ್ನ ಜೀವನದಲ್ಲಿ ದೊಡ್ಡ ಸ್ಪೂರ್ತಿ ಅಂದ್ರೆ ಪಾರ್ವತಮ್ಮ ರಾಜ್‌ಕುಮಾರ್ ಅವರು. ಅಪ್ಪು ಸಿನಿಮಾವನ್ನು ನೆನಪಿಸಿಕೊಂಡಾಗ ಅವರನ್ನು ನೆನಪಿಸಿಕೊಳ್ಳದೆ ಇರಲು ಆಗಲ್ಲ. ಅವರು ಸದಾ ನನ್ನ ಸ್ಫೂರ್ತಿಯಾಗಿರುತ್ತಾರೆ. ಅಪ್ಪು ಸಿನಿಮಾದಲ್ಲಿ ಸಾಕಷ್ಟು ಒಳ್ಳೆ ನೆನಪುಗಳನ್ನು ಕ್ರಿಯೇಟ್ ಮಾಡಿದ್ವಿ' ಎಂದು ರಕ್ಷಿತಾ ಪ್ರೇಮ್ ಮಾತನಾಡಿದ್ದಾರೆ.



'ಮೊದಲ ಚಿತ್ರದಲ್ಲೇ ಅಪ್ಪು ಅದ್ಭುತ ನಟ, ಡ್ಯಾನ್ಸರ್ ಹಾಗೂ ಫೈಟರ್ ಆಗಿದ್ದರು....ಅಬ್ಬಾ ಆ ಡೈಲಾಗ್‌ಗಳನ್ನು ಎಷ್ಟು ಚೆನ್ನಾಗಿ ಮಾತನಾಡುತ್ತಿದ್ದರು ಗೊತ್ತಾ? ಅಪ್ಪು ಪಕ್ಕದಲ್ಲಿ ಯಾವುದಾದರೂ ಸೀನ್ ಆಕ್ಟ್ ಮಾಡುವುದಕ್ಕೆ ಅಥವಾ ಡ್ಯಾನ್ಸ್ ಮಾಡುವುದಕ್ಕೆ ತುಂಬಾ ಕಷ್ಟ ಆಗುತ್ತಿತ್ತು ಏಕೆಂದರೆ ಅವರು ನ್ಯಾಷನಲ್ ಅವಾರ್ಡ್ ವಿನ್ನರ್, ಫ್ಯಾಬುಲ್ಸ್ ಫೈಟರ್ ಹಾಗೂ ಡ್ಯಾನ್ಸರ್.

ಇವತ್ತು ನಮ್ಮ ಕನ್ನಡ ಚಿತ್ರರಂಗ ಅಷ್ಟು ಬ್ಯೂಟಿಫುಲ್ ಆಗಿ ಡ್ಯಾನ್ಸ್ ಮಾಡುವವರು ಯಾರೂ ಇಲ್ಲ. ಯಾವ ಹೀರೋನೂ ಅಪ್ಪು ಅಷ್ಟು ಚೆನ್ನಾಗಿ ಡ್ಯಾನ್ಸ್ ಮಾಡಲು ಆಗಲ್ಲ.

ಅಪ್ಪು ಸಿನಿಮಾದಿಂದ ನೆನಪಾಗುವುದು ಅಶ್ವಿನಿ, ಪೂರಿ ಜಗನ್ನಾಥ್ ಸರ್, ಮಹೇಶ್ ಬಾಬು ಆ ಸಿನಿಮಾಗೆ ಅಸೋಸಿಯೇಟ್ ಆಗಿದ್ದರು ಹಾಗೂ ದತ್ತು ಸೋನು ಕ್ಯಾಮೆರಾ ಮೆನ್ ಆಗಿದ್ದರು. ಗುರು ಸರ್ ಮ್ಯೂಸಿಕ್ ಸೂಪರ್ ಆಗಿತ್ತು. ನಿಜ ಹೇಳಬೇಕು ಅಂದ್ರೆ ಅಪ್ಪು ಸಿನಿಮಾ ನನ್ನ ಜೀವನದ ಮರೆಯಲಾಗದ ಸಿನಿಮಾಗಳಲ್ಲಿ ಒಂದು. 23 ವರ್ಷಗಳ ಆದ್ಮೇಲೆ ಪುನೀತ್ ರಾಜ್‌ಕುಮಾರ್ 50ನೇ ಹುಟ್ಟುಹಬ್ಬಕ್ಕೆ ರಿಲೀಸ್ ಆಗುತ್ತಿದೆ ಅದಕ್ಕಿಂತ ಏನ್ ಸ್ಪೆಷಲ್ ಬೇಕು? ಖಂಡಿತಾ ಮೊದಲ ದಿನವೇ ಫಸ್ಟ್ ಶೋ ನೋಡಲು ಹೋಗುತ್ತೀನಿ' ಎಂದು ರಕ್ಷಿತಾ ಹೇಳಿದ್ದಾರೆ.

# ಸಾರ್ವಜನಿಕವಾಗಿ ಕಾಣಿಸಿಕೊಂಡು ಭಾವುಕಳಾದ ಧನಶ್ರೀ



ಟೀಂ ಇಂಡಿಯಾ ಕ್ರಿಕೆಟಿಗ ಯಜುವೇಂದ್ರ ಚಹಾಲ್ ಹಾಗೂ ಧನಶ್ರೀ ವರ್ಮಾ ಪರಸ್ಪರ ದೂರವಾಗಿದ್ದಾರೆ. ಅಧಿಕೃತ ಘೋಷಣೆ ಇನ್ನಷ್ಟೇ ಹೊರಬೀಳಬೇಕಿದೆ. ಆದರೆ ಇಬ್ಬರೂ ಬೇರೆ ಬೇರೆಯಾಗಿದ್ದಾರೆ. ಚಹಾಲ್‌ನಿಂದ ದೂರವಾದ ಬಳಿಕ ಧನಶ್ರೀ ವರ್ಮಾ ಪ್ರತಿ ಬಾರಿ ಸುದ್ದಿಯಾಗುತ್ತಿದ್ದಾರೆ.

ಇತ್ತೀಚೆಗೆ ಯಜುವೇಂದ್ರ ಚಹಾಲ್ ಚಾಂಪಿಯನ್ಸ್ ಟ್ರೋಫಿ ಫೈನಲ್ ಪಂದ್ಯದ ವೇಳ ಗ್ಯಾಲರಿಯಲ್ಲಿ ಆರ್‌ಜೆ ಮಹ್ವಾಶ್ ಜೊತೆ ಕಾಣಿಸಿಕೊಂಡಿದ್ದರು. ಈ ವೇಳೆ ಧನಶ್ರೀ ವರ್ಮಾ ಮತ್ತೆ ಸುದ್ದಿಯಾಗಿದ್ದರು. ಚಹಲ್‌ನಿಂದ ದೂರವಾದ ಬಳಿಕ ಇದೇ ಮೊದಲ ಬಾರಿಗೆ ಸಾರ್ವಜನಿಕವಾಗಿ ಮಾಧ್ಯಮದ ಮುಂದೆ ಧನಶ್ರೀ ವರ್ಮಾ ಕಾಣಿಸಿಕೊಂಡಿದ್ದಾರೆ. ಈ ವೇಳೆ ಧನಶ್ರೀ ವರ್ಮಾ ಭಾವುಕರಾಗಿದ್ದಾರೆ.

ಧನಶ್ರೀ ವರ್ಮಾ ಭಾವುಕರಾಗಿರುವುದಕ್ಕೆ ಕಾರಣವೂ ಬಹಿರಂಗವಾಗಿದೆ.

ಮಾಧ್ಯಮಕ್ಕೆ ಪ್ರತಿಕ್ರಿಯೆ ನೀಡಿದ ಧನಶ್ರೀ ವರ್ಮಾ ನಾನು ತುಂಭಾ ಭಾವುಕಳಾಗಿದ್ದೇನೆ, ಭಾವುಕತೆಯ ಅನುಭವವಾಗುತ್ತಿದೆ ಎಂದು ಧನಶ್ರೀ ವರ್ಮಾ ಹೇಳಿದ್ದಾರೆ. ಸಾರ್ವಜನಿಕವಾಗಿ ಕಾಣಿಸಿಕೊಂಡು ಭಾವುಕರಾಗಿರುವುದಾಗಿ ಧನಶ್ರೀ ವರ್ಮಾ ಹೇಳಿದ ಬೆನ್ನಲ್ಲೇ ಸೋಶಿಯಲ್ ಮೀಡಿಯಾದಲ್ಲಿ ಕಮೆಂಟ್‌ಗಳು ವ್ಯಕ್ತವಾಗಿದೆ. ಕೈಯಲ್ಲಿರುವ ದುಡ್ಡು ಖಾಲಿಯಾಗಿರುವ ಸಾಧ್ಯತೆ ಇದೆ. ಹೀಗಾಗಿ ಭಾವುಕಳಾಗಿರುವ ಸಾಧ್ಯತೆ ಇದೆ ಎಂದು ಪ್ರತಿಕ್ರಿಯಿಸಿದ್ದಾರೆ.

**ಧನಶ್ರೀ ವರ್ಮಾ ಭಾವುಕಳಾಗಿದ್ದೇಕೆ?**

ಧನಶ್ರಿ ವರ್ಮಾ ಭಾವುಕರಾಗಲು ಪ್ರಮುಖ ಕಾರಣವಿದೆ. ಬಾಲಿವುಡ್ ನಟ ಅಭಿಷೇಕ್ ಅಭಿನಯದ ಬಿ ಹ್ಯಾಪಿ ಚಿತ್ರ ಪ್ರದರ್ಶನಕ್ಕೆ ಧನಶ್ರೀ ವರ್ಮಾ ಹಾಜರಾಗಿದ್ದರು. ಮುಂಬೈನಲ್ಲಿ ಈ ಚಿತ್ರವನ್ನು ಧನಶ್ರೀ ವರ್ಮಾ ವೀಕ್ಷಿಸಿದ್ದಾರೆ. ಚಿತ್ರ ವೀಕ್ಷಿಸಿ ಹೊರಬಂದ ಧನಶ್ರೀ ವರ್ಮಾ ಬಳಿ ಮಾಧ್ಯಮ ಪ್ರಶ್ನಿಸಿತ್ತು. ಚಿತ್ರದ ಕುರಿತು ಕೇಳಿತ್ತು. ಇದಕ್ಕೆ ಉತ್ತರಿಸಿದ ಧನಶ್ರೀ ವರ್ಮಾ ಚಿತ್ರ ಉತ್ತಮವಾಗಿದೆ. ನಾನು ತೀರಾ ಭಾವುಕಳಾಗಿದ್ದೇನೆ ಎಂದಿದ್ದಾರೆ. ಅಭಿಷೇಕ್ ಬಚ್ಚನ್ ಅಭಿನಯದ ಬಿ ಹ್ಯಾಪಿ ಚಿತ್ರ ವೀಕ್ಷಿಸಿ ಧನಶ್ರೀ ವರ್ಮಾ ಭಾವುಕರಾಗಿದ್ದಾರೆ.

ಚಾಂಪಿಯನ್ಸ್ ಟ್ರೋಫಿ ಫೈನಲ್ ಪಂದ್ಯದ ಬಳಿಕ ಚಹಾಲ್ ಹಾಗೂ ಆರ್‌ಜೆ ಮಹ್ವಾಶ್ ವಿಡಿಯೋಗಳು ಭಾರಿ ವೈರಲ್ ಆಗಿತ್ತು. ಇದರ ಬೆನ್ನಲ್ಲೇ ಧನಶ್ರೀ ವರ್ಮಾ ಚಹಾಲ್ ಜೊತೆಗಿನ ಫೋಟೋಗಳನ್ನು ಪ್ರೈವೇಟ್ ಮಾಡಿದ್ದರು.

ಆದರೆ ಕೆಲವೇ ದಿನದಲ್ಲಿ ಮತ್ತೆ ರಿಸ್ಟೋರ್ ಮಾಡಿದ್ದಾರೆ. ಈ ಮೂಲಕ ಅಭಿಮಾನಿಗಳ ತಲೆಗೆ ಹುಳ ಬಿಟ್ಟಿದ್ದರು. ಯುಜುವೇಂದ್ರ ಚಹಾಲ್ ಹಾಗೂ ಧನಶ್ರೀ ವರ್ಮಾ ಅವರ ವಿಚ್ಛೇದನ ಅರ್ಜಿ ಕೋರ್ಟ್ ಮೆಟ್ಟಿಲೇರಿದೆ ಅನ್ನೋ ಮಾತುಗಳು ಕೇಳಿಬಂದಿತ್ತು. ಇದಕ್ಕೆ ಪೂರಕವಾಗಿ, ಇಬ್ಬರು ಬೇರೆ ಬೇರೆಯಾಗಿ ವಾಸಿಸುತ್ತಿದ್ದಾರೆ. ಹೀಗಾಗಿ ಅನುಮಾನಗಳು ಹೆಚ್ಚಾಗುತ್ತಿದೆ.

ಧನಶ್ರೀ ವರ್ಮಾ ಹಾಗೂ ಚಹಾಲ್ ನಡುವೆ ಎಲ್ಲವೂ ಸರಿಯಿಲ್ಲ ಅನ್ನೋದು ಕಳೆದೊಂದು ವರ್ಷದಿಂದ ಪದೇ ಪದೇ ಕೇಳಿಬರುತ್ತಿದೆ. ಹೀಗಾಗಿ ಇವರಿಬ್ಬರ ಕುರಿತು ಹಲವು ಸುದ್ದಿಗಳು ಹರಿದಾಡುತ್ತಿದೆ.

# ನಿರ್ದೇಶಕ ಅಟ್ಲಿಗೆ ಪದೇಪದೇ ವಿಘ್ನ



ಖ್ಯಾತ ನಿರ್ದೇಶಕ ಅಟ್ಲಿ ಅವರಿಗೆ ಸಖತ್ ಬೇಡಿಕೆ ಇದೆ ಎಂಬುದು ನಿಜ. ಕಾಲಿವುಡ್‌ನಲ್ಲಿ ಹಿಟ್ ಸಿನಿಮಾಗಳನ್ನು ನೀಡಿದ ಅವರು ಬಾಲಿವುಡ್‌ನಲ್ಲೂ ಹೆಸರು ಮಾಡಿದ್ದಾರೆ. ಶಾರುಖ್ ಖಾನ್ ಜೊತೆ 'ಜವಾನ್' ಸಿನಿಮಾ ಮಾಡಿ ಯಶಸ್ಸು ಕಂಡಿದ್ದಾರೆ.

ಆ ಬಳಿಕ ಅಟ್ಲಿ ಜೊತೆ ಸಿನಿಮಾ ಮಾಡಲು ಬೇರೆ ಬೇರೆ ಹೀರೋಗಳು ಕೂಡ ಆಸಕ್ತಿ ತೋರಿಸಿದರು. ಸಲ್ಮಾನ್ ಖಾನ್ ಜೊತೆ ಅಟ್ಲಿ ಸಿನಿಮಾ ಮಾಡುತ್ತಾರೆ ಎಂದು ಹೇಳಲಾಗಿತ್ತು. ಆದರೆ ಆ ಚಿತ್ರಕ್ಕೆ ವಿಘ್ನ ಎದುರಾದಂತಿದೆ. ಅಷ್ಟೇ ಅಲ್ಲದೇ, ಟಾಲಿವುಡ್‌ನಲ್ಲಿ ಅಲ್ಲು ಅರ್ಜುನ್ ಜೊತೆ ಅಟ್ಲಿ ಮಾಡಬೇಕಿರುವ ಚಿತ್ರಕ್ಕೂ ತೊಂದರೆ ಉಂಟಾಗಿದೆ.

ಅಲ್ಲು ಅರ್ಜುನ್ ಅವರು 'ಪುಷ್ಪ 2' ಸಕ್ಸಸ್ ಬಳಿಕ ಜಾಗತಿಕ ಮಟ್ಟದಲ್ಲಿ ಗುರುತಿಸಿಕೊಂಡಿದ್ದಾರೆ. ಅವರು ನಟಿಸಲಿರುವ ಹೊಸ ಸಿನಿಮಾ ನಿರ್ದೇಶನ ಮಾಡುವುದು ನಿಜಕ್ಕೂ ಸವಾಲಿನ ಕೆಲಸ. ನಿರ್ದೇಶಕ ಅಟ್ಲಿ ಜೊತೆ ಅಲ್ಲು ಅರ್ಜುನ್ ಅವರು ಕೈ ಜೋಡಿಸಿರುವ ಬಗ್ಗೆ ಸುದ್ದಿ ಕೇಳಿಬಂದಿತ್ತು. ಆದರೆ ಈ ಚಿತ್ರಕ್ಕೆ ಪಾತ್ರವರ್ಗದ ಆಯ್ಕೆಯೇ ಕಷ್ಟ ಆಗಿದೆ ಎಂದು ಹೇಳಲಾಗುತ್ತಿದೆ. ಅಲ್ಲದೇ ಅಟ್ಲಿ ಅವರು ದೊಡ್ಡ ಮೊತ್ತದ ಸಂಭಾವನೆ ಕೇಳುತ್ತಿರುವುದು ಕೂಡ ಸಮಸ್ಯೆ ಆಗಿದೆ.

ಅಟ್ಲಿ ಅವರು ಸಿದ್ಧಮಾಡಿಕೊಂಡಿರುವ ಕಥೆಯಲ್ಲಿ ಇಬ್ಬರು ಹೀರೋಗಳ ಪಾತ್ರ ಬರಲಿದೆ. ಅಲ್ಲು ಅರ್ಜುನ್ ಜೊತೆ ಇನ್ನೊರ್ವ ನಟ ಎರಡನೇ ಹೀರೋ ಆಗಿ ಬಣ್ಣ ಹಚ್ಚಬೇಕಿದೆ. ಈ ಮೊದಲು ಆ ಪಾತ್ರಕ್ಕೆ ಶಿವಕಾರ್ತಿಕೇಯನ್ ಆಯ್ಕೆ ಆಗುತ್ತಾರೆ ಎಂಬ ಸುದ್ದಿ ಹಬ್ಬಿತ್ತು. ಆದರೆ ಅದು ಖಚಿತ ಆದಂತೆ ಕಾಣುತ್ತಿಲ್ಲ. ಹೊಸ ವರದಿಗಳ ಪ್ರಕಾರ, 2ನೇ ಹೀರೋ ಆಗಿ ನಟಿಸಲು ಶಿವಕಾರ್ತಿಯನ್ ಒಪ್ಪಿಕೊಂಡಿಲ್ಲವಂತೆ. ಅದು ಚಿತ್ರತಂಡಕ್ಕೆ ತಲೆನೋವಾಗಿದೆ.

# ಕಾನ್ಸ್ ಫಿಲ್ಮ್ ಫೆಸ್ಟಿವಲ್ RRR ಬ್ಯೂಟಿಗೆ ಗೋಲ್ಡನ್ ಚಾನ್ಸ್!



ಕಳೆದ ವರ್ಷ ಮೆಟ್ ಗಾಲಾದಲ್ಲಿ ಮಿಂಚಿದ ಬಾಲಿವುಡ್ ಸ್ಟಾರ್ ಆಲಿಯಾ ಭಟ್ ಈಗ ಮತ್ತೊಂದು ಇಂಟರ್ನ್ಯಾಷನಲ್ ಈವೆಂಟ್‌ಗೆ ರೆಡಿಯಾಗುತ್ತಿದ್ದಾರೆ.

'ರಾಜಿ' ಹೀರೋಯಿನ್ 2025ರ ಕೇನ್ಸ್ ಫಿಲ್ಮ್ ಫೆಸ್ಟಿವಲ್‌ನಲ್ಲಿ ಹೆಜ್ಜೆ ಇಡಲಿದ್ದಾರೆ ಅಂತ ಕನ್ಫರ್ಮ್ ಆಗಿದೆ. ಈ ಹಿಂದೆ ಸಾಕಷ್ಟು ಇಂಡಿಯನ್ ಸೆಲೆಬ್ರಿಟಿಗಳು ಇಲ್ಲಿ ಮಿಂಚಿದ್ದಾರೆ. ಮುಂಬೈನಲ್ಲಿ ನಡೆದ ಒಂದು ಮೀಡಿಯಾ ಸಭೆಯಲ್ಲಿ ಆಲಿಯಾ ಮಾತಾಡ್ತಾ, "ನಾನು ಇದಕ್ಕಾಗಿ ಕಾಯ್ತಾ ಇದ್ದೀನಿ" ಅಂತ ಹೇಳಿದ್ರು.

ಮೇ 24, 2025ರವರೆಗೆ ನಡೆಯಲಿರುವ 78ನೇ ಕೇನ್ಸ್ ಫಿಲ್ಮ್ ಫೆಸ್ಟಿವಲ್‌ಗೆ ಇಂಡಿಯನ್ ಸ್ಟಾರ್ಸ್ ಯಾವಾಗಲಿಂದನೋ ಬರ್ತಿದ್ದಾರೆ. ಐಶ್ವರ್ಯಾ ರೈ ಬಚ್ಚನ್, ದೀಪಿಕಾ ಪಡುಕೋಣೆ, ಸೋನಮ್ ಕಪೂರ್ ತರಹದವರು ರೆಗ್ಯುಲರ್ ಆಗಿ ಬರ್ತಾರೆ. ಈಗ ಆಲಿಯಾ ಕೂಡ ಈ ಲಿಸ್ಟ್ ಸೇರಲಿದ್ದಾರೆ.

2024ರ ಮೆಟ್ ಗಾಲಾದಲ್ಲಿ ಆಲಿಯಾ ಸಬ್ಯಸಾಚಿ ಸೀರೆಯಲ್ಲಿ ಮಿಂಚಿದ್ರು. ಆ ಸೀರೆಗೆ ಇದ್ದ 23 ಅಡಿ ಉದ್ದದ ಟ್ರೈನ್ ಎಲ್ಲರ ಗಮನ ಸೆಳೆಯಿತು. ತನ್ನ ಇಂಡಿಯನ್ ಕಲ್ಚರ್ ಅನ್ನು ಮಾಡರ್ನ್ ಆಗಿ ಪ್ರೆಸೆಂಟ್ ಮಾಡಿದ್ರು.


# ಐಪಿಎಲ್‌ನಿಂದ 2 ವರ್ಷ ನಿಷೇಧ

ಐಪಿಎಲ್ ಹರಾಜಿನಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ತಂಡಕ್ಕೆ ಆಯ್ಕೆಯಾದ ನಂತರ, ಹ್ಯಾರಿ ಬ್ರೂಕ್ ತಮ್ಮ ಹೆಸರನ್ನು ಹಿಂತೆಗೆದುಕೊಂಡ ಕಾರಣ, ಬಿಸಿಸಿಐ ಅವರಿಗೆ ಎರಡು ವರ್ಷಗಳ ನಿಷೇಧ ವಿಧಿಸಿದೆ.

ಬಿಸಿಸಿಐನ ಹೊಸ ನೀತಿಯ ಪ್ರಕಾರ, ಹರಾಜಿನಲ್ಲಿ ಆಯ್ಕೆಯಾದ ನಂತರ ಹಿಂದೆ ಸರಿದ ಆಟಗಾರರಿಗೆ ಈ ಶಿಕ್ಷೆ ಅನ್ವಯಿಸುತ್ತದೆ. ಈ ನಿಷೇಧವು 2025ರ ಐಪಿಎಲ್ ಹರಾಜು ಸೇರಿದಂತೆ ಎರಡು ವರ್ಷಗಳವರೆಗೆ ಅನ್ವಯಿಸುತ್ತದೆ.

ಈ ಮೊದಲೆ ಊಹಿಸಿದಂತೆ, ಐಪಿಎಲ್‌ನಿಂದ ಹಿಂದೆ ಸರಿದಿದ್ದ ಇಂಗ್ಲೆಂಡ್‌ನ ಆಕ್ರಮಣಕಾರಿ ಬ್ಯಾಟ್ಸ್‌ಮನ್ ಹ್ಯಾರಿ ಬ್ರೂಕ್ ಅವರನ್ನು ಮುಂದಿನ ಎರಡು ವರ್ಷಗಳ ಕಾಲ ಐಪಿಎಲ್‌ನಿಂದ ನಿಷೇಧಿಸಲಾಗಿದೆ. ಮಂಡಳಿಯ ಹೊಸ ನೀತಿಯ ಪ್ರಕಾರ, ಬ್ರೂಕ್ ಮುಂದಿನ ಎರಡು ವರ್ಷಗಳ ಕಾಲ ಹರಾಜಿನಲ್ಲಿ ಭಾಗವಹಿಸಲು ಸಾಧ್ಯವಾಗುವುದಿಲ್ಲ. ಈ ಬಗ್ಗೆ ಬಿಸಿಸಿಐ, ಈಗಾಗಲೇ ಇಂಗ್ಲೆಂಡ್ ಮತ್ತು ವೇಲ್ಸ್ ಕ್ರಿಕೆಟ್ ಮಂಡಳಿಗೆ (ಇಸಿಬಿ) ತಿಳಿಸಿದೆ ಎಂದು ವರದಿಯಾಗಿದೆ.

ವಾಸ್ತವವಾಗಿ, ಬ್ರೂಕ್ ಇತ್ತೀಚೆಗೆ ಕೊನೆಯ ಕ್ಷಣದಲ್ಲಿ ಈ ಬಾರಿಯ ಐಪಿಎಲ್‌ನಿಂದ ತನ್ನ ಹೆಸರನ್ನು ಹಿಂತೆಗೆದುಕೊಂಡಿದ್ದರು. ಇದೀಗ ಈ ತಪ್ಪಿಗೆ ಶಿಕ್ಷೆಯಾಗಿ ಬಿಸಿಸಿಐ, ಹ್ಯಾರಿ ಬ್ರೂಕ್‌ಗೆ ನಿಷೇಧದ ಶಿಕ್ಷೆ ವಿಧಿಸಿದೆ. 2 ಕೋಟಿ ರೂ ಮೂಲ ಬೆಲೆಯೊಂದಿಗೆ ಐಪಿಎಲ್ ಹರಾಜಿಗೆ ತಮ್ಮ ಹೆಸರನ್ನು ನೋಂದಾಯಿಸಿಕೊಂಡಿದ್ದ ಬ್ರೂಕ್ ಅವರನ್ನು ಡೆಲ್ಲಿ ಕ್ಯಾಪಿಟಲ್ಸ್ ಫ್ರಾಂಚೈಸಿ 6.25 ಕೋಟಿ



ರೂ. ನೀಡಿ ತಂಡಕ್ಕೆ ಸೇರಿಸಿಕೊಂಡಿತ್ತು.

ವಾಸ್ತವವಾಗಿ 2025 ರ ಐಪಿಎಲ್ ಹರಾಜಿಗೂ ಮುನ್ನ ಬಿಸಿಸಿಐ, ಪಂದ್ಯಾವಳಿಗೆ ಸಂಬಂಧಿಸಿದಂತೆ ಹಲವು ನಿಯುಮಗಳನ್ನು ಮಾಡಿತ್ತು. ಆ ನಿಯಮಗಳ ಪ್ರಕಾರ, ಯಾವುದೇ ಆಟಗಾರ ಹರಾಜಿಗೆ ತಮ್ಮ ಹೆಸರನ್ನು ನೋಂದಾಯಿಸಿಕೊಂಡು ಯಾವುದಾದರೂ ತಂಡವನ್ನು ಸೇರಿಕೊಂಡ ಬಳಿಕ ಪಂದ್ಯಾವಳಿಯಿಂದ ಹಿಂದೆ ಸರಿದರೆ ಅವರನ್ನು 2 ಸೀಸನ್‌ವರೆಗೆ ಪಂದ್ಯಾವಳಿ ಮತ್ತು ಹರಾಜಿನಲ್ಲಿ ಭಾಗವಹಿಸುವುದರಿಂದ ನಿಷೇಧಿಸಲು ತೀರ್ಮಾನಿಸಲಾಗಿತ್ತು.

ಬಿಸಿಸಿಐ ಅಧಿಕೃತವಾಗಿ ಇಸಿಬಿ ಮತ್ತು ಹ್ಯಾರಿ ಬ್ರೂಕ್‌ಗೆ 2 ವರ್ಷಗಳ ನಿಷೇಧದ ಬಗ್ಗೆ ತಿಳಿಸಿದೆ. 'ಬಿಸಿಸಿಐ ತನ್ನ ನೀತಿಯ ಪ್ರಕಾರ, ಬ್ರೂಕ್ ಮೇಲಿನ ಎರಡು ವರ್ಷಗಳ ನಿಷೇಧದ ಕುರಿತು ಇಸಿಬಿ ಮತ್ತು ಬ್ರೂಕ್‌ಗೆ ಅಧಿಕೃತ ಮಾಹಿತಿಯನ್ನು ಕಳುಹಿಸಿದೆ ಎಂದು ಮಂಡಳಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ ಎಂದು ವರದಿ ಮಾಡಿದೆ.

ಆದಾಗ್ಯೂ, ಹ್ಯಾರಿ ಬ್ರೂಕ್ ಐಪಿಎಲ್‌ನಿಂದ ತನ್ನ ಹೆಸರನ್ನು ಹಠಾತ್ತನೆ ಹಿಂತೆಗೆದುಕೊಂಡಿರುವುದು ಇದೇ ಮೊದಲಲ್ಲ.

ಐಪಿಎಲ್ 2024 ಕ್ಕೂ ಮುಂಚೆಯೂ ಅವರು ಇದೇ ರೀತಿ ಪಂದ್ಯಾವಳಿಯಲ್ಲಿ ಆಡಲು ನಿರಾಕರಿಸಿದ್ದರು. ವೈಯಕ್ತಿಕ ಕಾರಣಗಳನ್ನು ನೀಡಿ ಬ್ರೂಕ್ ಐಪಿಎಲ್‌ನಿಂದ ಹಿಂದೆ ಸರಿಯುತ್ತಿರುವುದು ಇದು ಸತತ ಎರಡನೇ ವರ್ಷ. ಆದಾಗ್ಯೂ, ಈ ಬಾರಿ ಬ್ರೂಕ್ ತನ್ನ ನಿರ್ಧಾರಕ್ಕೆ ಕ್ಷಮೆಯಾಚಿಸಿದ್ದಾರೆ.

ಐಪಿಎಎಲ್‌ನಿಂದ ಹಿಂದೆ ಸರಿಯುವ ಬಗ್ಗೆ ಈಗಾಗಲೇ ಮಾಹಿತಿ ನೀಡಿದ್ದ ಬ್ರೂಕ್, 'ನಾನು ತುಂಬಾ ಕಠಿಣ ನಿರ್ಧಾರವನ್ನು ತೆಗೆದುಕೊಂಡಿದ್ದೇನೆ, ಇದಕ್ಕಾಗಿ ನಾನು ಡೆಲ್ಲಿ ಕ್ಯಾಪಿಟಲ್ಸ್ ಮತ್ತು ಅದರ ಬೆಂಬಲಿಗರಲ್ಲಿ ಕ್ಷಮೆಯಾಚಿಸಲು ಬಯಸುತ್ತೇನೆ' ಎಂದು ಹೇಳಿಕೊಂಡಿದ್ದರು.

Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
Email-mussanje2010@gmail.com, Phone: 9448074878